21 February 2026 Saturday SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ನೀವು ಎಂತೆಂತಹ ಬಿರುಗಾಳಿ
ಎದುರಿಸಿದ್ದೀರೆಂದು ಈ ಜಗತ್ತು ಕೇಳುವುದಿಲ್ಲ!
ನೀವು ಹಡಗನ್ನು ದಡಕ್ಕೆ ಸುರಕ್ಷಿತವಾಗಿ
ತಂದಿದ್ದೀರಾ ಎಂದಷ್ಟೇ ವಿಚಾರಿಸುತ್ತದೆ!

-ಸ್ನೇಹಾ ಆನಂದ್

info.varthaman@gmail.com



ಎಸ್‌ಟಿಆರ್‌ಆರ್ ರಸ್ತೆಗೆ ವಿತ್ತ ಸಚಿವಾಲಯ ಹಣ ಕೊಡಲು ಒಪ್ಪಿಗೆ ನೀಡಿದೆ — ಪುಟ ಸಂ. 2



ರೈತ ಪರ ಬಜೆಟ್‌ಗೆ ಬಡಗಲಪುರ ನಾಗೇಂದ್ರ ಒತ್ತಾಯ — ಪುಟ ಸಂ. 3



ಶ್ರದ್ಧೆ, ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸಿ: ರಮೇಶ್ ಬಂಡಿಸಿದ್ದೇಗೌಡ — ಪುಟ ಸಂ. 4

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 103 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

# ಮುಡಾ ಕೇಸ್: ಸ್ನೇಹಮಯಿ ಬಂಧನ

## ನಕಲಿ ದಾಖಲೆ ಸೃಷ್ಟಿ ಆರೋಪ | ಮುಡಾ ಮಾಜಿ ಆಯುಕ್ತ ಡಿ.ಬಿ.ನಟೇಶ್ ದೂರು

**ಮೈಸೂರು:** ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದಿರುವ ಅಕ್ರಮ ನಿವೇಶನ ಹಂಚಿಕೆ ಪ್ರಕರಣದ ವಿರುದ್ಧ ನಿರಂತರ ಹೋರಾಟ ಮಾಡಿದ್ದ ಸಾಮಾಜಿಕ ಹೋರಾಟಗಾರ ಸ್ನೇಹಮಯಿ ಕೃಷ್ಣ ಅವರನ್ನು ಬೆಂಗಳೂರು ಸಿಸಿಬಿ ಪೊಲೀಸರು ಶುಕ್ರವಾರ ಬಂಧಿಸಿದ್ದಾರೆ.

ಮುಡಾ ಮಾಜಿ ಆಯುಕ್ತ, ಕೆಎಎಸ್ ಅಧಿಕಾರಿ ಡಿ.ಬಿ.ನಟೇಶ್ ಅವರು ನೀಡಿರುವ ದೂರಿನ ಮೇರೆಗೆ ಸ್ನೇಹಮಯಿ ಕೃಷ್ಣ ಅವರನ್ನು ಸಿಸಿಬಿ ಪೊಲೀಸರು ಶುಕ್ರವಾರ ಬಂಧಿಸಿದರು. ಮೈಸೂರಿನ ಸ್ನೇಹಮಯಿ ಕೃಷ್ಣ ಅವರು ತಮ್ಮ ಫೇಸ್ ಬುಕ್ ಖಾತೆಯಲ್ಲಿ ನನ್ನ ಫೋಟೊ, ನಕಲಿ ದಾಖಲೆಗಳು ಹಾಗೂ ಧ್ವನಿ ಕ್ಲಿಪ್ ಹಾಕಿ ಅಪಪ್ರಚಾರ ಮಾಡಿದ್ದಾರೆ ಎಂದು ಆರೋಪಿಸಿ ಡಿ.ಬಿ.ನಟೇಶ್ ದೂರು ನೀಡಿದ್ದರು.

ಸ್ನೇಹಮಯಿ ಕೃಷ್ಣ ನಟೇಶ್ ವಿರುದ್ಧ ಗಂಭೀರ ಆರೋಪ ಮಾಡಿದ್ದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಒಂದೂವರೇ ಕೋಟಿ ಹಣ ನೀಡಿ, ನಟೇಶ್ ಮುಂಬಡ್ತಿ ತೆಗೆದುಕೊಂಡಿದ್ದಾರೆ ಎಂದು ಆರೋಪಿಸಿದ್ದರು. ಈ ಸಂಬಂಧ ಮುಡಾ ಮಾಜಿ ಆಯುಕ್ತ ನಟೇಶ್ ಬೆಂಗಳೂರು ಪೊಲೀಸ್ ಕಮೀಷನರ್ ಸೀಮಂತ್ ಕುಮಾರ್ ಸಿಂಗ್ ಅವರಿಗೆ ದೂರು ನೀಡಿದ್ದರು.

ದೂರಿನ ಅನ್ವಯ ಪರಿಶೀಲನೆ ನಡೆಸಿ ಕ್ರಮ ಕೈಗೊಳ್ಳುವಂತೆ ಪೊಲೀಸ್ ಆಯುಕ್ತರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದ್ದರು. ಸ್ನೇಹಮಯಿ ಕೃಷ್ಣ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದ ಬೆಂಗಳೂರು ಸೈಬರ್ ಪೊಲೀಸರು ಇಂದು ಬಂಧಿಸಿದ್ದಾರೆ.







### ನಿವಾಸ, ಕಚೇರಿ ಮೇಲೆ ದಾಳಿ

ಮೈಸೂರು: ನಗರದ ಭೈರವೇಶ್ವರ ನಗರದಲ್ಲಿರುವ ಸ್ನೇಹಮಯಿ ಕೃಷ್ಣ ಅವರ ಕಚೇರಿ ಹಾಗೂ ಮನೆ ಬೆಂಗಳೂರು ಪೊಲೀಸರು ಶುಕ್ರವಾರ ದಾಳಿ ಮಾಡಿ ತಪಾಸಣೆ ನಡೆಸಿದರು. ಮುಡಾ ಮಾಜಿ ಆಯುಕ್ತ, ಕೆಎಎಸ್ ಅಧಿಕಾರಿ ಡಿ.ಬಿ.ನಟೇಶ್ ಅವರು ನೀಡಿದ ದೂರಿನ ಮೇರೆಗೆ ಸ್ನೇಹಮಯಿ ಕೃಷ್ಣ ಅವರನ್ನು ಸಿಸಿಬಿ ಪೊಲೀಸರು ಬೆಂಗಳೂರಿನಲ್ಲಿ ಬಂಧಿಸಿದ್ದಾರೆ. ಮತ್ತೊಂದು ತಂಡ ಅವರ ಮನೆಯಲ್ಲಿ ತಪಾಸಣೆ ನಡೆಸುತ್ತಿದೆ. ಕೃಷ್ಣ ಮನೆಯವರ ವಿಡಿಯೊ ಹೇಳಿಕೆಯನ್ನು ಪೊಲೀಸರು ದಾಖಲಿಸಿಕೊಂಡಿದ್ದಾರೆ. ತನಿಖೆಯ ಸಮಯದಲ್ಲಿ ದೂರುದಾರರು ಮತ್ತು ಸಾಮಾಜಿಕ ಮಾಧ್ಯಮ ವೇದಿಕೆಗಳಿಂದ ಸಾಕ್ಷ್ಯಗಳನ್ನು ಸಂಗ್ರಹಿಸಲಾಯಿತು. ಫೇಸ್ ಬುಕ್‌ನಲ್ಲಿ ಅಪ್‌ಲೋಡ್ ಮಾಡಲಾದ ಆಡಿಯೊ ಕ್ಲಿಪ್ ಅನ್ನು ಪರಿಶೀಲಿಸಲಾಯಿತು ಎಂದು ಬೆಂಗಳೂರು ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರ ಕಚೇರಿ ಹೇಳಿಕೆಯಲ್ಲಿ ತಿಳಿಸಿದೆ. ನ್ಯಾಯಾಲಯ ಹೊರಡಿಸಿದ ಸರ್ಚ್ ವಾರಂಟ್‌ನ ನಂತರ, ಪೊಲೀಸರು ಆರೋಪಿಯ ನಿವಾಸದಲ್ಲಿ ಶೋಧ ನಡೆಸಿ ಸಂಬಂಧಿತ ದಾಖಲೆಗಳನ್ನು ವಶಪಡಿಸಿಕೊಂಡಿದ್ದಾರೆ. ಸ್ನೇಹಮಯಿ ಕೃಷ್ಣ ಅವರಿಗೆ ವಿಚಾರಣೆಗೆ ಹಾಜರಾಗಲು ನೋಟಿಸ್ ನೀಡಲಾಗಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಅವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಾಜಿ ಮುಡಾ ಆಯುಕ್ತ ಡಿ.ಬಿ.ನಟೇಶ್ ಅವರು ನನ್ನನ್ನು ಸಂಪರ್ಕಿಸುವ ಪ್ರಯತ್ನ ಮಾಡಿದ್ದರು. ನನಗೆ ಹಣದ ಆಮಿಷವೊಡ್ಡಿ ಮುಡಾ ಹಗರಣವನ್ನು ಮುಚ್ಚಿ ಹಾಕಲು ಪ್ರಯತ್ನ

ಪುಟ 2ಕ್ಕೆ

### ಸರ್ಕಾರದ ದುರಾಡಳಿತದ ಪರಮಾವಧಿ: ಆರ್.ಅಶೋಕ್

ಬೆಂಗಳೂರು: ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಬಂಧನಕ್ಕೆ ವಿಪಕ್ಷ ನಾಯಕ ಆರ್.ಅಶೋಕ್ ಕಿಡಿಕಾರಿದರು. ಸ್ನೇಹಮಯಿ



ಕೃಷ್ಣ ಬಂಧನ ಸರ್ಕಾರದ ದುರಾಡಳಿತದ ಪರಮಾವಧಿ. ಕರ್ನಾಟಕದಲ್ಲಿ ಸರ್ಕಾರ ತುರ್ತು ಪರಿಸ್ಥಿತಿ ಜಾರಿಗೆ ತಂದಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಮುಡಾ ಕೇಸ್ ವಿರುದ್ಧ ಸ್ನೇಹಮಯಿ ಕೃಷ್ಣ ಹೋರಾಟ ಮಾಡುತ್ತಿದ್ದರು. ಇದನ್ನು ಸರ್ಕಾರಕ್ಕೆ ಸಹಿಸೋಕೆ ಆಗಿಲ್ಲ. ಗಾಂಧಿ ಆದರ್ಶದ ವಿರುದ್ಧ ಈ ಸರ್ಕಾರ ನಡೆದುಕೊಳ್ತಿದೆ. ನ್ಯಾಯದ ಕತ್ತು ಹಿಸಿಕೋ ಕೆಲಸ ಮಾಡ್ತಿದೆ. ಈ ಸರ್ಕಾರ ಅಂತ ಕಿಡಿಕಾರಿದರು.

ಪುಟ 2ಕ್ಕೆ

## ಬಸ್ ಪ್ರಯಾಣ ದರ ಏರಿಕೆ ಸದ್ಯಕ್ಕಿಲ್ಲ: ಸಚಿವ ರಾಮಲಿಂಗರೆಡ್ಡಿ

**ಬೆಂಗಳೂರು:** ರಾಜ್ಯದಲ್ಲಿ ಸದ್ಯಕ್ಕೆ ಕೆಎಸ್ ಆರ್‌ಟಿಸಿ ಬಸ್ ಪ್ರಯಾಣ ದರವನ್ನು ಹೆಚ್ಚಿಸುವ ಆಲೋಚನೆ ಇಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿದೆ. ಇದರಿಂದಾಗಿ ರಾಜ್ಯದ ಪುರುಷ ಪ್ರಯಾಣಿಕರಿಗೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ.

ಈಗ ಬಸ್ ದರ ಏರಿಕೆ ಮಾಡುವ ಪ್ರಶ್ನೆಯೇ ಇಲ್ಲ, ಮುಂದಿನ ಪರಿಸ್ಥಿತಿ ನೋಡಿ ನಿರ್ಧಾರ ಕೈಗೊಳ್ಳಲಾಗುತ್ತದೆ. ಕಳೆದ ವರ್ಷದ ಜನವರಿಯಲ್ಲಿ ಬಸ್ ಪ್ರಯಾಣ ದರವನ್ನು ಶೇಕಡಾ 15ರಷ್ಟು ಹೆಚ್ಚಿಸಲಾಗಿತ್ತು. ಬಳಿಕ ಪ್ರತಿವರ್ಷ ದರ ಪರಿಷ್ಕರಣೆ ಮಾಡುವ ಕುರಿತು ಚರ್ಚೆಗಳು ನಡೆದಿದ್ದವು ಎಂದು ಸಾರಿಗೆ ಸಚಿವ ರಾಮಲಿಂಗರೆಡ್ಡಿ ತಿಳಿಸಿದರು.

ಜಲಮಂಡಳಿ, ವಿದ್ಯುತ್ ದರ ಹಾಗೂ ಮೆಟ್ರೋ ಮಾದರಿಯಲ್ಲಿ ಬಸ್ ದರ ನಿಗದಿ ಮಾಡುವ ಯೋಚನೆಯೂ ಸರ್ಕಾರದ ಮುಂದೆ ಇತ್ತು. ದರ ಏರಿಕೆ ಕುರಿತು ನಿರ್ಧಾರ ಕೈಗೊಳ್ಳಲು ಸಮಿತಿ ರಚನೆ ಮಾಡಿ, ಅದರ ಶಿಫಾರಸು ಆಧಾರದಲ್ಲಿ ದರ ಪರಿಷ್ಕರಣೆ ಮಾಡಲು ಯೋಜಿಸಲಾಗಿತ್ತು. ಆದರೆ ಇನ್ನೂ ಸಮಿತಿ ರಚನೆಯಾಗದ ಕಾರಣ ಸದ್ಯಕ್ಕೆ ದರ ಏರಿಕೆ ಮಾಡಲ್ಲ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ ಕನಿಷ್ಠ ಮುಂದಿನ ಆರು ತಿಂಗಳು ಬಸ್ ಪ್ರಯಾಣ ದರ ಹೆಚ್ಚಳದಿಂದ ಪುರುಷ ಪ್ರಯಾಣಿಕರಿಗೆ ನಿರಾಳತೆ ದೊರೆಯಲಿದೆ. ಸಮಿತಿ ರಚನೆಯಾದ ಬಳಿಕ ಮಾತ್ರ ದರ ಏರಿಕೆ ಕುರಿತು ಅಂತಿಮ ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ ಎಂದು ಅವರು ತಿಳಿಸಿದರು.




# ಅಭಿವೃದ್ಧಿಗೆ ಎಲ್ಲರೂ ಒಟ್ಟಾಗೋಣ: ಎಚ್‌ಡಿಕೆ

- ಮಂಡ್ಯಕ್ಕೆ ಎರಡು ಕೈಗಾರಿಕೆಗಳನ್ನಾದರೂ ತರುತ್ತೇನೆ
- ಎಆರ್‌ಎಐ ಕೇಂದ್ರದಿಂದ ಒಂದು ಸಾವಿರ ಕೋಟಿ ಹೂಡಿಕೆ
- ಆದಿಚುಂಚನಗಿರಿಯಲ್ಲಿ ವಿಜ್ಞಾನಿ ಡಾ.ಸೂರಪ್ಪ ಅವರಿಗೆ 'ವಿಜ್ಞಾತಂ' ಪ್ರಶಸ್ತಿ ಪ್ರದಾನ

**ನಾಗಮಂಗಲ:** ಅಭಿವೃದ್ಧಿಯಲ್ಲಿ ರಾಜಕೀಯ ಬೆರೆಸುವ ಅಗತ್ಯವಿಲ್ಲ. ಪರಸ್ಪರ ಟೀಕೆ, ದೋಷಾರೋಪ ಮಾಡಿಕೊಳ್ಳುವ ಅಗತ್ಯವೂ ಇಲ್ಲ. ನಾವೆಲ್ಲರೂ ಸೇರಿ ಮಂಡ್ಯ ಜಿಲ್ಲೆಯನ್ನು ಅಭಿವೃದ್ಧಿಪಥದತ್ತ ಕೊಂಡೊಯ್ಯೋಣ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಹೇಳಿದರು.

ತಾಲ್ಲೂಕಿನ ಆದಿಚುಂಚನಗಿರಿ ಕ್ಷೇತ್ರದಲ್ಲಿ ಶುಕ್ರ ವಾರ ನಡೆದ 'ವಿಜ್ಞಾತಂ ಉತ್ಸವ' ಸಮಾರಂಭದಲ್ಲಿ ಪ್ರಖ್ಯಾತ ವಿಜ್ಞಾನಿ ಡಾ.ಎಂ.ಕೆ.ಸೂರಪ್ಪ ಅವರಿಗೆ ಶ್ರೀ ಆದಿಚುಂಚನಗಿರಿ ಕ್ಷೇತ್ರದ ವತಿಯಿಂದ ನೀಡಲಾಗುವ 'ವಿಜ್ಞಾತಂ' ಪ್ರಶಸ್ತಿಯನ್ನು ಪ್ರದಾನ ಮಾಡಿ ಅವರು ಮಾತನಾಡಿದರು.

ವೇದಿಕೆಯ ಮೇಲೆ ಕೂತಿದ್ದ ರಾಜ್ಯದ ಸಚಿ ವರುಗಳ ಎದುರಿನಲ್ಲಿಯೇ ರಾಜ್ಯದ ಪ್ರಗತಿಯ ಬಗ್ಗೆ ಒತ್ತಿ ಹೇಳಿದ ಸಚಿವರು, ಮಂಡ್ಯ ಜಿಲ್ಲೆ ಸಾಕಷ್ಟು ಅಭಿವೃದ್ಧಿ ಹೊಂದಿದೆ. ಮತ್ತಷ್ಟು ಅಭಿವೃದ್ಧಿ ಹೊಂ ದಬೇಕಾಗಿದೆ. ಪಕ್ಷಾತೀತವಾಗಿ



ನನ್ನನ್ನು ಈ ಕ್ಷೇತ್ರದ ಜನರು ಗೆಲ್ಲಿಸಿದ್ದಾರೆ. ಈ ಜನರಿಗೆ ದ್ರೋಹ ಮಾಡುವ ವ್ಯಕ್ತಿ ನಾನಲ್ಲ. ಶ್ರೀ ಕಾಲಭೈರವನ ಸನ್ನಿಧಿಯಲ್ಲಿ, ಗುರುಗಳ ಸಾನ್ನಿಧ್ಯದಲ್ಲಿ ಹೇಳುತ್ತಿದ್ದೇನೆ ಮಂಡ್ಯಕ್ಕೆ ಕನಿಷ್ಠಪಕ್ಷ ಎರಡು ಕೈಗಾರಿಕೆಗಳನ್ನಾದರೂ ತರುತ್ತೇನೆ ಎಂದು ಘೋಷಿಸಿದರು.

ಈಗಾಗಲೇ ನಾನು ಘೋಷಣೆ ಮಾಡಿದ್ದೇನೆ. ಮಂಡ್ಯಕ್ಕೆ 500 ಕೋಟಿ ವೆಚ್ಚದಲ್ಲಿ ಜಾಗತಿಕ ಮಟ್ಟದ ಎಆರ್‌ಎಐ ಸಂಶೋಧನಾ ಕೇಂದ್ರವನ್ನು ತರಲಾಗುವುದು. ಕೇಂದ್ರ ಬಜೆಟ್‌ನಲ್ಲೇ ಯೋಜ ನೆಗೆ

ಪುಟ 2ಕ್ಕೆ

# ಸಫಾರಿಗೆ ಷರತ್ತು ಬದ್ಧ ಅನುಮತಿ

## * ಉಲ್ಲಂಘಿಸಿದರೆ ಅಧಿಕಾರಿಗಳ ವಿರುದ್ಧ ಕ್ರಮ: ಸಚಿವ ಈಶ್ವರ್ ಖಂಡ್ರೆ ಎಚ್ಚರಿಕೆ

**ಮೈಸೂರು:** ಮಾನವ–ವನ್ಯಜೀವಿ ಸಂಘರ್ಷದ ಕಾರಣಕ್ಕೆ ಕಳೆದ ನ.7ರಂದು ಸ್ಥಗಿತಗೊಳಿಸಲಾಗಿದ್ದ ಸಫಾರಿಯನ್ನು ಫೆ.21ರಿಂದ ಷರತ್ತು ಬದ್ಧವಾಗಿ ಪುನಾರಂಭಿಸಲು ಅನುಮತಿ ನೀಡಲಾಗಿದೆ. ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು ಎಂದು ಅರಣ್ಯ ಮತ್ತು ಪರಿಸರ ಸಚಿವ ಈಶ್ವರ್ ಖಂಡ್ರೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದಲ್ಲಿ ಶುಕ್ರವಾರ ಮೈಸೂರು, ಮಂಡ್ಯ, ಕೊಡಗು ಮತ್ತು ಚಾಮರಾಜನಗರ ವಿಭಾಗದ ಅರಣ್ಯ ಇಲಾಖೆ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಶನಿವಾರದಿಂದ ಸಫಾರಿ ಪುನರಾರಂಭಿಸಲು ಅಧಿಕೃತ ಆದೇಶ ಹೊರಡಿಸಲಾಗುವುದು. ಈ ಆದೇಶದಲ್ಲಿರುವ ಷರತ್ತು ಉಲ್ಲಂಘನೆಯಾದರೆ ಸಂಬಂಧಿಸಿದ ಅಧಿಕಾರಿಗಳನ್ನೇ ಹೊಣೆ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ನ.7ಕ್ಕೆ ಮೊದಲು ಬಳಕೆಯಾಗುತ್ತಿದ್ದ ಸಫಾರಿ ವಾಹನಗಳ ಶೇ.50ರಷ್ಟು ವಾಹನ ಮತ್ತು ಸಿಬ್ಬಂದಿಯನ್ನು ಮಾತ್ರವೇ ಬಳಸಬೇಕು. ಹೆಚ್ಚಾಗಿ ಬಸ್‌ಗಳ ಮೂಲಕ ಸಫಾರಿ ನಡೆಸಬೇಕು. ಅತ್ಯಂತ ಕಡಿಮೆ ಸಂಖ್ಯೆಯಲ್ಲಿ ಕ್ಯಾಂಪರ್ ಮತ್ತು ಜೀಪ್ ಬಳಕೆ ಮಾಡಬೇಕು. ಈ ಬಗ್ಗೆ ಸ್ಪಷ್ಟ ಆದೇಶ ಹೊರಡಿಸಲಾಗುವುದು ಎಂದು ಅವರು ಸೂಚಿಸಿದರು. ಅರಣ್ಯ ಸಂರಕ್ಷಣೆ, ವನ್ಯಜೀವಿ ಸಂರಕ್ಷಣೆ ಆಗಬೇಕಾದರೆ ಸ್ಥಳೀಯರ ನೆರವು, ಸಹಕಾರ, ಸಹಯೋಗ ಅತ್ಯಂತ ಮುಖ್ಯ. ಈ ನಿಟ್ಟಿನಲ್ಲಿ ಅರಣ್ಯ ಸಿಬ್ಬಂದಿ ಸ್ಥಳೀಯರೊಂದಿಗೆ ಸೌಹಾರ್ದದಿಂದ ವರ್ತಿಸಬೇಕು. ಅವರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಅರಣ್ಯ ಸಂರಕ್ಷಣೆ ಮಾಡಬೇಕು ಎಂದು ಸಚಿವರು ಸೂಚಿಸಿದರು.

ಇಲಾಖೆ ಕಾಯಂ

ಪುಟ 2ಕ್ಕೆ



### ಮಾನವ–ವನ್ಯಜೀವಿಗಳ ಸಂಘರ್ಷ ತಡೆಗೆ ಸೂಚನೆ

ಬಂಡೀಪುರ ಮತ್ತು ನಾಗರಹೊಳೆ ಅರಣ್ಯ ಪ್ರದೇಶದಲ್ಲಿ ಮಾನವ–ವನ್ಯಜೀವಿ ಸಂಘರ್ಷ ಇರುವ ಪ್ರದೇಶವನ್ನು ಗುರುತಿಸಬೇಕು. ಆ ಪ್ರದೇಶದಲ್ಲಿ ಗಸ್ತು ಹೆಚ್ಚಿಸಬೇಕು. ವನ್ಯಜೀವಿಗಳು ವಸತಿ ಪ್ರದೇಶಕ್ಕೆ ಬಾರದಂತೆ, ಜೀವಹಾನಿ, ಬೆಳೆ ಹಾನಿ

ಪುಟ 2ಕ್ಕೆ

### ಕಾಳ್ಗಿಚ್ಚು ನಿಯಂತ್ರಣಕ್ಕೆ ತಾಕೀತು

ನಾಗರಹೊಳೆ, ಬಂಡೀಪುರ, ಬಿಳಿಗಿರಿ ರಂಗಣಬೆಟ್ಟದ ಅರಣ್ಯದಲ್ಲಿ ಈ ಬೇಸಿಗೆಯಲ್ಲಿ ಕಾಳ್ಗಿಚ್ಚು ನಿಯಂತ್ರಿಸಲು ಅಧಿಕಾರಿಗಳು ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ಬೇಸಿಗೆಯಲ್ಲಿ ಹುಲಿ, ಚಿರತೆ, ಆನೆ ಸೇರಿದಂತೆ ಯಾವುದೇ ವನ್ಯಜೀವಿ ಆಹಾರ ಮತ್ತು ನೀರಿನ ಕೊರತೆಯಿಂದ ಕಾಡಿನಿಂದ

ಪುಟ 2ಕ್ಕೆ

### ಹುಲಿ ಹತ್ಯೆ ಆರೋಪಿ ಬಂಧನ

**ಚಾಮರಾಜನಗರ:** ಜಿಲ್ಲೆಯ ಗುಂಡಾಲ್ ಡ್ಯಾಂನಲ್ಲಿ ಉರುಳಿಗೆ ಸಿಲುಕಿ ಹುಲಿ ಸಾವನ್ನಪ್ಪಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಉರುಳು ಹಾಕಿದ್ದ ವ್ಯಕ್ತಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ಕೊಳ್ಳೇಗಾಲ ತಾಲೂಕಿನ ಕೊಂಗರಹಳ್ಳಿ ಗ್ರಾಮದ ಕುಮಾರ್ ಬಂಧಿತ ಆರೋಪಿ. ಆರೋಪಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿ ಹೆಚ್ಚಿನ ವಿಚಾರಣೆಗೆ ಅರಣ್ಯ ಇಲಾಖೆ ಕಸ್ಟಡಿಗೆ ಪಡೆದಿದೆ. ಪ್ರಕರಣದಲ್ಲಿ ಇನ್ನೂ ಹೆಚ್ಚು ಮಂದಿ ಭಾಗಿಯಾಗಿರುವ ಸಾಧ್ಯತೆ ಹಿನ್ನೆಲೆ ಅರಣ್ಯಾಧಿಕಾರಿಗಳು ತನಿಖೆಗೆ ಒಳಪಡಿಸಿದ್ದಾರೆ.

ಸ್ಕೂಟರ್ ಕ್ಲಚ್ ವೈರ್ ಬಳಸಿ ಉರುಳು ಹಾಕಿ ಹುಲಿಯನ್ನು ಹತ್ಯೆ ಮಾಡಲಾಗಿತ್ತು. ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲ ತಾಲ್ಲೂಕಿನ ಗುಂಡಾಲ್ ಡ್ಯಾಂನಲ್ಲಿ ಹುಲಿಯ ಕಳೇಬರ ಸಿಕ್ಕಿತ್ತು.

## ನಮ್ಮ ದೇಶದಲ್ಲೂ ಹಿಂದೂಗಳ ಪರಿಸ್ಥಿತಿ ಹೀನಾಯ: ಪೇಜಾವರ ಶ್ರೀ

**ದಾವಣಗೆರೆ:** ಬಾಂಗ್ಲಾ ದೇಶದಲ್ಲಷ್ಟೇ ಅಲ್ಲ, ನಮ್ಮ ದೇಶದಲ್ಲೂ ಕೂಡ ಹಿಂದೂಗಳ ಪರಿಸ್ಥಿತಿ ಹೀನಾಯವಾಗಿದೆ ಎಂದು ಪೇಜಾವರ ಮಠದ ವಿಶ್ವಪ್ರಸನ್ನಾ ತೀರ್ಥ ಶ್ರೀಗಳು ವಿಷಾದಿಸಿದರು.




ಮಾಧ್ಯಮಗಳ ಜೊತೆ ಮಾತನಾಡಿ ಬಾಂಗ್ಲಾದಲ್ಲಿ ನಡೆಯು ತ್ತಿರುವ ಹಿಂದುಗಳ ಹತ್ಯೆ ಬಗ್ಗೆ ಪ್ರತಿಕ್ರಿಯಿಸಿದರು. ಈ ಬಗ್ಗೆ ಕೇಂದ್ರ ಸರ್ಕಾರ ಕ್ರಮವನ್ನು ಕೈಗೊಳ್ಳಬೇಕು. ಹಿಂದೂಗಳ ಹೀನಾಯ ಸ್ಥಿತಿ ಯಲ್ಲಿ ಇರುವುದು ಕೇವಲ ಬಾಂಗ್ಲಾದಲ್ಲಿ ಅಷ್ಟೇ ಅಲ್ಲ. ನಮ್ಮ ಭಾರತ ದಲ್ಲಿ ಕೂಡ ಹೀನಾಯ ಸ್ಥಿತಿಯಲ್ಲಿದ್ದಾರೆ ಎಂದು ಕಳವಳ ವ್ಯಕ್ತಪಡಿಸಿದರು. ಗೋ ಹತ್ಯೆ ನಿಷೇಧದ ಬಗ್ಗೆ ಸರ್ಕಾರ ಕೆಲಸ ಮಾಡಬೇಕು. ಅದರ ಜೊತೆ ನಾವುಗಳು ಕೂಡ ಕೈಜೋಡಿಸಬೇಕು. ಜಿಲ್ಲೆಗಳಿಗೊಂದು ಗೋ ಶಾಲೆಗಳನ್ನು ನಿರ್ಮಾಣ ಮಾಡಬೇಕಿದೆ. ಗೋವುಗಳಿಗೆ ಮೀಸಲಿಟ್ಟ ಗೋಮಾಳಗಳನ್ನು

ಪುಟ 2ಕ್ಕೆ

## ಮೇಕೆದಾಟುಗೆ ಅನುಮೋದನೆ: ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಕೆ

**ನವದೆಹಲಿ:** ಮೇಕೆದಾಟು ಸಮತೋಲನ ಜಲಾಶಯ ನಿರ್ಮಾಣಕ್ಕೆ ಅಗತ್ಯವಿರುವ ವನ್ಯಜೀವಿ ಅನುಮೋದನೆ ಪಡೆಯಲು ಕರ್ನಾಟಕ ಸರ್ಕಾರದಿಂದ ಕೇಂದ್ರ ಅರಣ್ಯ ಮತ್ತು ಪರಿಸರ ಸಚಿವಾಲಯಕ್ಕೆ ಪ್ರತ್ಯೇಕ ಪ್ರಸ್ತಾವ ಸಲ್ಲಿಸಲಾಗಿದೆ.

ಮೇಕೆದಾಟು ಜಲಾಶಯ ನಿರ್ಮಾಣ ಯೋಜನೆಗೆ 5,200 ಹೆಕ್ಟೇರ್ ಅರಣ್ಯ ಪ್ರದೇಶ ಬಳಕೆಗೆ ಅನುಮೋದನೆ ಕೋರಿ ಕಾವೇರಿ ನೀರಾವರಿ ನಿಗಮ ಜನವರಿಯಲ್ಲಿ ಪ್ರಸ್ತಾವ ಸಲ್ಲಿಸಿತ್ತು. ಕೇಂದ್ರ ಜಲಶಕ್ತಿ ಸಚಿವಾಲಯ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದಿಂದ ಅನುಮೋದನೆ ಪಡೆದಿರುವ ವಿಸ್ತೃತ ಯೋಜನಾ ವರದಿಯನ್ನು



ರಾಜ್ಯ ಸಲ್ಲಿಸಿಲ್ಲ ಎಂದು ಸಚಿವಾಲಯವು ಆಕ್ಷೇಪ ವ್ಯಕ್ತಪಡಿಸಿತ್ತು. ರಾಜ್ಯ ಸರ್ಕಾರ ಅಪೂರ್ಣ ದಾಖಲೆಗಳನ್ನು ಸಲ್ಲಿಸಿದೆ ಎಂದು ಹೇಳಿತ್ತು.

ಸಮೀಕ್ಷೆ ಕಾರ್ಯಕ್ಕೆ ಈ

## ಪ್ರವಾಸಕ್ಕೆ ನಿರಾಕರಿಸಿದ ಪತಿ: ಪತ್ನಿ ಆತ್ಮಹತ್ಯೆ

**ಮೈಸೂರು:** ಪ್ರವಾಸಕ್ಕೆ ತೆರಳಲು ಗಂಡ ಅನುಮತಿ ಕೊಡಲಿಲ್ಲ ಎಂದು ಗೃಹಿಣಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದಲ್ಲಿ ನಡೆದಿದೆ. ಗೃಹಿಣಿ ಸಂಬಂಧಿಕರು ಇದು ಕೊಲೆ ಎಂದು ಆರೋಪಿಸಿದ್ದಾರೆ.



ನಗರದ ಸರಸ್ವತಿಪುರಂನ ನಿವಾಸಿ 46 ವರ್ಷದ ಸಂಧ್ಯಾ ಮೃತ ದುರ್ದೈವಿ. ಮನೆಯ ಕೋಣೆಯಲ್ಲಿ ಸೀಲಿಂಗ್ ಫ್ಯಾನ್‌ಗೆ ನೇಣು ಬಿಗಿ ದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬೆಂಗಳೂರು ಮೂಲದ ಸಂಧ್ಯಾ 25 ವರ್ಷಗಳ ಹಿಂದೆ ರಂಗನಾಥ್ ಎಂಬವರನ್ನು ಮದುವೆ ಆಗಿದ್ದರು. ದಂಪತಿಗೆ ಇಬ್ಬರು ಮಕ್ಕಳಿದ್ದಾರೆ. ಪುತ್ರಿ ವಿದೇಶದಲ್ಲಿ ವ್ಯಾಸಂಗ ಮಾಡುತ್ತಿದ್ದಾರೆ.

ಸಂಧ್ಯಾ ಮನೆಯಲ್ಲಿ ಗಂಡ ಹಾಗೂ ಮಗನ ಜೊತೆ ವಾಸವಿದ್ದರು. ನಿನ್ನೆ ರಾತ್ರಿ ಪ್ರವಾಸದ ವಿಚಾರದಲ್ಲಿ ಗಂಡ–ಹೆಂಡತಿ

ಪುಟ 2ಕ್ಕೆ

# ಈ ವರ್ಷ ಬಿಸಿಲು ಧಗಧಗ: ತಾಪಮಾನ ಹೆಚ್ಚಳ ಮುನ್ಸೂಚನೆ

**ಬೆಂಗಳೂರು:** ರಾಜ್ಯದಲ್ಲಿ ಫೆಬ್ರವರಿ ತಿಂಗಳಿನಲ್ಲೇ ತಾಪಮಾನ ಹೆಚ್ಚಾಗಿದೆ. ಮಾರ್ಚ್‌ನಿಂದ ಮೇ ತಿಂಗಳವರೆಗೆ ರಾಜ್ಯದಲ್ಲಿ ಬಿಸಿಲಿನ ಬೇಗೆ ಮತ್ತಷ್ಟು ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ.

2026ರ ಮಾರ್ಚ್‌ನಿಂದ ಮೇ ಅವಧಿಯಲ್ಲಿ ದೇಶದ ಬಹುತೇಕ ಭಾಗಗಳಲ್ಲಿ ಗರಿಷ್ಠ ಮತ್ತು ಕನಿಷ್ಠ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗಲಿದೆ. ಕೇರಳ ಮತ್ತು ತಮಿಳುನಾಡು ಹೊರತುಪಡಿಸಿ ಇತರೆ ಪ್ರದೇಶಗಳಲ್ಲಿ ವಾಡಿಕೆಗಿಂತಲೂ ಬಿಸಲು ಹೆಚ್ಚಾಗುವ ಸಾಧ್ಯತೆ ಇದೆ ಎಂದು ತಿಳಿಸಿದೆ.

ಕರ್ನಾಟಕದ ಉತ್ತರ ಒಳನಾಡಿನ ಬಹುತೇಕ ಭಾಗಗಳಲ್ಲಿ ಮಾರ್ಚ್ ನಿಂದ ಮೇ ಅವಧಿಯಲ್ಲಿ ಉಷ್ಣ ಅಲೆ ತೀವ್ರಗೊಳ್ಳುವ ಸಾಧ್ಯತೆ ಇದೆ. ಈ ಪ್ರದೇಶಗಳಿಗೆ ರೆಡ್ ಅಲರ್ಟ್ ಘೋಷಿಸಿದೆ. ಪ್ರಸ್ತುತ ಹೆಚ್ಚಾಗಿರುವ ತಾಪಮಾನವು 3 ರಿಂದ 6 ದಿನಗಳವರೆಗೆ ಮುಂದುವರಿಯುವ ಸಾಧ್ಯತೆ ಇದ್ದು, ನಂತರ



ಕಡಿಮೆಯಾಗುವ ಸಾಧ್ಯತೆಗಳಿವೆ ಎಂದು ತಿಳಿಸಿದೆ.

ಈ ನಡುವೆ ಕರಾವಳಿ ಮತ್ತು ಉತ್ತರ ಒಳನಾಡು ಕರ್ನಾಟಕದ ಬಹುತೇಕ ಭಾಗಗಳಲ್ಲಿ ಕನಿಷ್ಠ ತಾಪಮಾನವೂ ಸಾಮಾನ್ಯಕ್ಕಿಂತ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಐಎಂಡಿ ಮಾಹಿತಿ ನೀಡಿದೆ. ಮಾರ್ಚ್‌ನಿಂದ ಮೇವರೆಗೆ ಸಂಪೂರ್ಣ ಕರ್ನಾಟಕದಲ್ಲಿ ಗರಿಷ್ಠ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚು ಇರುವ ಸಾಧ್ಯತೆ ಇದೆ. ಕರಾವಳಿ ಕರ್ನಾಟಕದಲ್ಲಿ ಗರಿಷ್ಠ

ಪುಟ 2ಕ್ಕೆ

# ಬಾಗಲಕೋಟೆ ಉದ್ವಿಗ್ನ: ಬೂದಿಮುಚ್ಚಿದ ಕೆಂಡ

## ಶಿವಾಜಿ ಜಯಂತಿ ಮೆರವಣಿಗೆ ಮೇಲೆ ದುಷ್ಕರ್ಮಿಗಳಿಂದ ಕಲ್ಲು ತೂರಾಟ | ಲಘು ಲಾಠಿ ಪ್ರಹಾರ

**ಬಾಗಲಕೋಟೆ:** ಬಾಗಲಕೋಟೆಯಲ್ಲಿ ನಿಷೇಧಾಜ್ಞೆ ನಡುವೆಯೂ ಶುಕ್ರವಾರ ಕಲ್ಲು ತೂರಾಟ ನಡೆದಿದೆ. ಪೊಲೀಸರು ಲಾಠಿ ಚಾರ್ಜ್ ನಡೆಸಿ ಪರಿಸ್ಥಿತಿಯನ್ನು ನಿಯಂತ್ರಿಸಿದ್ದಾರೆ. ಬಾಗಲಕೋಟೆ ಉದ್ವಿಗ್ನಗೊಂಡಿದ್ದು, ಬೂದಿ ಮುಚ್ಚಿದ ಕೆಂಡದ ಸ್ಥಿತಿ ನಿರ್ಮಾಣವಾಗಿದೆ.

ಶಿವಾಜಿ ಜಯಂತಿ ಮೆರವಣಿಗೆ ಮೇಲೆ ಗುರುವಾರ ರಾತ್ರಿ ದುಷ್ಕರ್ಮಿಗಳು ಕಲ್ಲು ತೂರಾಟ ನಡೆಸಿನ್ನು ಖಂಡಿಸಿ ಶುಕ್ರವಾರ ಕೊತ್ತಲೇಶ್ವರ ದೇವಸ್ಥಾನದಲ್ಲಿ ಹಿಂದೂ ಸಂಘಟನೆಗಳ ಕಾರ್ಯಕರ್ತರು ಸಭೆ ನಡೆಸುತ್ತಿದ್ದರು, ಮಸೀದಿಯಿಂದ ಕೇವಲ 8 ಮಂದಿಯಲ್ಲ ಬಹಳಷ್ಟು ಮಂದಿ ಕಲ್ಲು ಎಸೆದಿದ್ದಾರೆ. ಆ ಯುವಕರನ್ನು ಬಂಧಿಸಬೇಕು ಎಂದು ಹಿಂದೂ ಮುಖಂಡರು ಆಗ್ರಹಿಸಿದರು. ಕಾರ್ಯಕರ್ತರು ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡಿಸಲು ಮುಂದಾದರು.

ಈ ಸಂದರ್ಭದಲ್ಲಿ ಕಾರ್ಯಕರ್ತರನ್ನು ಪೊಲೀಸರು ತಡೆದಿದ್ದಾರೆ. ತಡೆದಿದ್ದಕ್ಕೆ ಸಿಟ್ಟಾದ ಕಾರ್ಯಕರ್ತರು ನೀವು ಎಲ್ಲಾ ಆರೋಪಿಗಳನ್ನು ಬಂಧಿಸಬೇಕು.

ಪುಟ 2ಕ್ಕೆ





### 8 ಆರೋಪಿಗಳ ಬಂಧನ

ಬಾಗಲಕೋಟೆ: ಶಿವಾಜಿ ಜಯಂತಿ ಮೆರವಣಿಗೆ ವೇಳೆ ಕಲ್ಲು ತೂರಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ ಪೊಲೀಸರು 8 ಮಂದಿಯನ್ನು ಬಂಧಿಸಿದ್ದಾರೆ. ತನ್ವೀರ್ (28) , ಮುಜ್ಜು (23), ಸದ್ದಾಂ(22), ಫಯಾಜ್(24), ಸರ್ಫರಾಜ್(33),

ಪುಟ 2ಕ್ಕೆ

### ತಪ್ಪಿತಸ್ಥರ ವಿರುದ್ಧ ಕ್ರಮ: ಸಿಎಂ

ಬೆಂಗಳೂರು: ಬಾಗಲಕೋಟೆಯಲ್ಲಿ ನಡೆದ ಕಲ್ಲು ತೂರಾಟ ಘಟನೆ ಸಮಾಜದ ಶಾಂತಿ, ಸೌಹಾರ್ದಕ್ಕೆ ಮಾರಕವಾಗಿದೆ. ಇದನ್ನು ನಾನು ಮತ್ತು ನಮ್ಮ ಸರ್ಕಾರ ಖಂಡಿಸುತ್ತೇವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಘಟನೆಯ

ಪುಟ 2ಕ್ಕೆ

# ಎಸ್‌ಟಿಆರ್‌ಆರ್ ರಸ್ತೆಗೆ ವಿತ್ತ ಸಚಿವಾಲಯ ಹಣ ಕೊಡಲು ಒಪ್ಪಿಗೆ ನೀಡಿದೆ

## ನಿರ್ಮಲಾ ಸೀತಾರಾಮನ್ ಹೇಳಿಕೆ । ರಾಮನಗರದ ಬನ್ನಿಕುಪ್ಪೆ ಗ್ರಾಮದ ಬಳಿ ವೇದ ಶಾಲೆಗೆ ಶಂಕುಸ್ಥಾಪನೆ ನೆರವೇರಿಸಿದ ವಿತ್ತ ಸಚಿವರು

ರಾಮನಗರ: ಸ್ಯಾಟಿಲೈಟ್ ಟೌನ್ ರಿಂಗ್ ರಸ್ತೆಗೆ ಕೇಂದ್ರ ಸರ್ಕಾರದ ಕ್ಯಾಬಿನೆಟ್ ಅನುಮೋದನೆ ಮಾತ್ರ ಬಾಕಿ ಇದೆ. ಕ್ಯಾಬಿನೆಟ್ ಅನುಮೋದನೆ ಸಿಕ್ಕ ತಕ್ಷಣ ಭೂ ಸ್ವಾಧೀನಕ್ಕೆ ಅನುದಾನ ಮಂಜೂರಾಗುತ್ತದೆ ಎಂದು ಕೇಂದ್ರ ಸರ್ಕಾರದ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದರು.

ತಾಲ್ಲೂಕಿನ ಕೈಲಾಂಚ ಹೋಬಳಿಯ ಬನ್ನಿಕುಪ್ಪೆ ಗ್ರಾಮದ ಬಳಿ ಆರಂಭವಾಗಲಿರುವ ವೇದವಿದ್ಯಾ ವಿಹಾರ ವೇದಾನಾದ ಗುರುಕುಲದ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ ನಂತರ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದರು. ಎಸ್‌ಟಿಆರ್ ಆರ್ ಯೋಜನೆ ಅನು?ಠಾನಕ್ಕೆ ಕೇಂದ್ರ ರಸ್ತೆ ಸಚಿವಾಲಯ ಅನುಮೋದನೆ ನೀಡಿದ್ದು, ವಿತ್ತ ಸಚಿವಾಲಯವೂ ಅನುದಾನ ನೀಡಲು ಒಪ್ಪಿಗೆ ನೀಡಿದೆ. ಸದರಿ ಕಡತ ಕ್ಯಾಬಿನೆಟ್ ಕಾರ್ಯದರ್ಶಿಗಳ ಕಚೇರಿಯಲ್ಲಿದೆ. ಇದು ಕ್ಯಾಬಿನೆಟ್ ಕಾರ್ಯಸೂಚಿಗೆ ಹೋಗಬೇಕು. ಕ್ಯಾಬಿನೆಟ್ ನಲ್ಲಿ ಚರ್ಚೆಯಾಗಿ ಅಂತಿಮವಾಗಿ ನಿರ್ಧಾರ ತೆಗೆದುಕೊಳ್ಳಲಾಗುತ್ತದೆ. ಇದು ಯಾವಾಗ ಆಗುತ್ತದೆ ಎಂಬುದನ್ನು ಹೇಳಲಾಗದು ಎಂದರು.

ಈ ಯೋಜನೆ ನಿಂತು ಹೋಗಿದೆ ಎಂದು ರೈತರು ಆತಂಕಗೊಂಡಿದ್ದಾರೆ. ಯಾವುದೇ ಕಾರಣಕ್ಕೂ ಯೋಜನೆ ನಿಲ್ಲುವುದಿಲ್ಲ. ಜಿಲ್ಲಾಧಿಕಾರಿಗಳು ನೀಡಿರುವ ಮಾಹಿತಿ ಪ್ರಕಾರ ಯೋಜನೆಗೆ ಗುರುತಿಸಲಾಗಿರುವ ಭೂಮಿಯನ್ನು ಸರ್ಕಾರ ಇನ್ನೂ ಸ್ವಾಧೀನ ಪಡಿಸಿಕೊಂಡಿಲ್ಲ. ಹೀಗಾಗಿ ಎಲ್ಲ ಭೂಮಿಯೂ ರೈತರ ಹೆಸರಿನಲ್ಲೇ ಇದೆ. ಕ್ಯಾಬಿನೆಟ್ ಅನುಮೋದನೆ ನೀಡಿದ ನಂತರ, ರೈತರಿಗೆ ಪರಿಹಾರ ತಲುಪುಲಿದೆ ಎಂದು ತಿಳಿಸಿದರು.

ಇದಕ್ಕೂ ಮುನ್ನ ನಿರ್ಮಲಾ ಸೀತರಾಮನ್ ಅವರನ್ನು ಭೇಟಿಯಾದ ರೈತರು ಬೆಂಗಳೂರು ಹೊರ ವಲಯದ ಎಸ್ ಟಿಆರ್ ಆರ್ ರಸ್ತೆ ಯೋಜನೆಗೆ ಸ್ವಾಧೀನ ಪಡಿಸಿಕೊಳ್ಳುತ್ತಿರುವ ಭೂಮಿಗೆ ಪರಿಹಾರ ಕಲ್ಪಿಸುವಂತೆ ಮನವಿ ಮಾಡಿದರು.

ಸ್ಥಳದಲ್ಲಿಯೇ ಹಾಜರಿದ್ದ ಜಿಲ್ಲಾಧಿಕಾರಿ ಯಶವಂತ್ ವಿ.ಗುರುಕರ್ ಹಾಗೂ ಸಂಸದ ಡಾ.ಸಿ.ಎನ್. ಮಂಜುನಾಥ್ ಅವರಿಂದ ಮಾಹಿತಿ ಪಡೆದು ಸಮಾಲೋಚನೆ ನಡೆಸಿದ ಸಚಿವರು, ಭೂ ಪರಿಹಾರ ವಿತರಿಸಲು ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ಸಂಸದ ಡಾ.ಸಿ.ಎನ್.ಮಂಜುನಾಥ್ ಮತ್ತು ಅವರ ಪತ್ನಿಯ ಬಗ್ಗೆ ವಿತ್ತ ಸಚಿವರು ಮೆಚ್ಚುಗೆಯ ನುಡಿಗಳನ್ನಾಡಿದರು. ಈ ವೇಳೆ ಜಿಲ್ಲಾಧಿಕಾರಿ ಯಶವಂತ್ ವಿಗುರುಕರ್, ಬಿಜೆಪಿ ಜಿಲ್ಲಾಧ್ಯಕ್ಷ ಆನಂದ ಸ್ವಾಮಿ, ಪ್ರಮುಖರಾದ ಗೌತಂ ಗೌಡ, ಜಿ.ವಿ.ಪದ್ಮನಾಭ, ಪಿ.ಶಿವಾನಂದ, ಜೆಡಿಎಸ್ ತಾಲ್ಲೂಕು ಅಧ್ಯಕ್ಷ ಸಬ್ಬಕೆರೆ ಶಿವಲಿಂಗಯ್ಯ, ಜೆಡಿಎಸ್ ಪ್ರಮುಖರಾದ ದೊರೆಸ್ವಾಮಿ ಮುಂತಾದವರು ಹಾಜರಿದ್ದರು.



### ವೇದ ಶಾಲೆ

ಗೋವಿಂದ ಭಟ್ ಎಂಬುವರು ಈಗಾಗಲೆ ಬೆಂಗಳೂರಿನಲ್ಲಿ ವೇದ ಕಲಿಕಾ ಕೇಂದ್ರವನ್ನು ನಡೆಸುತ್ತಿದ್ದಾರೆ. ಸದ್ಯ ಅವರು ವಿದ್ಯಾರ್ಥಿಗಳಿಗೆ ಋಗ್‌ವೇದವನ್ನು ಕಲಿಸುತ್ತಿದ್ದಾರೆ. ಇನ್ನು ಮೂರು ವೇದಗಳಾದ ಯಜುರ್‌ವೇದ, ಸಾಮವೇದ ಮತ್ತು ಅಥರ್ವವೇದವನ್ನು ಕಲಿಸಲು ಉದ್ದೇಶಿಸಿದ್ದು, ಇಲ್ಲಿ ವೇದ ಕಲಿಕಾ ಶಾಲೆಯನ್ನು ನೂತನವಾಗಿ ಆರಂಭಿಸುತ್ತಿದ್ದಾರೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ಗುರುಕುಲದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಾಗುತ್ತಿದೆ. ಹೊಸ ಕಟ್ಟಡ ನಿರ್ಮಾಣಕ್ಕೆ ಸ್ಥಳಾವಕಾಶದ ಕೊರತೆ ಇತ್ತು. ಈ ಭಾಗದಲ್ಲಿ ಅವರಿಗೆ ಭೂಮಿಯನ್ನು ಮಾರಿದ್ದಾಋಎ. ಹೀಗಾಗಿ ವೇದ ಕಲಿಕಾ ಶಾಲೆಯನ್ನು ಇಲ್ಲಿ ಆರಂಭಿಸಲು ಉದ್ದೇಶಿಸಿದ್ದಾರೆ ಎಂದರು. ಗೋವಿಂದ ಭಟ್ ಅವರಿಗೆ ಪರಿಸರ ಮತ್ತು ಹಸಿರಿನ ಬಗ್ಗೆ ಪ್ರಜ್ಞೆ ಇದೆ. ಈ ಭೂಮಿಯ ಸುತ್ತಮುತ್ತ ವಾಸಿಸುವ ಜನರನ್ನು ವಿಶ್ವಾಸಕ್ಕೆ ತೆಗೆದುಕೊಂಡಿದ್ದಾರೆ ಎಂದು ಮಾಹಿತಿ ಕೊಟ್ಟರು. ಈ ಗ್ರಾಮದಲ್ಲಿ ಒಂದು ಗೋಶಾಲೆಯೂ ಇತ್ತು. ಅದನ್ನು ನಿರ್ವಹಿಸುತ್ತಿದ್ದ ವ್ಯಕ್ತಿ ಗೋಶಾಲೆಯನ್ನು ಗೋವಿಂದ ಭಟ್ ಅವರಿಗೆ ಕೊಟ್ಟಿದ್ದು, ಇಲ್ಲಿ ಗೋಶಾಲೆಯನ್ನು ಆರಂಭಿಸುತ್ತಿದ್ದಾರೆ. ಗೋಶಾಲೆಗಳು ನಮ್ಮ ಸಂಸ್ಕೃತಿಯ ಒಂದು ಮುಖ್ಯ ಭಾಗ. ಅದನ್ನು ಮುಂದುವರೆಸಬೇಕಾಗಿದೆ. ನಾನು ಸಹ ಗೋಸೇವೆ ಮಾಡುತ್ತೇನೆ ಎಂದರು. ಇಂತಹ ಉತ್ತಮ ಕಾರ್ಯಕ್ಕೆ ಬರಲು ನನಗೆ ಅವಕಾಶ ಕೊಟ್ಟಿದ್ದಕ್ಕೆ ಕೃತಜ್ಞತೆ ಸಲ್ಲಿಸುತ್ತೇನೆ ಎಂದರು.

### ವೇದ ಉಪನಿಷತ್ತುಗಳನ್ನು ಜಗತ್ತಿಗೆ ನೀಡಿದ ದೇಶ ನಮ್ಮದು

**ಸಂಸದ ಡಾ.ಸಿ.ಎನ್.ಮಂಜುನಾಥ್**

ಸಂಸದ ಡಾ.ಸಿ.ಎನ್.ಮಂಜುನಾಥ್ ಮಾತನಾಡಿ, ವೇದ ಉಪನಿ?ತ್ತುಗಳು ಸಾಂಸ್ಕೃತಿಕ ಬೆನ್ನೆಲುಬು. ಭಾರತ ಸಂಸ್ಕೃತ ಮತ್ತು ಸಂಸ್ಕೃತಿಯಲ್ಲಿ ಒಳ್ಳೆಯ ಹೆಸರು ಮಾಡಿದೆ. ವಿಶ್ವಕ್ಕೆ ಯೋಗವನ್ನು ಪರಿಚಯಿಸಿದ ದೇಶ. ಗುರುಕುಲದಲ್ಲಿ ಶಿಸ್ತು ಬದ್ಧ ಶಿಕ್ಷಣ ಸಿಗುತ್ತದೆ. ಇದಕ್ಕೆ ಬನ್ನಿಕುಪ್ಪೆ ಪ್ರಾರಂಭವಾಗುತ್ತಿರುವ ವೇದ ಗುರುಕುಲವೂ ಪೂರಕವಾಗಿರಲಿದೆ ಎಂದರು. ನಾವೆಲ್ಲರೂ ಒತ್ತಡದಲ್ಲಿ ಜೀವನ ಸಾಗಿಸುತ್ತಿದ್ದೇವೆ. ಜಗತ್ತು ತಂತ್ರಜ್ಞಾನದ ಮಡಿಲಲ್ಲಿ ಮುಳುಗಿ ಹೋಗುತ್ತಿದೆ. ಇಂತಹ ಸಂದರ್ಭದಲ್ಲಿ ಗುರುಕುಲ ಸಂಸ್ಕೃತಿಯನ್ನು ಉಳಿಸಿಕೊಂಡು ಬರುವುದು ಎಲ್ಲರ ಆದ್ಯ ಕರ್ತವ್ಯ. ಇದರಿಂದ ಸಂಸ್ಕೃತಿ ಜೊತೆಗೆ ಸಂಸ್ಕಾರ ಬೆಳೆಯುತ್ತದೆ ಎಂದು ಹೇಳಿದರು.

---

**ಮೊದಲ ಪುಟದಿಂದ**

## ಸ್ನೇಹಮಯಿ ಬಂಧನ

ನಡೆಸಿದರು ಎಂದು ಸ್ನೇಹಮಯಿ ಕೃಷ್ಣ ಆರೋಪ ಮಾಡಿದ್ದರು. ಈ ಸಂಬಂಧ ಆಡಿಯೋ ಕ್ಲಿಪ್ ಬಿಡುಗಡೆ ಮಾಡಿದ್ದರು.

ಹಗರಣ ಬೆಳಕಿಗೆ ಬಂದ ಸಂದರ್ಭದಲ್ಲಿ ನಟೇಶ್ ಅವರು ಆಪ್ತರಿಗೆ ಕರೆ ಮಾಡಿ ಮಾತಾಡಿ, ಸ್ನೇಹಮಯಿ ಕೃಷ್ಣ ಅವರನ್ನು ಭೇಟಿ ಮಾಡಿಸಿ ಮಾತಾಡೋಣ ಎಂದಿದ್ದಾರಂತೆ. ಇದಕ್ಕೆ ಸಂಬಂಧಿಸಿದ ಆಡಿಯೋ ಕ್ಲಿಪ್ ಅನ್ನು ಸ್ನೇಹಮಯಿ ಬಿಡುಗಡೆ ಮಾಡಿದ್ದಾರೆ. ಡಿಬಿ ನಟೇಶ್ ಅವರು ನನ್ನನ್ನು ಯಾಕೆ ನೋಡಬೇಕು, ನನ್ನ ಜೊತೆ ನಟೇಶ್‌ಗೆ ಎಂಥಾ ಮಾತು ಎಂದು ಸ್ನೇಹಮಯಿ ಪ್ರಶ್ನೆ ಮಾಡಿದ್ದರು.

ಅಲ್ಲದೇ, ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ವಿರುದ್ಧವೂ ಸ್ನೇಹಮಯಿ ಕೃಷ್ಣ ಕಮಿಷನ್ ಆರೋಪದ ಬಾಂಬ್ ಸಿಡಿಸಿದ್ದರು. ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ಕೋಟ್ಯಂತರ ಹಣ ಕೊಟ್ಟು ನಟೇಶ್ ಮುಂಬಡ್ತಿ ಪಡೆದಿದ್ದಾರೆ ಕೃಷ್ಣ ಗಂಭೀರ ಆರೋಪ ಮಾಡಿದ್ದರು. ಇದಕ್ಕೆ ತಿರುಗೇಟು ನೀಡಿದ್ದ ಶಾಲಿನಿ ರಜನೀಶ್ ಅವರು, ಸ್ನೇಹಮಯಿ ಕೃಷ್ಣ ವಿರುದ್ಧ ಕಾನೂನು ಕ್ರಮಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿದ್ದರು.

ಮುಡಾ ನಿವೇಶನ ಹಂಚಿಕೆ ವೇಳೆ ನಿಯಮ ಗಾಳಿಗೆ ತೂರಿ ಬೇಕಾಬಿಟ್ಟಿ ಸೈಟು ಹಂಚಿದ್ದ ಆರೋಪ ಡಿಬಿ ನಟೇಶ್ ಮೇಲಿದೆ. ಸದ್ಯ ಅವರು ಲೋಕಾಯುಕ್ತ ಹಾಗೂ ಇಡಿ ತನಿಖೆ ಎದುರಿಸುತ್ತಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ (ಮುಡಾ) ಅಕ್ರಮವಾಗಿ ನಿವೇಶನ ಪಡೆದಿದ್ದಾರೆಂದು ಆರೋಪಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಅವರ ಪತ್ನಿ ಬಿ.ಎಂ.ಪಾರ್ವತಿ ಸೇರಿದಂತೆ ನಾಲ್ವರ ವಿರುದ್ಧ ಸ್ನೇಹಮಯಿ ಕೃಷ್ಣ ಅವರು ದೂರು ನೀಡಿದ್ದರು. ಲೋಕಾಯುಕ್ತ ಪೊಲೀಸರು ಸಿಎಂ ಕುಟುಂಬದ ವಿರುದ್ಧದ ಆರೋಪಕ್ಕೆ ಬಿ ರಿಪೋರ್ಟ್ ಸಲ್ಲಿಸಿದ್ದರು. ಇದನ್ನು ಪ್ರಶ್ನಿಸಿ ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೆಟ್ಟಿಲೇರಿದ್ದರು.

## ಸಂಘರ್ಷ ತಡೆಗೆ ಸೂಚನೆ

ಮಾಡದಂತೆ ಎಚ್ಚರಿಕೆ ವಹಿಸಬೇಕು ಎಂದು ಸಚಿವ ಈಶ್ವರ್ ಖಂಡ್ರೆ ಅವರು ಅರಣ್ಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಂಡೀಪುರ ಅರಣ್ಯದ ಗಡಿಯಲ್ಲಿ 100 ಕಿಲೋ ಮೀಟರ್ ಅತ್ಯಂತ ಸೂಕ್ಷ್ಮ ಪ್ರದೇಶವಾಗಿದೆ. ಇಲ್ಲಿ 5 ಕಿ.ಮೀ.ಗೆ ಒಂದರಂತೆ 25 ಶಿಬಿರ ನಿರ್ಮಿಸಿ ಪ್ರತಿ ಶಿಬಿರದಲ್ಲಿ ಸ್ಥಳೀಯರನ್ನು ಕಾಡಿನ ಮಿತ್ರ ಎಂದು ನೇಮಕ ಮಾಡಿಕೊಂಡು ವನ್ಯಜೀವಿಗಳ ಚಲನವಲನದ ಬಗ್ಗೆ ನಿಗಾ ಇಡಬೇಕು. ಥರ್ಮಲ್ ಡ್ರೋನ್, ವಾಹನ ಇತ್ಯಾದಿ ಯಾವುದೇ ಸೌಲಭ್ಯ ಬೇಕಿದ್ದರೂ ಪ್ರಸ್ತಾವ ಸಲ್ಲಿಸಬೇಕು ಎಂದು ಸೂಚಿಸಿದರು.

ಸಫಾರಿಯಿಂದ ಬರುವ ಆದಾಯದಲ್ಲಿ ಶೇ.35ರಷ್ಟು ಹಣವನ್ನು ಅರಣ್ಯದಂಚಿನ ವಸತಿ ಪ್ರದೇಶಗಳಲ್ಲಿನ ಯುವಜನರಿಗೆ ಕೌಶಲ್ಯ ತರಬೇತಿ ನೀಡಲು, ಜಾನುವಾರುಗಳಿಗೆ ಮೇವು ಒದಗಿಸಲು, ಮಕ್ಕಳಿಗೆ ಶಿಕ್ಷಣ ಕೊಡಿಸಲು ವಿನಿಯೋಗಿಸಬೇಕು ಎಂದು ಅವರು ಹೇಳಿದರು. ವನ್ಯಜೀವಿಗಳ ರಕ್ಷಣೆಯ ಜೊತೆಗೆ ಕಾಡಿನಂಚಿನಲ್ಲಿ ವಾಸಿಸುತ್ತಿರುವ ನಿವಾಸಿಗಳ ಜೀವ ರಕ್ಷಣೆಯೂ ಅರಣ್ಯ ಇಲಾಖೆಯ ಪ್ರಥಮ ಆದ್ಯತೆ ಆಗಿದೆ. ಇದರ ಜೊತೆಗೆ ಬೆಳೆ ರಕ್ಷಣೆಗೂ ಒತ್ತು ನೀಡಬೇಕು ಎಂದು ತಿಳಿಸಿದರು.

## ಕಾಳ್ಗಿಚ್ಚು ನಿಯಂತ್ರಣಕ್ಕೆ ತಾಕೀತು

ಹೊರಬಾರದಂತೆ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಈಶ್ವರ್ ಖಂಡ್ರೆ ತಾಕೀತು ಮಾಡಿದರು. ವೃಕ್ಷ ಸಂರಕ್ಷಣೆ ಮತ್ತು ವೃಕ್ಷ ಸಂವರ್ಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಮುಂಬರುವ ಮಳೆಗಾಲದಲ್ಲಿ ಮೈಸೂರು ನಗರ ಮತ್ತು ಜಿಲ್ಲೆಯ ರಸ್ತೆಯ ಬದಿಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸಸಿಗಳನ್ನು ನೆಟ್ಟು ಬೆಳೆಸಿ ಹಸಿರು ಹೊದಿಕೆ ಹೆಚ್ಚಿಸಬೇಕು ಎಂದು ಅವರು ಸೂಚಿಸಿದರು.

## ಹಿಂದೂಗಳ ಪರಿಸ್ಥಿತಿ ಹೀನಾಯ

ಈ ಕೆಲಸಕ್ಕೆ ಮಾತ್ರ ಬಳಕೆಯಾಗುವಂತೆ ನೋಡಬೇಕು. ಈಗ ಆ ಗೋಮಾಳಗಳನ್ನು ಗೋವುಗಳ ಕಾರ್ಯಕ್ಕೆ ಬಿಟ್ಟು ಬೇರೆ ಬೇರೆ ಕಾರ್ಯಕ್ಕೆ ಬಳಕೆ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಆರ್ ಎಸ್ ಎಸ್ ರಾಷ್ಟ್ರ ರಕ್ಷಣೆಯ ಕೆಲಸ ಮಾಡುತ್ತಿದೆ. ಅಂತಹ ಸಂಸ್ಥೆಯನ್ನು ಬ್ಯಾನ್ ಮಾಡುತ್ತೇವೆ ಎನ್ನುವುದು ಸರಿಯಲ್ಲ ಎಂದು ಪರೋಕ್ಷವಾಗಿ ಪ್ರಿಯಾಂಕ್ ಖರ್ಗೆ ಹೇಳಿಕೆಯನ್ನು ಟೀಕಿಸಿದರು.

## ಸಫಾರಿಗೆ ಷರತ್ತು ಬದ್ಧ ಅನುಮತಿ

ಸಿಬ್ಬಂದಿ ಕಡ್ಡಾಯವಾಗಿ ಅರಣ್ಯ ಇಲಾಖೆ ಆಂತರಿಕವಾಗಿ ಅಭಿವೃದ್ಧಿಪಡಿಸಿರುವ ಇ-ಗಸ್ತು ತಂತ್ರಾಂಶ ಬಳಸಬೇಕು. ಹುಲಿ ಸಂರಕ್ಷಿತ ಪ್ರದೇಶ ದಲ್ಲಿ ಹೊರಗುತ್ತಿಗೆಯ ಸಿಬ್ಬಂದಿ ಇ-ಸ್ಟ್ರೈಪ್ ಬಳಕೆ ಮಾಡಬೇಕು ಎಂದು ಸಮಗ್ರ ಕಮಾಂಡ್ ಕೇಂದ್ರದಲ್ಲಿ ವನ್ಯಜೀವಿಗಳ ಚಲನವಲನದ ಬಗ್ಗೆ ನಿಗಾ ಇಡಬೇಕು. ಕೂಡಲೇ ಸಂಬಂಧಿಸಿದ ವಲಯದ ಅಧಿಕಾರಿ, ಸಿಬ್ಬಂದಿಗೆ ಸೂಚನೆ ನೀಡಬೇಕು. 1926 ದೂರವಾಣಿ ಸಂಖ್ಯೆಗೆ ಬರುವ ದೂರು ಮತ್ತು ಮಾಹಿತಿಗೆ ತಕ್ಷಣ ಸ್ಪಂದಿಸಬೇಕು ಎಂದು ಸಚಿವರು ಸೂಚಿಸಿದರು. ಸಿಸಿಎಫ್ ಮಾಲತಿ ಪ್ರಿಯಾ, ಹುಲಿ ಯೋಜನೆಯ ನಿರ್ದೇಶಕ ರಮೇಶ್‌ಕುಮಾರ್, ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ರವಿಶಂಕರ್, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಶ್ರೀಪತಿ, ಸೋನಾಲ್, ಪ್ರಭಾಕರನ್, ಸೀಮಾ ಭಾಗವಹಿಸಿದ್ದರು.

## 8 ಆರೋಪಿಗಳ ಬಂಧನ

ರಿಯಾನ್(21), ಅಯಾನ್(19), ವಸೀಮ್ (22) ಬಂಧನಕ್ಕೆ ಒಳಗಾದ ಆರೋಪಿಗಳು. ಬಾಗಲಕೋಟೆ ಎಸ್‌ಪಿ ಸಿದ್ದಾರ್ಥ ಗೋಯಲ್ ಮಾತನಾಡಿ, ವಿಡಿಯೋ ದೃಶ್ಯಗಳನ್ನು ಆಧರಿಸಿ ಆರೋಪಿಗಳನ್ನು ಬಂಧಿಸಿದ್ದೇವೆ. ಮಸೀದಿಯಿಂದ ರಾತ್ರಿ 10:06ಕ್ಕೆ ಕಲ್ಲು ಎಸೆಯಲಾಗಿದೆ. ನಮ್ಮ ಕರ್ತವ್ಯಕ್ಕೆ ಅಡ್ಡಿ ಪಡಿಸಿದ್ದಕ್ಕೆ 7 ಮಂದಿ ಮೇಲೆ ಕೇಸ್ ದಾಖಲಿಸಿದ್ದೇವೆ ಎಂದು ತಿಳಿಸಿದರು. ಡಿಜೆ ವಿಚಾರಕ್ಕೆ ಗಲಾಟೆ ನಡೆದಿಲ್ಲ. ಕಲ್ಲು ಮತ್ತು ಚಪ್ಪಲಿ ಎಸೆಯಲಾಗಿದೆ. ರಾತ್ರಿ 9:30ಕ್ಕೆ ಮಸೀದಿಯಲ್ಲಿ ಪ್ರಾರ್ಥನೆ ಮುಗಿದ ಬಳಿಕ ಕೆಲವರು ಅಲ್ಲೇ ಉಳಿದುಕೊಂಡಿದ್ದರು. ಉಳಿದುಕೊಂಡ ವ್ಯಕ್ತಿಗಳ ಪೈಕಿ ತನ್ವೀರ್ ಕಲ್ಲು ಎಸೆದಿದ್ದಾನೆ. ಇಬ್ಬರು ಕಾನ್‌ಸ್ಟೇಬಲ್ ಮತ್ತು ನನ್ನ ಮೇಲೆ ಕಲ್ಲು ಬಿದ್ದಿತ್ತು. ಮಸೀದಿಯಿಂದ ಕಲ್ಲು ಎಸೆದಿದ್ದು ನಮ್ಮ ವಿಡಿಯೋದಲ್ಲೂ ಸೆರೆಯಾಗಿದೆ ಎಂದು ಎಸ್ಪಿ ತಿಳಿಸಿದರು.

---

# ಸರ್ವಜ್ಞರ ವಿಚಾರ, ಮೌಲ್ಯ ಅಳವಡಿಸಿಕೊಳ್ಳಿ: ಸಿ.ಎನ್.ಮಂಜೇಗೌಡ

ಮೈಸೂರು: ಸಂತ ಕವಿ ಸರ್ವಜ್ಞರ ವಿಚಾರಧಾರೆಗಳು ಹಾಗೂ ವಚನಗಳು, ತ್ರಿಪದಿಗಳಲ್ಲಿರುವ, ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಸಮಾಜದಲ್ಲಿ ಒಳ್ಳೆಯ ವ್ಯಕ್ತಿಯಾಗಿ ಬದುಕಬಹುದು ಎಂದು ವಿಧಾನ ಪರಿಷತ್ತಿನ ಶಾಸಕರಾದ ಸಿ.ಎನ್.ಮಂಜೇಗೌಡ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕರ್ನಾಟಕ ಕಲಾಮಂದಿರದ ಆವರಣದಲ್ಲಿರುವ ಕಿರುರಂಗಮಂದಿರದಲ್ಲಿ ಆಯೋಜಿಸಲಾಗಿದ್ದ ಸಂತ ಕವಿ ಸರ್ವಜ್ಞ ಜಯಂತಿಯನ್ನು ಉದ್ಘಾಟಿಸಿ ಮಾತನಾಡಿದರು. ಸರ್ವಜ್ಞ ಎಂದರೆ ಎಲ್ಲವನ್ನು ತಿಳಿದವರು ಸಾಮಾನ್ಯ ಜನರಿಗೆ ಅರ್ಥವಾಗುವ ರೀತಿಯಲ್ಲಿ ಸರ್ವಜ್ಞರು ವಚನಗಳ ಮೂಲಕ ತ್ರಿಪದಿಯನ್ನು ರಚಿಸಿದ್ದಾರೆ. ಕಾಶಿ ವಿಶ್ವನಾಥನ ಆಶೀರ್ವಾದದಿಂದ ಸಂತ ಕವಿ ಸರ್ವಜ್ಞರು ಮಹಾನ್ ವ್ಯಕ್ತಿಯಾಗಿ ಜನಿಸಿದ್ದಾರೆ. ಧರ್ಮ, ನ್ಯಾಯ, ಸಂಸ್ಕೃತಿ ಹಾಗೂ ವಿದ್ಯೆಯ ಮಹತ್ವದ ಬಗ್ಗೆ ಸರ್ವಜ್ಞರು ಹಲವಾರು ಪ್ರಚಾರವನ್ನು ಮಾಡಿದ್ದಾರೆ. ಮುಂದಿನ ಪೀಳಿಗೆಗೆ ಒಬ್ಬ ಮಹಾನ್ ಕವಿಯ ಕಥೆಯನ್ನು ತಿಳಿಸಿ ಕೊಡಬೇಕಾಗಿದೆ. ನಗರದ ಬಡಾವಣೆಗಳಲ್ಲಿ ಹಾಗೂ ನಗರದ ವೃತ್ತಗಳಲ್ಲಿಸಂತ ಕವಿ ಸರ್ವಜ್ಞರಂತಹ ಮಹನೀಯರ ಹೆಸರನ್ನಿಡಬೇಕೆಂದು ಹೇಳಿದರು.



ಹಿನಕಲ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಸಹಾಯಕ ಶಿಕ್ಷಕ ಕೆ.ಎಸ್.ಮಧುಸೂಧನ್ ಮಾತನಾಡಿ ಪ್ರತಿನಿತ್ಯ ಪ್ರಪಂಚದಲ್ಲಿ ಹುಟ್ಟಿ ಬೆಳೆದು ಸಾಕಷ್ಟು ಜನ ಇದ್ದು ಹೋಗುತ್ತಾರೆ ಆದರೆ ಕೆಲವೇ ಬೆರಳಣಿಕೆಯಷ್ಟು ಜನರನ್ನು ಮಾತ್ರ ನಾವು ನೆನಪಿಸಿಕೊಳ್ಳುತ್ತೇವೆ ಇದರ ಜೊತೆಗೆ ತಲೆಮಾರುಗಳಿಂದ ನೆನಪಿಸಿಕೊಳ್ಳುತ್ತ ಬರುವ ಮಹಾನೀಯರುಗಳಲ್ಲಿ ಸಂತ ಕವಿ ಸರ್ವಜ್ಞರು ಸಹ ಒಬ್ಬರಾಗಿದ್ದಾರೆ ಎಂದು ಹೇಳಿದರು. ಕುಂಬಾರ ಸಂಘದ ಅಧ್ಯಕ್ಷ ಎಚ್.ಎಸ್.ಪ್ರಕಾಶ್ ಮಾತನಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ವಿ.ಎನ್.ಮಲ್ಲಿಕಾರ್ಜುನ ಸ್ವಾಮಿ, ಸಹಾಯಕ ನಿರ್ದೇಶಕ ಡಾ.ಎಂ.ಡಿ.ಸುದರ್ಶನ್, ಅತಿಥಿಗಳಾದ ಕೆ.ಪಿ.ವೆಂಕಟೇಶ್, ಬಾಲಕೃಷ್ಣ, ಡಾ.ಗೌರಿ ಶೆಟ್ಟಿ, ವಾಸು, ಮಂಜುನಾಥ್, ಯಮುನಾ ನಾಗರಾಜ್, ಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

---

**ಮೊದಲ ಪುಟದಿಂದ**

## ಕೇಂದ್ರಕ್ಕೆ ಪ್ರಸ್ತಾವನೆ ಸಲ್ಲಿಕೆ

ದಾಖಲೆಗಳನ್ನ ನೀಡುವ ಅಗತ್ಯ ಇಲ್ಲ ಎಂದು ನೀರಾವರಿ ನಿಗಮ ಕೇಂದ್ರ ಸರ್ಕಾರಕ್ಕೆ ಉತ್ತರ ನೀಡಿದೆ. ಜತೆಗೆ, ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಸ್ಥಾಯಿ ಸಮಿತಿಯಿಂದ ವನ್ಯಜೀವಿ ಅನುಮೋದನೆ ಪಡೆಯಲು ಮತ್ತೊಂದು ಪ್ರಸ್ತಾವ ಸಲ್ಲಿಸಿದೆ.

## ಪ್ರವಾಸಕ್ಕೆ ನಿರಾಕರಿಸಿದ ಪತಿ: ಪತ್ನಿ ಆತ್ಮಹತ್ಯೆ

ನಡುವೆ ಜಗಳವಾಗಿದೆ. ಗಂಡ ಮನೆಯಿಂದ ಹೊರಹೋದ ನಂತರ ಫ್ಯಾನ್‌ಗೆ ನೇಣು ಹಾಕಿಕೊಂಡಿದ್ದಾರೆ. ತನ್ನ ಅಕ್ಕನ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿ ಸಹೋದರ ಗುರುಮೂರ್ತಿ ದೂರು ನೀಡಿದ್ದಾರೆ. ಪತಿ ಹಾಗೂ ಮಗನ ಮೇಲೆ ಅನುಮಾನ ವ್ಯಕ್ತಪಡಿಸಿದ್ದಾರೆ. ಸರಸ್ವತಿಪುರಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ತಾಪಮಾನ ಹೆಚ್ಚಳ ಮನ್ಸೂಚನೆ

ತಾಪಮಾನ ಶೇಕಡಾ 65ರಿಂದ 75ರಷ್ಟು ಹೆಚ್ಚಾಗುವ ಸಾಧ್ಯತೆ ಎಂದು ಐಎಂಡಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಈ ನಡುವೆ ಹವಾಮಾನ ತಜ್ಞರು ಫೆಬ್ರವರಿಯಲ್ಲೇ ಉಷ್ಣತೆ ಏರಿಕೆಯಾಗುತ್ತಿರುವುದನ್ನು ಗಮನಿಸಿದ್ದಾರೆ. ಮುಂದಿನ ತಿಂಗಳುಗಳಲ್ಲಿ ಇದು ಮತ್ತಷ್ಟು ಹೆಚ್ಚಾಗುವ ಸಾಧ್ಯತೆ ಇದೆ. ನಾಗರಿಕರು ಈ ಅವಧಿಯಲ್ಲಿ ಎಚ್ಚರಿಕೆಯಿಂದ ಇರಬೇಕು ಎಂದು ಐಎಂಡಿ ಸಲಹೆ ನೀಡಿದೆ.

## ಬೂದಿಮುಚ್ಚಿದ ಕೆಂಡ

ಇಲ್ಲದಿದ್ದರೆ ನಾವು ಅಂಗಡಿ ಮುಂಗಟ್ಟುಗಳನ್ನು ಬಂದ್ ಮಾಡುತ್ತೇವೆ ಎಂದು ಪಟ್ಟು ಹಿಡಿದರು.

ಪೊಲೀಸರ ಜೊತೆ ವಾಗ್ವಾದ ನಡೆಯುವ ಸಂದರ್ಭದಲ್ಲೇ ಉದ್ರಿಕ್ತರು ಕೆಲವು ಮನೆಗಳ ಮೇಲೆ ಕಲ್ಲು ತೂರಾಟ ಮಾಡಿದ್ದಾರೆ. ಮೀನು ಮಾರುಕಟ್ಟೆ, ತರಕಾರಿ ಮಾರುಕಟ್ಟೆಯಲ್ಲಿರುವ ಅಂಗಡಿಗಳ ಮೇಲೆ ಕಲ್ಲು ತೂರಾಟ ನಡೆದಿದೆ. ಉದ್ರಿಕ್ತರನ್ನ ಚದುರಿಸಲು ಪೊಲೀಸರು ಲಘು ಲಾಠಿ ಪ್ರಹಾರ ನಡೆಸಿ ಪರಿಸ್ಥಿತಿ ನಿಯಂತ್ರಿಸಿದ್ದಾರೆ.

## ತಪ್ಪಿತಸ್ಥರ ವಿರುದ್ಧ ಕ್ರಮ: ಸಿಎಂ

**ಬಗ್ಗೆ ಹಿರಿಯ ಪೊಲೀಸ್ ಅಧಿಕಾರಿಗಳ ಬಳಿ ಚರ್ಚಿಸಿದ್ದೇನೆ. ನಿಷ್ಪಕ್ಷಪಾತ ತನಿಖೆ ನಡೆಸಿ, ದುಷ್ಕೃತ್ಯ ಎಸಗಿದ ಪುಂಡರಿಗೆ ಕಾನೂನಿನ ಮೂಲಕ ತಕ್ಕ ಉತ್ತರ ನೀಡುವಂತೆ ಸೂಚನೆ ನೀಡಿದ್ದೇನೆ ಎಂದು ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಈಗಾಗಲೇ ಪ್ರಕರಣದ ಸಂಬಂಧ ಕೆಲವು ಆರೋಪಿಗಳನ್ನು ಬಂಧಿಸಿ, ವಿಚಾರಣೆಗೆ ಒಳಪಡಿಸಲಾಗುತ್ತಿದ್ದು, ಘಟನೆಗೆ ಕಾರಣರಾದ ಪ್ರತಿಯೊಬ್ಬರಿಗೂ ಶಿಕ್ಷೆ ನಿಶ್ಚಿತ. ನಾಡಿನ ಜನರಿಗೆ ಭಯಮುಕ್ತ ನೆಮ್ಮದಿಯ ಬದುಕು ನೀಡುವುದು ನಮ್ಮ ಮೊದಲ ಆದ್ಯತೆ. ಜನರ ಶಾಂತಿ-ನೆಮ್ಮದಿಗೆ ಭಂಗ ತರುವ ಯಾವುದೇ ವ್ಯಕ್ತಿ-ಶಕ್ತಿಗಳನ್ನು ನಾವು ಸಹಿಸುವುದಿಲ್ಲ ಎಂದು ಅವರು ತಿಳಿಸಿದ್ದಾರೆ.**

## ಐಐಎಫ್‌ಎಲ್ ಸೇವೆ ಅನನ್ಯ



**ಪಿರಿಯಾಪಟ್ಟಣ:** ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ದಾನಿಗಳ ಸಹಕಾರವೂ ಅತ್ಯಗತ್ಯ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಪ್ರಸನ್ನ ತಿಳಿಸಿದರು.

ತಾಲೂಕಿನ ಭುವನಹಳ್ಳಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೆ ಇಂಡಿಯಾ ಇನ್ಫೋಲೈನ್ ಫೈನಾನ್ಸ್ ಲಿಮಿಟೆಡ್ ಸಂಸ್ಥೆ ವತಿಯಿಂದ ಸ್ಮಾರ್ಟ್ ಕ್ಲಾಸ್ ಗಾಗಿ ನೀಡಿದ ಟಿವಿ, ಪ್ಯಾನೆಲ್ ಹಾಗೂ ಸಾಫ್ಟ್ ವೇರ್‌ಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಸರ್ಕಾರಿ ಶಾಲೆಗಳು ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ಕಡಿಮೆ ಇಲ್ಲದಂತೆ ಉತ್ತಮ ಶಿಕ್ಷಣ ಹಾಗೂ ಫಲಿತಾಂಶ ನೀಡುತ್ತಿವೆ. ಸರ್ಕಾರವು ಶಾಲೆಗಳ ಅಭಿವೃದ್ಧಿಗೆ ಮತ್ತು ವಿದ್ಯಾರ್ಥಿಗಳಿಗೆ ಉತ್ತಮ ವಿದ್ಯಾಭ್ಯಾಸ ನೀಡಲು ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಎಂದರು.

ಆರಕ್ಷಕ ಉಪ ನಿರೀಕ್ಷಕ ಅಜಯ್ ಕುಮಾರ ಮಾತನಾಡಿದರು. ಕ್ಷೇತ್ರ ಅಧಿಕಾರಿ ಕೆ.ಎಸ್.ಹರೀಶ್, ಪಿಡಿಒ ಹರೀಶ್, ಎಸ್ ಡಿಎಂಸಿ ಅಧ್ಯಕ್ಷ ಶೇಖರ್, ಮುಖ್ಯ ಶಿಕ್ಷಕಿ ಸರೋಜ, ಸಂಸ್ಥೆಯ ವ್ಯವಸ್ಥಾಪಕ ಸೋಮಶೇಖರ್, ವಿಭಾಗಾಧಿಕಾರಿ ವೆಂಕಟೇಶ್ ಹಾಜರಿದ್ದರು.

---

# ಮಂಡ್ಯ ಅಭಿವೃದ್ಧಿಗೆ ಎಲ್ಲರೂ ಒಟ್ಟಾಗೋಣ

ಹಣ ಮೀಸಲು ಇಡಲಾಗಿದ್ದು, 100 ಎಕರೆ ಜಾಗ ಬೇಕೆಂದು ರಾಜ್ಯದ ಮುಖ್ಯಮಂತ್ರಿಗಳಿಗೆ ಪತ್ರ ಬರೆದಿದ್ದೇನೆ. ಅದಷ್ಟು ಬೇಗ ರಾಜ್ಯ ಸರ್ಕಾರ ಸೂಕ್ತ ಜಾಗವನ್ನು ಕೆಐಎಡಿಬಿಯಿಂದ ಗುರುತಿಸಿ ಅಭಿವೃದ್ಧಿ ಮಾಡಿ ನಮಗೆ ಹಸ್ತಾಂತರ ಮಾಡ ಬೇಕು. ಜನಪ್ರತಿನಿಧಿಗಳಿಗೆ ಜಾಗ ಕೊಡುವ ಅಧಿಕಾರ ಇಲ್ಲ. ಈ ಬಗ್ಗೆ ರಾಜಕೀಯ ಅಗತ್ಯ ಇಲ್ಲ ಎಂದು ಹೇಳಿದರು.

ಆಟೋಮೋಟಿವ್ ರಿಸರ್ಚ್ ಅಸೋಸಿಯೇಷನ್ ಆಫ್ ಇಂಡಿಯಾ (ಎಆರ್‌ಎಐ) ಕೇಂದ್ರಕ್ಕೆ ಕೊನೆಪಕ್ಷ 1000 ಕೋಟಿಯನ್ನಾದರೂ ಹೂಡಿಕೆ ಮಾಡಲಾಗುವುದು. ಈ ಯೋಜನೆ ಮಂಡ್ಯದ ಚಿತ್ರಣವನ್ನೇ ಬದಲಿಸಲಿದೆ. ಉದ್ಯೋಗ ಸೃಷ್ಟಿ ಅಷ್ಟೇ ಅಲ್ಲದೆ, ಪರೋಕ್ಷ ಉದ್ಯೋಗಗಳನ್ನು ಭಾರೀ ಪ್ರಮಾಣದಲ್ಲಿ ಸೃಷ್ಟಿಸಿ ದೊಡ್ಡ ಮಟ್ಟದ ಆಟೋ ಇಕೋ ಸಿಸ್ಟಮ್ ಅನ್ನು ಸೃಷ್ಟಿ ಮಾಡುತ್ತದೆ. ಜತೆಗೆ ಮತ್ತೊಂದು ಕೈಗಾರಿಕೆಯನ್ನು ತರುವ ಬಗ್ಗೆ ನಾನು ನಿಕಟವಾಗಿ ಕೆಲಸ ಮಾಡುತ್ತಿದ್ದೇನೆ ಎಂದು ತಿಳಿಸಿದರು.

**ಶಂಕುಸ್ಥಾಪನೆಗೆ ಬರುವಂತೆ ಒತ್ತಡ ಹಾಕುತ್ತಿದ್ದಾರೆ:**

ನಾನು ಮಾಡುವ ಕೆಲಸಕ್ಕೆ ಶಂಕುಸ್ಥಾಪನೆ ಮಾಡುವ ಪರಿಪಾಠ ಇಟ್ಟುಕೊಂಡವನಲ್ಲ. ಆದರೆ, ಇತ್ತೀಚೆಗೆ ಶಂಕುಸ್ಥಾಪನೆಗೆ ಬರಲೇಬೇಕು ಎಂದು ಒತ್ತಡ ಹೇರಲಾಗುತ್ತಿದೆ. ಚನ್ನಪಟ್ಟಣದಲ್ಲಿ ನಾನು ಸಾವಿರಾರು ಕೋಟಿ ಮೊತ್ತದ ಅಭಿವೃದ್ಧಿ ಕೆಲಸ ಗಳನ್ನು ಮಾಡಿದೆ. ಒಂದು ದಿನವೂ ನಾನು ಕ್ಷೇತ್ರಕ್ಕೆ ಹೋಗಿ ಅಡಿಗಲ್ಲು ಹಾಕಿ ಹೆಸರು ಕೆತ್ತಿಸಿಕೊಳ್ಳುವ ಕೆಲಸ ಮಾಡಲಿಲ್ಲ. ಈಗ ನೋಡಿದರೆ ಕೆಲವರು ಅಲ್ಲಿ ಕುಜರಾಸ್ವಾಮಿ ಅವರ ಸಾಕ್ಷಿಗುಡ್ಡೆ ಏನು ಎಂದು ಕೇಳುತ್ತಿದ್ದಾರೆ! ಎಂದು ಅವರು ಅಚ್ಚರಿ ವ್ಯಕ್ತಪಡಿಸಿದರು.

ಸಮತೋಲಿತ ಅಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧವಾಗಿದೆ. ಆ ನಿಟ್ಟಿನಲ್ಲಿ ನಾವು ಪ್ರಧಾನಿ ನರೇಂದ್ರ ಮೋದಿ ಅವರ ಮಾರ್ಗದರ್ಶನದಂತೆ ಕೆಲಸ ಮಾಡು ತ್ತಿದ್ದೇವೆ. ಅವರ ನೇತೃತ್ವದಲ್ಲಿ ಭಾರತವು ಜಗತ್ತಿನ ಬೃಹತ್ ಆರ್ಥಿಕ ಶಕ್ತಿಯಾಗಿ ಬೆಳೆಯುತ್ತಿದೆ. ಕೃತಕ ಬುದ್ಧಿಮತ್ತೆ ಕ್ಷೇತ್ರದಲ್ಲಿ ಅಗ್ರದೇಶಗಳಿಗೆ ಸರಿಸಾಟಿ ಆಗುವ ರೀತಿಯಲ್ಲಿ ಭಾರತವನ್ನು ಮುನ್ನಡೆಸುತ್ತಿದ್ದಾರೆ ಎಂದು ಕೇಂದ್ರ ಸಚಿವರು ಬಣ್ಣಿಸಿದರು.

ಶ್ರೀ ಆದಿಚುಂಚನಗಿರಿ ಮಠದ ಪೀಠಾಧ್ಯಕ್ಷ ಶ್ರೀ ಡಾ. ನಿರ್ಮಲಾನಂದನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. 13ನೇ ಪಟ್ಟಾಭಿಷೇಕ ಮಹೋತ್ಸವದ ಹಿನ್ನೆಲೆಯಲ್ಲಿ ಪರಮಪೂಜ್ಯರಿಗೆ ಪುಷ್ಪ ನಮನ ಸಲ್ಲಿಸಲಾಯಿತು. ಮಾದಾರ ಚೆನ್ನಯ್ಯ ಗುರುಪೀಠದ ಶ್ರೀ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿ, ಗೋಸಾಯಿ ಮಠದ ಶ್ರೀ ಮಂಜುನಾಥ ಭಾರತೀ ಸ್ವಾಮೀಜಿ, ಮಾಜಿ ಮುಖ್ಯಮಂತ್ರಿ ಡಿ.ವಿ. ಸದಾ ನಂದಗೌಡ, ಸಚಿವರಾದ ಎನ್. ಚಲುವರಾಯ ಸ್ವಾಮಿ, ಕೆ.ಎಚ್. ಮುನಿಯಪ್ಪ, ಶಾಸಕ ಎಚ್.ಟಿ. ಮಂಜು, ಮಾಜಿ ಶಾಸಕ ಸುರೇಶ್‌ಗೌಡ ಭಾಗವಹಿಸಿದ್ದರು.

# ಗೃಹ ನಿರ್ಮಾಣ ಸಂಘ ಪದಾಧಿಕಾರಿಗಳ ಆಯ್ಕೆ

ಚಾಮರಾಜನಗರ, ತಾಲ್ಲೂಕು ಪತ್ರಕರ್ತರ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷರಾಗಿ ಎಂ.ಈ.ಮಂಜುನಾಥ್ ಹಾಗೂ ಉಪಾಧ್ಯಕ್ಷರಾಗಿ ವೀರಭದ್ರಪ್ಪ ಅವಿರೋಧವಾಗಿ ಆಯ್ಕೆಯಾದರು.

ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಚುನಾವಣೆ ನಡೆದು ಸಂಘದ ಅಧ್ಯಕ್ಷ ಸ್ಥಾನಕ್ಕೆ ಎಂ.ಈ.ಮಂಜುನಾಥ್ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ವೀರಭದ್ರಪ್ಪ ಮಾತ್ರ ನಾಮಪತ್ರ ಸಲ್ಲಿಸಿದ್ದರು. ಈ ಹಿನ್ನೆಲೆಯಲ್ಲಿ ಚುನಾವಣಾಧಿಕಾರಿಯಾದ ಪದ್ಮನಾಭ ಅವರು ಅವಿರೋಧ ಆಯ್ಕೆ ಘೋಷಿಸಿದರು. ಚುನಾವಣೆಯಲ್ಲಿ ಸಂಘದ ನಿರ್ದೇಶಕರಾದ ಆರ್.ಎಂ.ಲಿಂಗಪ್ಪ, ಸಿ.ಮಹೇಂದ್ರ, ವೀರಭದ್ರ ನಾಯಕ, ಕಾಗಲವಾಡಿ ಬಸವಣ್ಣ, ಆರ್. ರಾಜೇಂದ್ರ, ವೈ.ಕೆ.ಮೋಳೆ ಬಸವರಾಜು, ಹೊಸೂರು ರಾಜು, ರಾಮಸಮುದ್ರ ಬಾಬು, ಎಂ.ಜಿ.ಶ್ರೀಕಾಂತ್ ಪಾಲ್ಗೊಂಡಿದ್ದರು. ನೂತನ ಅಧ್ಯಕ್ಷರಾದ ಎಂ.ಈ. ಮಂಜು ನಾಥ್ ಮಾತನಾಡಿ, ಸಂಘದ ನಿರ್ದೇಶಕರು ಮತ್ತು ಸದಸ್ಯರು ನನ್ನ ಮೇಲೆ ವಿಶ್ವಾಸವಿಟ್ಟು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಅವರ ನಿರೀಕ್ಷೆಗಳನ್ನು ಹುಸಿಗೊಳಿಸುವುದಿಲ್ಲ. ಸಂಘದ ಸದಸ್ಯರು ಮತ್ತು ನಿರ್ದೇಶಕರನ್ನು ವಿಶ್ವಾಸಕ್ಕೆ ತೆಗೆದುಕೊಂಡು ನಿವೇಶನ ಕೊಡಿಸಲು ಶ್ರಮ ವಹಿಸಲಾಗುವುದು ಎಂದರು.



ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರನ್ನು ಸನ್ಮಾನಿಸಿ ಮಾತನಾಡಿದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಸಿದ್ದಲಿಂಗಸ್ವಾಮಿ, ನಮ್ಮ ಸಂಘವು ಗೃಹ ನಿರ್ಮಾಣ ಸಹಕಾರ ಸಂಘಕ್ಕೆ ಸಂಪೂರ್ಣ ಸಹಕಾರ ನೀಡಲಿದೆ. ಪತ್ರಕರ್ತರಿಗೆ ನಿವೇಶನ ಕೊಡಿಸಲು ನೂತನ ಪದಾಧಿಕಾರಿಗಳು ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಪ್ರಸಾದ್ ಲಕ್ಕೂರು, ಖಜಾಂಚಿ ಆರ್.ಸಿ. ಪುಟ್ಟರಾಜು, ಉಪಾಧ್ಯಕ್ಷರಾದ ಬದನಗುಪ್ಪೆ ಪ್ರಸಾದ್, ಹಿರಿಯ ಪತ್ರಕರ್ತರಾದ ಎ.ಡಿ.ಸಿಲ್ವಾ, ಬನಶಂಕರ ಆರಾಧ್ಯ, ಫಾಲಲೋಚನ ಆರಾಧ್ಯ, ವಿಜಯಕುಮಾರ್, ಬಿಳಿಗಿರಿಶ್ರೀನಿವಾಸ್, ಎಚ್.ಎಸ್.ಚಂದ್ರಶೇಖರ್, ಸಿದ್ದಪ್ಪಾಜಿ, ಪ್ರಮೋದ್ ಇತರರಿದ್ದರು.

# ಸರ್ವಜ್ಞನ ತತ್ವ ಸರ್ವಕಾಲಿಕ ಕನ್ನಡಿ



ಗುಂಡ್ಲುಪೇಟೆ: ಪ್ರತಿಯೊಬ್ಬರು ಸಂತ ಕವಿ ಸರ್ವಜ್ಞನ ತತ್ವ ಆದರ್ಶ ಬುದುಕಿಗೆ ಸರ್ವಕಾಲಿಕ ಕನ್ನಡಿಯಾಗಿದೆ ಎಂದು ತಹಶೀಲ್ದಾರ್ ಎಂ ಎಸ್ ತನ್ಮಯ್ ಸಲಹೆ ನೀಡಿದರು.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ತಾಲೂಕು ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿವತಿಯಿಂದ ನಡೆದ ಸರ್ವಜ್ಞ ಜಯಂತಿ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರ ಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು ಸರ್ವಜ್ಞ ಸಂಕೇತದ ಮೂಲಕ ಸರಳ ಭಾಷೆಯಲ್ಲಿ ಜೀವನ ಸಂದೇಶಗಳನ್ನು.ನೀಡಿದರು 'ಜೀವನದಲ್ಲಿ ಸೌಜನ್ಯ, ಜ್ಞಾನಾರ್ಜನೆಯ ಅಗತ್ಯತೆಯನ್ನು ಮನೋಜ್ಞವಾಗಿ ಪ್ರತಿಪಾದಿಸಿದ್ದಾರೆ. ಅಧಿಕಾರದಲ್ಲಿದ್ದವರು ಹೇಗೆ ನಡೆದುಕೊಳ್ಳಬೇಕು ಎಂಬ ಬಗ್ಗೆ ಕಿವಿಮಾತು ಹೇಳಿದ್ದಾರೆ. ಅವರ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ನಿಷ್ಕಳಂಕವಾಗಿ ಬದುಕು ಸಾಗಿಸಬಹುದು' ಎಂದರು ಕುಂಬಾರ ಸಮುದಾಯದವರು ಉನ್ನತ ಶಿಕ್ಷಣವನ್ನು ಪಡೆದು ಸರ್ವಜ್ಞರ ಮೌಲ್ಯವನ್ನು ಅಳವಡಿಸಿಕೊಳ್ಳುವಂತೆ ಸಲಹೆ ನೀಡಿದರು

ಸರ್ವಜ್ಞನ ತ್ರಿಪದಿಗಳು ಲೌಕಿಕ ವ್ಯವಹಾರ ಜ್ಞಾನದ ಗಣಿಯಾಗಿದೆ. ಲೋಕ ಸಂಚಾರಿಯಾಗಿದ್ದ ಸರ್ವಜ್ಞ ತಾನು ಕಂಡಿದ್ದನ್ನು, ಯಾವುದೇ ಮುಲಾಜಿಲ್ಲದೇ ತನ್ನ ವಿಚಾರಧಾರೆಗಳಲ್ಲಿ ವ್ಯಕ್ತಪಡಿಸಿದ್ದಾರೆ. ವೈಚಾರಿಕ, ವೈಜ್ಞಾನಿಕವಾಗಿ ಲೋಕದ ಡೊಂಕು ತಿದ್ದುವ ನಿಟ್ಟನಲ್ಲಿ ಸಂದೇಶ ನೀಡಿದ್ದಾರೆ ಎಂದರು

ಸಾಹಿತಿ ದೇವರಾಜು ಮಾತನಾಡಿ ಸರ್ವಜ್ಞನ ವಚನಗಳು ಇಂದಿಗೂ ದಾರಿದೀಪವಾಗಿದ್ದು ಜೀವನದಲ್ಲಿ ಅವರ ಚಿಂತನೆಗಳನ್ನು ಅಳವಡಿಸಿಕೊಂಡರೆ ಅವರಿಗೆ ಗೌರವ ನೀಡಿದಂತಾಗುತ್ತದೆ ಎಂದರು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಹೆಚ್ಚು ಅಂಕ ಪಡೆದ ಕುಂಬಾರ ಸಮುದಾಯದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಸಮುದಾಯದ ಮುಖಂಡ ವೆಂಕಟರಾಜು ಮಾತನಾಡಿದರು ಪುರಸಭೆ ಮಾಜಿ ಅಧ್ಯಕ್ಷೆ ಬಾಗ್ಯಮ್ಮ ಮಾಜಿ ಸದಸ್ಯ ಹನಮಂತಶೆಟ್ಟಿ ಗ್ರಾಮ ಪಂ ಮಾಜಿ ಸದಸ್ಯ ನಾಗರಾಜ್ ಮುಖಂಡರಾದ ನಾಗಶೆಟ್ಟಿ ಸಂಪತ್ತು. ಮಂಜುನಾಥ್ ಬಾಚಹಳ್ಳಿ ಸೇರಿದಂತೆ ಇತರರಿದ್ದರು

# ಮುದ್ರಣ ಮಾಧ್ಯಮದಲ್ಲಿ ಕೌಶಲ್ಯ ಮುಖ್ಯ



ಮೈಸೂರು: ಮುದ್ರಣ ಮಾಧ್ಯಮದಲ್ಲಿ ಉದ್ಯೋಗ ಪಡೆಯಲು ಪದವಿಗಳು ಎಷ್ಟು ಮುಖ್ಯವೋ ಕೌಶಲ್ಯಗಳನ್ನು ಬೆಳೆಸಿಕೊಳ್ಳುವುದು ಅತ್ಯಂತ ಅತ್ಯವಶ್ಯಕ ಎಂದು ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಹೇಳಿದರು.

ನಗರದ ಊಟಿ ರಸ್ತೆಯ ಜೆಎಸ್‌ಎಸ್ ಕಲಾ, ವಾಣಿಜ್ಯ, ಮತ್ತು ವಿಜ್ಞಾನ ಕಾಲೇಜಿನ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಶುಕ್ರವಾರ ಏರ್ಪಡಿಸಿದ್ದ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ 'ಮುದ್ರಣ ಮಾಧ್ಯಮದಲ್ಲಿ ಉದ್ಯೋಗವಕಾಶಗಳು' ಕುರಿತು ಅವರು ಮಾತನಾಡಿದರು.

ಇಂದಿನ ಪತ್ರಿಕೋದ್ಯಮವು ಭೂಮಿಯಿಂದ ಆಕಾಶದೆತ್ತರಕ್ಕೂ ವಿಸ್ತಾರವಾಗಿರುವ ಕ್ಷೇತ್ರವಾಗಿದೆ, ಇದರಲ್ಲಿ ಉದ್ಯೋಗವಕಾಶಕ್ಕಾಗಿ ಕೇವಲ ಪದವಿಗಳಷ್ಟೇ ಸಾಲುವುದಿಲ್ಲ, ಉತ್ತಮ ಭಾಷಾ ಕೌಶಲ್ಯ, ಉತ್ತಮ ಬರವಣಿಗೆ, ಭಾಷಾಂತರಿಸುವಿಕೆ, ಡಿಜಿಟಲ್ ಸಾಕ್ಷರತೆ, ಹಾಗೂ ನಿರಂತರ ಕಲಿಯುವಿಕೆ– ಹೀಗೆ ಹಲವು ಕೌಶಲ್ಯಗಳನ್ನು ರೂಢಿಸಿಕೊಳ್ಳುವುದು ಕೂಡ ಬಹು ಮುಖ್ಯ ಎಂದರು. ಮುದ್ರಣ ಮಾಧ್ಯಮವನ್ನು ಅವಸರದ ಸಾಹಿತ್ಯ ಎಂದು ಕರೆದರೂ ಸಹಾ ಇಂದಿಗೂ ಮಾಧ್ಯಮ ಕ್ಷೇತ್ರದಲ್ಲಿ ತನ್ನ ವಿಶ್ವಾಸರ್ಹತೆಯನ್ನು ಉಳಿಸಿಕೊಂಡಿ ರುವ, ಎಲ್ಲರ ನಂಬಿಕೆಗೆ ಪಾತ್ರವಾಗಿರುವ ಮಾಧ್ಯಮ ಅಂದರೆ ಅದು ಪತ್ರಿಕಾ ಮಾಧ್ಯಮ ಎಂದರು. ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಆಶಾ, ಪತ್ರಿಕೋದ್ಯಮ ಮತ್ತು ಸಮೂಹ ಸಂಹವನ ವಿಭಾಗದ ಮುಖ್ಯಸ್ಥೆ ಫಿಲೋಮಿನಾ, ವಿಭಾಗದ ಸಹಾಯಕ ಪ್ರಾಧ್ಯಾಪಕಿ ಶ್ರೀವಲ್ಲಿ ರಟ್ಟೇಹಳ್ಳಿ ಇತರರು ಇದ್ದರು.



## ಕೃಷ್ಣ ವಂದನ

ಸ್ನೇಹಾ ಆನಂದ್



### ಹೇ ಕೃಷ್ಣಾ !

ಹೂವ ಹಾಕಿದರೇನು
ಜಪವ ಮಾಡಿದರೇನು
ಕಸುವಿಲ್ಲ ಮನದ ಕಸ ಗುಡಿಸಿದೇ!

ಗುಡಿ,ಗುಂಡಾರವ ಸುತ್ತಿ,
ತುಪ್ಪದಾರತಿ ಎತ್ತಿ ತಪ್ಪನ್ನು ತಿದ್ದದೆ, ಒಪ್ಪುವನೇ ಆ ಕೃಷ್ಣಪ್ಪ!

ನೈವೇದವನು ಇಟ್ಟು , ಮಡಿ ಬಟ್ಟೆಯನು ಉಟ್ಟು
ಮನದ ಕಲ್ಮಶದೂಡದೆ ಅಪ್ಪುವನೇ
ಆ ತಿಮ್ಮಪ್ಪ!

ಸಿಟ್ಟು , ಸೇಡಿಗೆ ಶಿರವಿಟ್ಟು!
ಮನದ ಭಾವಿಯೊಳು ಕಿಡಿಯಿಟ್ಟು!
ಪುಣ್ಯಗಳ ಫಲ ಕೋರಿದರೆ ಕೊಡುವನೇ
ಆ ಬಪ್ಪ!

# ರೈತ ಪರ ಬಜೆಟ್‌ಗೆ ಒತ್ತಾಯ

## ಸುದ್ದಿಗೋಷ್ಠಿಯಲ್ಲಿ ಬಡಗಲಪುರ ನಾಗೇಂದ್ರ ಒತ್ತಾಯ



ಮೈಸೂರು: ಕಾಂಗ್ರೆಸ್ ಪಕ್ಷ ಚುನಾವಣಾ ಪೂರ್ವ ಮಾತು ಕೊಟ್ಟಂತೆ ಭೂ ಸುಧಾರಣಾ ತಿದ್ದುಪಡಿ ಕಾಯ್ದೆಯನ್ನು ವಾಪಸ್ ಪಡೆಯಬೇಕು. ಎ.ಪಿ.ಎಂ.ಸಿ ಕಾಯ್ದೆಯನ್ನು ಮತ್ತಷ್ಟು ರೈತ ಸ್ನೇಹಿ ಆಗಿ ಗಟ್ಟಿಗೊಳಿಸಬೇಕು. ಬಿ.ಜೆ.ಪಿ ಸರ್ಕಾರ ತಂದಿರುವ ಜಾನುವಾರು ಹತ್ಯೆ ನಿಷೇದ ಮತ್ತು ಸಂರಕ್ಷಣಾ ತಿದ್ದುಪಡಿ ಕಾಯ್ದೆಯನ್ನು ವಾಪಸ್ ಪಡೆಯಬೇಕೆಂಬುದು ಸೇರಿ ರೈತರ ಹಲವು ಬೇಡಿಕೆಗಳ ಈಡೇರಿಕೆಗೆ ಈ ಬಾರಿ ಬಜೆಟ್‌ನಲ್ಲಿ ಆದ್ಯತೆ ನೀಡಬೇಕೆಂದು ಬಡಗಲಪುರ ನಾಗೇಂದ್ರ ಒತ್ತಾಯಿಸಿದರು.

ಈ ಸಂಬಂಧ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕರ್ನಾಟಕ ರೈತರ ಆತ್ಮಹತ್ಯೆಯಲ್ಲಿ 2ನೇ ಸ್ಥಾನದಲ್ಲಿದ್ದು. ಕೃಷಿಕರು ಅನಿಶ್ಚಿತತೆ ಮತ್ತು ಅಭದ್ರತೆಯಿಂದ ಜೀವನ ಸಾಗಿಸುತ್ತಿದ್ದಾರೆ. ಕೃಷಿಕರನ್ನು ಆರ್ಥಿಕವಾಗಿ ಸದೃಢರನ್ನಾಗಿಸುವ ದೃಷ್ಟಿಯಿಂದ ಈ ಸಾಲಿನ ಬಜೆಟ್‌ನಲ್ಲಿ ಕೃಷಿ ಮತ್ತು ಕೃಷಿಕರಿಗೆ ಮೊದಲ ಆಧ್ಯತೆ ನೀಡಬೇಕು. ಮೈಸೂರು ಜಿಲ್ಲೆಯ ನೀರಾವರಿ ಯೋಜನೆಗಳು ಮತ್ತು ಹೊಸ ತಾಲ್ಲೂಕುಗಳಾದ ಸರಗೂರು ಹಾಗೂ ಸಾಲಿಗ್ರಾಮ ತಾಲ್ಲೂಕು ಕೇಂದ್ರಗಳ ಅಭಿವೃದ್ಧಿಗಾಗಿ ವಿಶೇಷ ಅನುದಾನ ನೀಡಬೇಕು. ದಿನಾಂಕ–17–02–2026ರಂದು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬಜೆಟ್ ಪೂರ್ವ ರೈತ ಮುಖಂಡರ ಸಮಾಲೋಚನಾ ಸಭೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ಪ್ರಮುಖ ಪದಾಧಿಕಾರಿಗಳು ಪಾಲ್ಗೊಂಡು ಕೃಷಿ ಮತ್ತು ಗ್ರಾಮೀಣ ಕ್ಷೇತ್ರಕ್ಕೆ ಆಧ್ಯತೆ ನೀಡುವ ಸಂಬಂಧ 19 ಅಂಶದ ಹಕ್ಕೊತ್ತಾಯ ಹಾಗೂ 13 ವಿಶೇಷ ಮತ್ತು ನಿರ್ಧಿಷ್ಟ ಕಾರ್ಯಕ್ರಮವನ್ನು ಈ ಆಯವ್ಯಯದಲ್ಲಿ ಘೋಷಿಸುವಂತೆ ಲಿಖಿತ ಹಕ್ಕೊತ್ತಾಯ ಪತ್ರವನ್ನು ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗಿದೆ ಎಂದರು.

ಜಿಲ್ಲೆಯ ಪಿರಿಯಾಪಟ್ಟಣ, ಹುಣಸೂರು, ಹೆಚ್.ಡಿ.ಕೋಟೆ, ನಂಜನಗೂಡು, ಚಾಮರಾಜನಗರ ಜಿಲ್ಲೆಯ ಗುಂಡ್ಲುಪೇಟೆ ಮತ್ತು ಹಾಸನ ಜಿಲ್ಲೆಯ ಅರಕಲಗೂಡು ತಾಲ್ಲೂಕಿನಲ್ಲಿ ವರ್ಜಿನೀಯ ತಂಬಾಕು ಪ್ರಮುಖ ವಾಣಿಜ್ಯ ಬೆಳೆಯಾಗಿದ್ದು, ತಂಬಾಕು ಬೆಳೆಯು ಹೆಚ್ಚಿನ ಉದ್ಯೋಗ ಸೃಷ್ಟಿಗೆ ಕಾರಣವಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ಹೆಚ್ಚಿನ ತೆರಿಗೆಯನ್ನು ಭರಿಸುತ್ತಿವೆ. ಆದರೆ, ತಂಬಾಕು ಬೆಲೆ ಕುಸಿತವಾಗಿದ್ದು. ರೈತರು ಕಂಗಾಲಾಗಿದ್ದಾರೆ. ಈ ಸಂಬಂಧ ಕೇಂದ್ರ ಮತ್ತು ರಾಜ್ಯ ಸರ್ಕಾರಕ್ಕೆ ನಿರಂತರವಾಗಿ ಒತ್ತಾಯ ಮಾಡುತ್ತಾ ಬಂದಿದ್ದಾಗಿಯೂ ನಿರ್ಲಕ್ಷ್ಯ ಮಾಡುತ್ತಿವೆ. ತಂಬಾಕು ಬೆಳೆಗಾರರ ರಕ್ಷಣೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಮುಂದಾಗಬೇಕೆಂದು ಆಗ್ರಹಿಸಿದರು.

2013–18ನೇ ಸಾಲಿನ ತಮ್ಮ ನೇತೃತ್ವದ ಸರ್ಕಾರ ದೇಶದಲ್ಲಿ ಮೊದಲನೇ ಬಾರಿಗೆ ಕೃಷಿ ಬೆಲೆ ಆಯೋಗವನ್ನು ಸ್ಥಾಪನೆ ಮಾಡಿರುವ ಹೆಗ್ಗಳಿಕೆ ಇದೆ. ಆದರೆ, ಕೃಷಿ ಬೆಲೆ ಆಯೋಗಕ್ಕೆ ಶಾಸನಾತ್ಮಕ ಬಲ ನೀಡದೇ ಇರುವುದರಿಂದ ಶಿಫಾರಸ್ಸುಗಳು ಯಾವುದೂ ಜಾರಿಗೆ ಬರುತ್ತಿಲ್ಲ. ಕೃಷಿ ಬೆಲೆ ಆಯೋಗವನ್ನು ಶಾಸ್ವತ ಆಯೋಗವಾಗಿ ಘೋಷಿಸಿ, ಶಾಸನಾತ್ಮಕ ಅಧಿಕಾರವನ್ನು ನೀಡಬೇಕು ಎಂದರು. ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧ್ಯಕ್ಷ ಹೊಸೂರು ಕುಮಾರ್, ಸಂಘಟನಾ ಕಾರ್ಯದರ್ಶಿ ಹೊಸ ಕೋಟೆ ಬಸವರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ. ಮರಂಕಯ್ಯ, ತಾಲ್ಲೂಕು ಕಾರ್ಯದರ್ಶಿ ಮಂಟಕಳ್ಳಿ ಮಹೇಶ್, ಜಿಲ್ಲಾ ಕಾರ್ಯದರ್ಶಿ ನಾಗನಹಳ್ಳಿ ವಿಜಯೇಂದ್ರ ಪತ್ರಿಕಾಗೋಷ್ಠಿಯಲ್ಲಿ ಇದ್ದರು.

### ಸಫಾರಿಯನ್ನು ಪುನರಾರಂಭ ಮಾಡಬಾರದು

**ಮೈಸೂರು–ಚಾಮರಾಜನಗರ ಜಿಲ್ಲೆಯಲ್ಲಿ ವನ್ಯ ಜೀವಿ ಮತ್ತು ಮಾನವ ಸಂಘರ್ಷಗಳಿಂದ ಸಾವು–ನೋವುಗಳು ಆಗುತ್ತಲೆ ಇವೆ. ಸರಣಿ ಹುಲಿ ದಾಳಿ ನಡೆದ ನಂತರ ಸಂಘದ ಒತ್ತಾಯದ ಮೇರೆಗೆ ಸಫಾರಿಯನ್ನು ನಿಲ್ಲಿಸಲಾಗಿತ್ತು. ಸಫಾರಿ ಸ್ಥಗಿತಗೊಳಿಸಿದ ನಂತರ ವನ್ಯಜೀವಿ ಮತ್ತು ಮಾನವ ಸಂಘರ್ಷ ಕಡಿಮೆಯಾಗಿದೆ. ಇದನ್ನು ಅರಣ್ಯ ಮಂತ್ರಿಯವರೇ ಸ್ವತಃ ಒಪ್ಪಿ ಹೇಳಿಕೆ ನೀಡಿರುತ್ತಾರೆ. ಆದರೆ, ಸರ್ಕಾರ ಒತ್ತಡಕ್ಕೆ ಮಣಿದು ಮತ್ತೆ ಸಫಾರಿಯನ್ನು ಪ್ರಾರಂಭ ಮಾಡಲು ಹೊರಟಿರುವುದು ಖಂಡನೀಯ. ಯಾವುದೇ ಕಾರಣಕ್ಕೂ ಸಫಾರಿಯನ್ನು ಪುನರಾರಂಭ ಮಾಡಬಾರದು ಎಂದರು.**

# ಒಳ ಮೀಸಲು ಸಾಮೂಹಿಕ ಹೋರಾಟ ಅಗತ್ಯ: ಎನ್.ಭಾಸ್ಕರ್



**ಒಳ ಮೀಸಲು ಹಂಚಿಕೆ ಸಂಬಂಧ ಮುಂದಿನ ಹೋರಾಟದ ಕುರಿತಾಗಿ ಚರ್ಚಿಸಲು ಫೆ. 22ರಂದು ಸಂಜೆ 5 ಗಂಟೆಗೆ ಜಲದರ್ಶಿನಿ ಅತಿಥಿಗೃಹದಲ್ಲಿ ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ಮತ್ತು ಕರ್ನಾಟಕ ಬಲಗೈ ಜಾತಿಗಳ ಒಕ್ಕೂಟದ ವತಿಯಿಂದ ಶ್ರೀ ಜ್ಞಾನಪ್ರಕಾಶ ಸ್ವಾಮೀಜಿ ಅಧ್ಯಕ್ಷತೆಯಲ್ಲಿ ಸಭೆ ಆಯೋಜಿಸಲಾಗಿದೆ. ಸಮುದಾಯದ ಮುಖಂಡರು, ಜನಪ್ರತಿನಿಧಿಗಳು ಪಾಲ್ಗೊಳ್ಳಬೇಕು.**

**ಎನ್.ಭಾಸ್ಕರ್** ರಾಜ್ಯಾಧ್ಯಕ್ಷ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ

ಮೈಸೂರು: ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗಮೋಹನ್ ದಾಸ್ ವರದಿಯಿಂದ ಬಲಗೈ ಸಮುದಾಯಕ್ಕೆ ಅನ್ಯಾಯವಾಗಿದ್ದು, ಈ ಅನ್ಯಾಯವನ್ನು ಸರಿಪಡಿಸದೇ ಸರ್ಕಾರ ವಿಧೇಯಕವನ್ನು ಸಿದ್ಧಪಡಿಸಿದೆ. ಸಾಮೂಹಿಕ ನಾಯಕತ್ವದ ಮೂಲಕ ಈ ಸಮಸ್ಯೆ ವಿರುದ್ಧ ಹೋರಾಟ ಮಾಡಬೇಕಿದೆ ಎಂದು

ಎಂದು ಕೆಪಿಸಿಸಿ ಸಂಯೋಜಕ, ಸಂವಿಧಾನ ಸಂರಕ್ಷಣಾ ಹೋರಾಟ ಸಮಿತಿ ರಾಜ್ಯಾಧ್ಯಕ್ಷ ಎನ್.ಭಾಸ್ಕರ್ ತಿಳಿಸಿದ್ದಾರೆ.

ಜಲದರ್ಶಿನಿ ಅತಿಥಿಗೃಹದಲ್ಲಿ ಶುಕ್ರವಾರ ಸಂಜೆ ನಡೆದ ಕಾಂಗ್ರೆಸ್ ಬಲಗೈ ಮುಖಂಡರ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಒಳ ಮೀಸಲಾತಿ ಸಂಬಂಧ ಈಚೆಗೆ ನಡೆಯುತ್ತಿರುವ ಒಡಕಿನ ಬೆಳವಣಿಗೆಗಳು ಅಪಾಯಕಾರಿಯಾಗಿವೆ. ಪಕ್ಷ ಭೇದ ಮರೆತು ಸಮುದಾಯದ ಎಲ್ಲ ನಾಯಕರು ಒಗ್ಗೂಡಿ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯ ತಡೆಯಲು ಶ್ರಮಿಸಬೇಕಿದೆ. ಒಳ ಮೀಸಲಾತಿ ಹೋರಾಟದ ಆರಂಭದಲ್ಲಿಯೇ ವಿದ್ಯಾರ್ಥಿ ಸಂಘಟನೆಗಳು, ಬಲಗೈ ಸಂಘಟನೆಗಳು ಸರಿಯಾಗಿ ಬೆಂಬಲ ವ್ಯಕ್ತಪಡಿಸಿದ ಕಾರಣ ಮತ್ತು ಜಾತಿ ಸಮೀಕ್ಷೆಯಲ್ಲಿ ಒಟ್ಟಿಗೆ ಪಾಲ್ಗೊಳ್ಳದ ಕಾರಣ ಹಿನ್ನೆಡೆಯಾಗಿದೆ. ಸರ್ಕಾರವು ರೋಸ್ಟರ್ ಬಿಂದು ಮಾಡುವ ಸಂದರ್ಭದಲ್ಲಿ ಬಿ ಮತ್ತು ಸಿ ಪ್ರವರ್ಗಕ್ಕೆ ಅನ್ಯಾಯವಾಗುವಂತೆ ಮಾಡಿದೆ. ಇದು ದೊಡ್ಡ ಪ್ರಮಾದವಾಗಿದೆ ಎಂದರು.

ಈಗ ವಿದ್ಯಾರ್ಥಿ ಯುವಜನರನ್ನು ಎತ್ತಿಕಟ್ಟಿ ಸಮುದಾಯದ ಸ್ವಾಮೀಜಿಗಳು, ಸಚಿವರು, ಶಾಸಕರಿಗೆ ಅವಮಾನ ಮಾಡುತ್ತಿರುವುದು ಸರಿಯಲ್ಲ. ಇದರ ಹಿಂದೆ ಯಾರಿದ್ದಾರೆ ಎಂಬುದು ತಿಳಿದಿದೆ. ಈ ಬೆಳವಣಿಗೆಯೂ ಸಮುದಾಯಕ್ಕೆ ಕೆಟ್ಟ ಹೆಸರು ತರುವುದರ ಜತೆಗೆ ಒಡಕಿಗೂ ಕಾರಣವಾಗಲಿದೆ ಎಂಬ ಎಚ್ಚರಿಕೆ ಇರಬೇಕಾಗಿದೆ. ಒಳ ಮೀಸಲಾತಿ ವಿಧೇಯಕ ಮಂಡನೆ ಸಂಬಂಧ ಅಧಿಕಾರಿಗಳು ಶಾಸಕರು, ಸಚಿವರಿಗೆ ಸುಳ್ಳು ಮಾಹಿತಿ ನೀಡಿ ದಿಕ್ಕು ತಪ್ಪಿಸಿ ಈ ಗೊಂದಲ ಸೃಷ್ಟಿಸಿರುತ್ತಾರೆ. ಇದೊಂದು ಪಾಲಿಸಿ ವಿಷಯವಾಗಿರುವುದರಿಂದ ಬಲಗೈ ಸಮುದಾಯದ ಸಚಿವರು, ಶಾಸಕರನ್ನು ಭೇಟಿ ಮಾಡಿ ಚರ್ಚಿಸಬೇಕು. ಸಾಮೂಹಿಕ ನಾಯಕತ್ವದಲ್ಲಿ ಹೋರಾಟ ರೂಪಿಸುವ ಅಗತ್ಯತೆ ಇದೆ ಎಂದು ಹೇಳಿದರು.

ಮುಖಂಡರಾದ ಸಿದ್ದರಾಜು, ಈಶ್ವರ್ ಚಕ್ಕಡಿ, ಭರತ್ ರಾಮಸ್ವಾಮಿ, ಶ್ಯಾಮ ಯೋಗೀಶ್, ರಾಹುಲ್ ಕುಂಬರಹಳ್ಳಿ, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ನಟರಾಜ್, ಕೆಪಿಸಿಸಿ ಕಾನೂನು ಘಟಕದ ಕಾರ್ಯದರ್ಶಿ ತಿಮ್ಮಯ್ಯ, ಮೈಸೂರು ವಕೀಲರ ಸಂಘದ ಉಪಾಧ್ಯಕ್ಷ ಎಂ.ವಿ ಚಂದ್ರಶೇಖರ, ದಲಿತ ವೇದಿಕೆ ಅಧ್ಯಕ್ಷ ನಾಗನಹಳ್ಳಿ ರೇವಣ್ಣ ನಾಗನಹಳ್ಳಿ ಗ್ರಾಮ ಪಂಚಾಯತಿ ಸದಸ್ಯ ಶಂಕರ್, ವಕೀಲರಾದ ಮನೋನ್ಮಣಿ, ದಲಿತ ಮುಖಂಡರಾದ ಚಿಕ್ಕ ಅಂದಾನಿ, ಪ್ರೊ.ಟಿ.ಎಂ ಮಹೇಶ್, ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಂಶೋಧನ ಘಟಕದ ಅಧ್ಯಕ್ಷ ನಾಗರಾಜ್, ಧನಗಳ್ಳಿ ನಟರಾಜ್, ಸಂಗೀತ ನಿರ್ದೇಶಕ ನಾಗೇಶ್ ಕಂದೆಗಾಲ, ಜೋಗಿ ಮಹೇಶ್ ಹಾಜರಿದ್ದರು

# ಕುಡಿಯುವ ನೀರಿನ ಸಮಸ್ಯೆಯಾಗದಿರಲಿ



ಹಾಸನ: ಬೇಸಿಗೆ ಆರಂಭವಾಗುತ್ತಿದ್ದು, ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆಯಾಗದಂತೆ ಮುಂಜಾಗ್ರತಾ ಅಗತ್ಯ ಸಿದ್ದತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಎಂದು ಜಿಲ್ಲಾಧಿಕಾರಿ ಕೆ.ಎಸ್ ಲತಾ ಕುಮಾರಿ ಸೂಚಿಸಿದರು..

ಜಿಲ್ಲಾಧಿಕಾರಿ ಕಚೇರಿಯಲ್ಲಿ ಗುರುವಾರ ಸಂಜೆ ಎಲ್ಲಾ ತಹಶೀಲ್ದಾರ್‌ಗಳೊಂದಿಗೆ ವೀಡಿಯೋ ಸಂವಾದ ಮೂಲಕ ಕುಡಿಯುವ ನೀರು ಸೇರಿದಂತೆ ಇತರೆ ವಿಷಯಗಳ ಕುರಿತು ಸಭೆಯಲ್ಲಿ ಮಾತನಾಡಿದರು. ತಹಸೀಲ್ದಾರ್‌ಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದಲ್ಲಿ ಸಭೆ ನಡೆಸಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದಾದ ಗ್ರಾಮಗಳನ್ನು ಮೊದಲೇ ಗುರುತಿಸಿರಬೇಕು, ಗ್ರಾಮ ಪಂಚಾಯಿತಿಯ ಆಡಳಿತಾ ಧಿಕಾರಿ ಹಾಗೂ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಸಿದ್ಧತೆ ಕೈಗೊಳ್ಳಬೇಕು ಎಂದು ಅಧಿಕಾರಿಗಳು ನಿರ್ದೇಶನ ನೀಡಿದರು.

ಜಾನುವಾರುಗಳಿಗೆ ಮೇವಿನ ಕೊರತೆ ಹಾಗೂ ನೀರಿನ ಕೊರತೆಯಾಗಬಾರದು, ಜಾನುವಾರುಗಳಿಗೆ ಮೇವಿನ ಅಗತ್ಯತೆಯನ್ನು ಈಗಲೇ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು, ಹಿಂದಿನ ವರ್ಷ ಬೇಸಿಗೆಯಲ್ಲಿ ಆದಂತಹ ಸಮಸ್ಯೆಗಳು ಮತ್ತೆ ಮರುಕಳಿಸದಂತೆ ಕ್ರಮವಹಿಸಲು ಸೂಚಿಸಿದರು. ಕುಡಿಯುವ ನೀರಿನ ಸಮಸ್ಯೆಗೆ ಸಹಾಯವಾಣಿ ಪ್ರಾರಂಭ ಮಾಡಬೇಕು, ಸಹಾಯವಾಣಿ ಕಾರ್ಯ ನಿರ್ವಹಿಸಬೇಕು ಹಾಗೂ ಸಹಾಯವಾಣಿಯ ಬಗ್ಗೆ ಹೆಚ್ಚಿನ ಪ್ರಚಾರ ನೀಡಬೇಕು, ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ಬಗೆಹರಿಸಲು ಮಾಡಿಕೊಂಡಿ ರುವ ಸಿದ್ಧತೆಯ ವರದಿಯನ್ನು ಕೂಡಲೇ ಸಲ್ಲಿಸುವ ತಿಳಿಸಿದರು. ಭೂ ಸುರಕ್ಷಾ ಯೋಜನೆಯಡಿ ದಾಖಲೆಗಳ ಡಿಜಿಟಲೀಕರಣ ನಿಗದಿತ ಸಮಯದಲ್ಲಿ ಪೂರ್ಣಗೊಳಿಸಬೇಕು, ಹಕ್ಕು ಪತ್ರ ವಿತರಣೆ ಅಗತ್ಯ ಕ್ರಮವಹಿಸಬೇಕು ಎಂದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಸಕಲೇಶಪುರದ ಅಧಿಕಾರಿ ಮಂಜುನಾಥ್, ತಹಶೀಲ್ದಾರ್‌ಗಳು ಹಾಜರಿದ್ದರು.

# ತರಾತುರಿಯಲ್ಲಿ ಒಳಮೀಸಲು ಜಾರಿ



ಮೈಸೂರು: ರಾಜ್ಯ ಸರ್ಕಾರ ಸದ್ಯದಲ್ಲಿ ಒಳ ಮೀಸಲಾತಿ ಕುರಿತ ವರದಿಗೆ ರಾಜ್ಯಪಾಲರ ಸಂಕಿತ ಪಡೆಯದೆಯೇ ತರಾತುರಿಯಲ್ಲಿ ಅವೈಜ್ಞಾನಿಕವಾಗಿ ಜಾರಿಗೊಳಿಸಲು ಹೊರಟಿದ್ದಾರೆ ಎಂದು ನಾಚನಹಳ್ಳಿ ಪಾಳ್ಯದ ಭೋವಿ ಅಭಿವೃದ್ಧಿ ಸಂಘದ ಕಾರ್ಯದರ್ಶಿ ಮಹದೇವ್ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಪ್ರಸ್ತುತ ಜಾರಿಗೆ ತಂದಿರುವ ಒಳ ಮೀಸಲಾತಿಯಲ್ಲಿ 101 ಜಾತಿಗಳನ್ನು ಎ, ಬಿ, ಸಿ ಪ್ರವರ್ಗ ಎಂಬ ಮಾನದಂಡದಿಂದ ವರ್ಗೀಕರಿಸಲಾಗಿದೆ. ಎಡಗೈ ಮತ್ತು ಅದರ ಸಂಬಂಧಿ ಜಾತಿಗಳಿಗೆ ಶೇ.6, ಬಲಗೈ ಮತ್ತು ಅದರ ಸಂಬಂಧಿತ ಜಾತಿಗಳಿಗೆ ಶೇ.6 ಎಂದು ಬಿಂಬಿಸಿದ ಸರ್ಕಾರ ಕೆಲ ತಪ್ಪು ಮಾಹಿತಿಗಳಿಂದ ಗುರುತಿಸಿದ ಜಾತಿಗಳಾದ ಭೋವಿ, ಕೊರಚನ, ಕೋರ್ಮ, ಬಂಜಾರ ಮೊದಲಾದವಕ್ಕೆ ಶೇ.5ರಷ್ಟು ನಿಗದಿ ಪಡಿಸಿದೆ. ಇದೇ ವೇಳೆ 51 ಜಾತಿಗಳಿಗೆ ಒಳ ಮೀಸಲಾತಿ ಜಾರಿಗೆ ತರುವುದು ಎಂದು ಅನುಮೋದಿಸಿ, ರಾಜ್ಯಪಾಲರ ಅಂಕಿತ ಪಡೆಯದೆಯೇ ಜಾರಿಗೊಳಿಸಹೊರಟಿರುವುದು ಸರಿಯಲ್ಲ ಎಂದರು. ಒಳ ಮೀಸಲಾತಿಯನ್ನು ಸರಿಯಾದ ಮಾನ ದಂಡ, ವೈಜ್ಞಾನಿಕತೆ, ಸ್ಪಷ್ಟತೆಯಿರದೇ ಗೊಂದಲ ಮೂಡಿಸಲಾಗಿದೆ. ಎಲ್ಲ ಪ್ರವರ್ಗಗಳಿಗೆ ಪ್ರಾಧಾನ್ಯತೆ ನೀಡಿ ಸಮುದಾಯಗಳಿಗೆ ಒಳ ಮೀಸಲಾತಿ ತಲು ಪಿಸುವಲ್ಲಿ ಸರ್ಕಾರ ಎಡವಿದೆ ಎಂದು ದೂರಿದರು. ಈಗಿನ ಒಳ ಮೀಸಲಾತಿಯು ಸಿ ಪ್ರವರ್ಗ ಜಾತಿ ಗಳಿಗೆ ಮರಣ ಶಾಸನವಾಗಿದೆ. ಸರ್ಕಾರಿ ನೇಮಕಾ ತಿಯಲ್ಲಿ ಕಟ್ಟಕಡೆಯ ಪ್ರಧಾನ್ಯತೆ ನೀಡಲಾಗಿದೆ. ಇದನ್ನು ಶಾಲೆ, ಕಾಲೇಜು, ವಿವಿಗಳಲ್ಲಿ ಅಳವಡಿಸಿ ದರೆ ಸವಲತ್ತುಗಳಿಂದ ವಂಚಿತರಾಗಬೇಕಾಗುತ್ತದೆ ಎಂಬ ಆತಂಕ ವ್ಯಕ್ತಪಡಿಸಿದರು. ನ್ಯಾ.ನಾಗಮೋಹನ ದಾಸ್ ವರದಿಯ ಸಾರ್ವಜನಿಕವಾಗಿ ಹೆಚ್ಚು ಚರ್ಚೆ ಆಗಬೇಕಾಗಿತ್ತು. ಇದು ವಿಧಾನ ಮಂಡಲದಲ್ಲಿ ಹೆಚ್ಚು ಚರ್ಚೆಗೆ ಒಳಗಾಗಲಿಲ್ಲ ಎಂದು ಬೇಸರಿಸಿದರು. ರಾಮು, ನಾಗರಾಜು, ರಾಜು, ಡಾ.ಆನಂದ್ ಇದ್ದರು.

# ನಾಳೆ ಅಂಬಲಿ ಆತ್ಮಕಥನ ಬಿಡುಗಡೆ




ಮೈಸೂರು: ತಾವು ರಚಿಸಿರುವ ಅಂಬಲಿ ಶೀರ್ಷಿಕೆಯ ಆತ್ಮಕಥನ ಲೋಕಾರ್ಪಣೆ ಸಮಾರಂಭ ಫೆ.22ರ ಬೆಳಗ್ಗೆ 10.30ಕ್ಕೆ ನಗರದ ಇನ್‌ಸ್ಟಿಟ್ಯೂಟ್ ಆಫ್ ಎಂಜಿನಿರ?ಸ್ ಸಭಾಂಗಣದಲ್ಲಿ ನಡೆಯಲಿದೆ ಎಂದು ಡಾ.ಹೆಬ್ಬಾಲೆ ಕೆ.ನಾಗೇಶ್ ತಿಳಿಸಿದರು.

ನಗರದಲ್ಲಿ ಮಹಾ ನಾಯಕ ಭೀಮರಾವ್ ಫೌಂಡೇಷನ್ ವತಿಯಿಂದ ಜರುಗಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಕೆ. ದೀಪಕ್ ಕಾರ್ಯಕ್ರಮ ಉದ್ಘಾಟಿಸುವರು, ಮಡ್ಡಿಕೆರೆ ಗೋಪಾಲ್ ಕೃತಿ ಬಿಡುಗಡೆಗೊಳಿಸುವರು, ಡಾ.ಎಚ್. ಲಕ್ಷ್ಮಿ?ಮನಾರಾಯಣಸ್ವಾಮಿ ಕೃತಿ ಕುರಿತು ಮಾತನಾಡುವರು, ಮಾಜಿ ಮೇಯರ್ ಪುರುಷೋತ್ತಮ್ ಅಧ್ಯಕ್ಷತೆ ವಹಿಸುವರು, ಡಾ.ಎಸ್. ಮಂಗಳಮೂರ್ತಿ, ಸತೀಶ್ ಜವರೇಗೌಡ, ಕುಮಾರಸ್ವಾಮಿ, ಎಂ.ಕೆ. ಶ್ರೀಧರ್, ಕೆ.ಎನ್. ಚಂದ್ರಶೇಖರ್, ಪುಟ್ಟೇಗೌಡ ವೇದಿಕೆಯಲ್ಲಿರುವರೆಂದರು. ಗ್ರಾಮೀಣ ಪ್ರದೇಶದ ಎಲ್ಲ ಸಮುದಾಯಗಳ ನಡುವೆ ತಾವು ಬೆಳೆದಿದ್ದು, ಅವರ ನೋವು, ನಲಿವು ಮೊದಲಾದವನ್ನು ಕೃತಿ ಒಳಗೊಂಡಿದೆ. ಮುಖ ಬೆಲೆ 250 ರೂ.ಗಳಾಗಿದ್ದು, 194 ಪುಟಗಳನ್ನು ಒಳಗೊಂಡಿದೆ ಎಂದರು. ಬಸವಣ್ಣ, ಕೆ.ಎನ್. ಚಂದ್ರಶೇಖರ್, ಎಸ್.ರವಿಕುಮಾರ್ ಇದ್ದರು.

# ಮಾ.7,8 ರಾಷ್ಟ್ರ ಮಹಿಳಾ ಸಮಾವೇಶ

ಮೈಸೂರು: ಅಂತರ ರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ರಾಜ್ಯ ಮಹಿಳಾ ಸಂಘಟನೆಗಳ ಒಕ್ಕೂಟದವತಿಯಿಂದ ಮಾ.7 ಮತ್ತು 8 ರಂದು ನಗರದ ಮಾನಸ ಗಂಗೋತ್ರಿ ಬಯಲು ರಂಗ ಮಂದಿರದಲ್ಲಿ ನಾರಿ ಶೀರ್ಷಿಕೆಯ ರಾಷ್ಟ್ರ ಮಟ್ಟದ ಮಹಿಳಾ ಸಮಾವೇಶ ಆಯೋಜಿಸಿರುವುದಾಗಿ ಸಂಘಟನೆ ಪದಾಧಿಕಾರಿ ಎಲ್.ಯಮುನಾ ತಿಳಿಸಿದರು.

ಇದು ರಾಜಕೀಯ ಪಕ್ಷ, ಧರ್ಮ, ಜಾತಿಗಳ ಭೇದ ಭಾವವಿದಲ್ಲೇ ಒಂದೇ ವೇದಿಕೆಯಲ್ಲಿ ಮಹಿಳೆಯರನ್ನು ತರುವ ಕಾರ್ಯಕ್ರಮವಾಗಿದೆ. ಅತಿಥಿಗಳು ಹಾಗೂ ಸಮಯದ ನಿಗದಿ ಪ್ರಕ್ರಿಯೆ ನಡೆದಿದೆ. 2 ದಿನಗಳ ಕಾಲ ನಡೆಯುವ ಈ ಸಮಾವೇಶದಲ್ಲಿ ಮಹಿಳೆಯರ ಹಕ್ಕಿಗಾಗಿ ಧ್ವನಿಯೆತ್ತಲಾಗುವುದು, ಕಾನೂನು ಅರಿವು ಸಹಾ ಮೂಡಿಸಲಿದ್ದು, ರಾಷ್ಟ್ರ ಮಟ್ಟದ ಕಲಾವಿದರು, ಮಹಿಳಾ ಚಿಂತಕರು, ಲೇಖಕರು, ಕ್ರೀಡಾ ಪಟುಗಳು ಪಾಲ್ಗೊಳ್ಳಲಿದ್ದಾರೆಂದರು. ಈ ವೇಳೆ ಸಾಮಾಜಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಮಹಿಳಾ ನಾಯಕತ್ವ ಉತ್ತೇಜನೆ, ಸಂವಿಧಾನಾತ್ಮಕ ಹಕ್ಕುಗಳ ಕುರಿತು ಚರ್ಚೆ, ಮಧ್ಯೆ ಮಧ್ಯೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ ಎಂದು ಮಾಹಿತಿ ನೀಡಿದರು. ಸುಶೀಲಾ ನಂಜಪ್ಪ, ಪ್ರಮೀಳಾ ಲೋಕೇಶ್, ಸೌಭಾಗ್ಯ ಮೂರ್ತಿ, ಶಾಂತ ಸೋಮಶೇಖರ್, ಡಾ.ಲಕ್ಷ್ಮಿದೇವಿ, ಪುಷ್ಪಾವತಿ, ರೇಖಾ ಪ್ರಿಯದರ್ಶಿನಿ ಇದ್ದರು.



**ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್. ಎನ್ ಋಗ್ವೇದಿ ಹೇಳಿಕೆ**

# ಯುವಕವಿಗಳಿಗೆ ಚೆನ್ನವೀರ ಕಣವಿ ಮಾರ್ಗದರ್ಶಕ



ಚಾಮರಾಜನಗರ, ಸುನೀತಾ (ಸಾನೆಟ್ )ಕವಿತೆಗಳ ರಚನೆಯಲ್ಲಿ ತೊಡಗಿರುವ ಯುವಕವಿಗಳಿಗೆ ಚೆನ್ನವೀರ ಕಣವಿಯವರ ಸಾಹಿತ್ಯದ ಪ್ರಭಾವ ಮಾರ್ಗದರ್ಶಕವಾಗಿ ಅನುಸರಿಸಬಹುದು ಎಂದು ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಸುರೇಶ್. ಎನ್ ಋಗ್ವೇದಿ ತಿಳಿಸಿದರು.

ಕನ್ನಡ ಸಾಹಿತ್ಯ ಪರಿಷತ್ತಿನ ಸಭಾಂಗಣದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತು ಹಮ್ಮಿಕೊಂಡಿದ್ದ ಡಾ. ಚನ್ನವೀರ ಕಣವಿ ಹಾಗೂ ಡಾ.ಸಿದ್ದಲಿಂಗಯ್ಯನವರ ಸಾಹಿತ್ಯ ಕೊಡುಗೆಗಳ ಕುರಿತು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಚನ್ನವೀರ ಕಣವಿಯವರು ಸಮನ್ವಯ ಸಾಹಿತ್ಯದ ಶ್ರೇಷ್ಠ ರಚನಾಕಾರರು. ತಮ್ಮ ಇಡೀ ಜೀವನವನ್ನು ಸಾಹಿತ್ಯ ಸೇವೆಯಲ್ಲಿ ತೊಡಗಿ ಅಪಾರವಾದ ಕೊಡುಗೆ ನೀಡಿದ ಕಣವಿಯವರು ಸೌಮ್ಯ ಮತ್ತು ಸಭ್ಯ ವ್ಯಕ್ತಿತ್ವ ಹೊಂದಿದವರು . 18 ಕವನ ಸಂಕಲನಗಳು, ಐದು ವಿಮರ್ಶಾ ಲೇಖನಗಳು , ಮಕ್ಕಳ ಸಂಕಲನ ಸಂಪಾದಿತ ಗ್ರಂಥಗಳನ್ನು ರಚಿಸಿದ ಮಹಾನ್ ವ್ಯಕ್ತಿ .ಕನ್ನಡದಲ್ಲಿ ರೂಪ ಮತ್ತು ವಸ್ತು ವೈವಿಧ್ಯದಿಂದ ಕೂಡಿರುವ ಸುನೀತಾ ಗಳ ವಿಶೇಷ ಪ್ರಕಾರವನ್ನು ರಚಿಸಿದ ಕಣವಿ ಯವರು ತಮ್ಮದೇ ಆದ ಮೂಲ ಚಿಂತನೆ ,ತತ್ವ ಜ್ಞಾನ, ಜೀವನದ ಭರವಸೆಗಳ ಅಂಶಗಳನ್ನು ಅವರ ಸಾಹಿತ್ಯದಲ್ಲಿ ಪ್ರಭಾವಿಸಿದ್ದಾರೆ. ಹಾಗೆಯೇ ಸಾಹಿತಿ ಡಾ. ಸಿದ್ದಲಿಂಗಯ್ಯನವರು ಸಾಮಾಜಿಕ ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಬೆಳಗಿಸಿದರು ಎಂದರು. ಕನ್ನಡ ಸಾಹಿತ್ಯ ಪರಿಷತ್ತಿನ ನಿರ್ದೇಶಕ ರವಿಚಂದ್ರ ಪ್ರಸಾದ್ ಮಾತನಾಡಿ ಸಿದ್ದಲಿಂಗಯ್ಯನವರಿಗೆ ಚಾಮರಾಜನಗರದ ಒಡನಾಟ ಅಪಾರವಾ ಗಿತ್ತು. ಸಿದ್ದಲಿಂಗಯ್ಯನವರು ಸದಾ ಕಾಲ ಸೃಜನಾತ್ಮಕ ಸಾಹಿತ್ಯ ಹಾಗೂ ನೊಂದ ಜನರ ನೋವಿನ್ನು ಜಗತ್ತಿಗೆ ತಿಳಿಸಿದವರು. ಸಾಮಾಜಿಕ ಅವ್ಯವಸ್ಥೆಗಳನ್ನು ತಿದ್ದಿ ,ಸಾಹಿತ್ಯದ ಮೂಲಕ ಬಹುಜನರ ಪ್ರಜ್ಞೆಯನ್ನು ಹೆಚ್ಚಿಸಿದರು. ಸಿದ್ದಲಿಂಗಯ್ಯನವರ ಸಾಹಿತ್ಯದಲ್ಲಿ ಬಡ ಹಾಗೂ ನೊಂದ ಜನರ ಜೀವಂತಿಕೆಯ ನೋವು ನಲಿವುಗಳನ್ನು ತಿಳಿಸಿದ್ದಾರೆ ಎಂದರು.

ಬರಹಗಾರ ಲಕ್ಷ್ಮಿ ನರಸಿಂಹ ಮಾತನಾಡಿ ಅಖಿಲ ಭಾರತೀಯ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆಯನ್ನು ವಹಿಸಿದ್ದ ಸಿದ್ದಲಿಂಗಯ್ಯನವರು ಸರಸ್ವತಿಯ ಪುತ್ರರು. ಪ್ರಾಧ್ಯಾಪಕರಾಗಿ ಅಪಾರ ಶಿಷ್ಯರನ್ನು ಹೊಂದಿದ್ದ ಸಿದ್ದಲಿಂಗಯ್ಯನವರು ನಾಡಿನ ಎಲ್ಲಡೆ ಅಭಿಮಾನದ ಸಾಹಿತ್ಯದ ಓದುಗರನ್ನು ಸೃಷ್ಟಿಸಿದರು ಎಂದರು. ಕಾರ್ಯಕ್ರಮದಲ್ಲಿ ರವಿಚಂದ್ರ ಪ್ರಸಾದ್ ಕಹಳೆ ಹಾಗೂ ಶಿವಲಿಂಗ ಮೂರ್ತಿರವರು ಗೀತ ಗಾಯನವನ್ನು ನಡೆಸಿಕೊಟ್ಟರು ಕಾರ್ಯಕ್ರಮದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಶಿವಲಿಂಗ ಮೂರ್ತಿ, ಬಿಕೆ ಆರಾಧ್ಯ ,ಪದ್ಮ ಪುರುಷೋತ್ತಮ್, .ನಿವೃತ್ತ ಶಿಕ್ಷಕಿ ಸರಸ್ವತಿ, ಮನೋಜ್, ಕಿರಣ್ ಆದಿತ್ಯ ,ಪ್ರಕಾಶ್ ,ಮಂಜುನಾಥ ಉಪಸ್ಥಿತರಿದ್ದರು.

# 6ನೇ ಜಿಲ್ಲಾ ಅಪರ, ಸತ್ರ ನ್ಯಾಯಾಲಯ ಆರಂಭಿಸಬೇಕೆಂದು ಒತ್ತಾಯ

### ವಕೀಲರಿಂದ ನ್ಯಾಯಾಂಗ ಕಲಾಪ ಬಹಿಷ್ಕರಿಸಿ ಪ್ರತಿಭಟನೆ



ಕೆ.ಆರ್.ಪೇಟೆ: ಪಟ್ಟಣದಲ್ಲಿ 6ನೇ ಅಪರ ಮತ್ತು ಜಿಲ್ಲಾ ಸತ್ರ ನ್ಯಾಯಾಲಯವನ್ನು ಆರಂಭಿಸಬೇಕೆಂದು ಒತ್ತಾಯಿಸಿ ಕೆ.ಆರ್.ಪೇಟೆ ತಾಲೂಕು ವಕೀಲರ ಸಂಘದ ಅಧ್ಯಕ್ಷ ಎಮ್.ಆರ್.ನಾಗೇಗೌಡ, ಪ್ರಧಾನ ಕಾರ್ಯದರ್ಶಿ ಮಂಜೇಗೌಡ, ಉಪಾಧ್ಯಕ್ಷ ಪುರುಷೋತ್ತಮ್ ನೇತೃತ್ವದಲ್ಲಿ ನೂರಾರು ವಕೀಲರು ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಪ್ರತಿಭಟನೆ ನಡೆಸಿದರು.

ಕೆ.ಆರ್.ಪೇಟೆ ತಾಲೂಕು ವ್ಯಾಪ್ತಿಯಲ್ಲಿ ಸಾವಿರಾರು ಪ್ರಕರಣಗಳಿದ್ದು ಕೆ.ಆರ್.ಪೇಟೆ ಪಟ್ಟಣದಲ್ಲಿ ಆರನೇ ಸತ್ರ ಜಿಲ್ಲಾ ನ್ಯಾಯಾಲಯ ಇಲ್ಲದೆ ಇರುವುದರಿಂದ ವಕೀಲರು ಹಾಗೂ ಕಕ್ಷಿದಾರರು ಅನಿವಾರ್ಯವಾಗಿ ಸಮಾರು 2ಗಂಟೆ ಪ್ರಯಾಣ ದೂರದಲ್ಲಿರುವ ಜಿಲ್ಲಾ ಕೇಂದ್ರವಾದ ಮಂಡ್ಯಕ್ಕೆ ಹೋಗುವ ಪರಿಸ್ಥಿತಿ ಎದುರಾಗಿದೆ. ಕೆ.ಆರ್.ಪೇಟೆಯಲ್ಲಿ ಜಿಲ್ಲಾ ಸತ್ರ ನ್ಯಾಯಾಲಯವನ್ನು ಆರಂಭಿಸಬೇಕೆಂದು ಒತ್ತಾಯಿಸಿ ರಾಜ್ಯ ಉಚ್ಚ ನ್ಯಾಯಾಲಯಕ್ಕೆ ಕಾನೂನು ಸಚಿವರಿಗೆ ಹಾಗೂ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿತ್ತು. ಆದರೆ ಯಾವುದೇ ಪ್ರಯೋಜನವಾಗಿಲ್ಲ ಆದ್ದರಿಂದ ಅನಿವಾರ್ಯವಾಗಿ ಹೋರಾಟದ ದಾರಿ ಹಿಡಿಯುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ತಾಲೂಕು ವಕೀಲರ ಸಂಘದ ಅಧ್ಯಕ್ಷ ನಾಗೇಗೌಡ ಹೇಳಿದರು. ನ್ಯಾಯಾಲಯದ ಕಲಾಪಗಳನ್ನು ಬಹಿಷ್ಕರಿಸಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯವನ್ನು ಆರಂಭಿಸಬೇಕೆಂದು ವಕೀಲರು ಪ್ರತಿಭಟನೆ ನಡೆಸುತ್ತಿರುವ ಹೋರಾಟಕ್ಕೆ ಬೆಂಬಲ ಸೂಚಿಸಿ ಶಾಸಕ ಹೆಚ್.ಟಿ.ಮಂಜು ನ್ಯಾಯಾಲಯದ ಆವರಣದಲ್ಲಿ ನಡೆಯುತ್ತಿರುವ ಪ್ರತಿಭಟನಾ ಸ್ಥಳಕ್ಕೆ ಭೇಟಿ ನೀಡಿ ವಕೀಲರ ಸಂಘದ ಪದಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಮಾರ್ಚ್ 6 ರಿಂದ ಬಜೆಟ್ ಅಧಿವೇಶನವು ಆರಂಭವಾಗುತ್ತಿದೆ. ಈ ಅಧಿವೇಶನದಲ್ಲಿಯೇ ಕೆ.ಆರ್.ಪೇಟೆಯ 6ನೇ ಹೆಚ್ಚುವರಿ ಅಪರ ಜಿಲ್ಲಾ ಸತ್ರ ನ್ಯಾಯಾಲಯ ಸ್ಥಾಪಿಸುವ ಬಗ್ಗೆ ಸರ್ಕಾರದ ಸೆಳೆಯಲಾಗುವುದು. ಆದಷ್ಟು ಶೀಘ್ರವೇ ಹೆಚ್ಚುವರಿ ಜಿಲ್ಲಾ ಸತ್ರ ನ್ಯಾಯಾಲಯವನ್ನು ಮಂಜೂರು ಮಾಡುವಂತೆ ಒತ್ತಾಯಿಸುತ್ತೇನೆ ಎಂದು ಶಾಸಕರು ಭರವಸೆ ನೀಡಿದರು. ಈ ಸಂದರ್ಭದಲ್ಲಿ ವಕೀಲರ ಸಂಘದ ಮಾಜಿ ಅಧ್ಯಕ್ಷ ಎನ್. ಆರ್.ರವಿಶಂಕರ್ ಪ್ರಧಾನ ಕಾರ್ಯದರ್ಶಿ ಸಾಧುಗೋನಹಳ್ಳಿ ಮಂಜೇಗೌಡ, ಹಿರಿಯ ವಕೀಲರಾದ ಬಿ.ಎಲ್.ದೇವರಾಜು, ಎಸ್.ಸಿ.ವಿಜಯಕುಮಾರ್, ಜಿ.ಆರ್.ಅನಂತರಾಮಯ್ಯ, ಎಂ.ಆರ್.ಪ್ರಸನ್ನಕುಮಾರ್, ಹೆಚ್.ರವಿ, ಬಂಡಿಹೊಳೆ ಗಣೇಶ್, ಕೆ.ರಾಮೇಗೌಡ, ಗಂಜಿಗೆರೆ ಜಿ.ಜೆ.ಲೋಕೇಶ್, ಅರುಣ್‌ಕುಮಾರ್, ವಿ.ಎಸ್. ಧನಂಜಯಕುಮಾರ್, ಎಂ.ಎಲ್.ಸುರೇಶ್, ಬಿ.ಸಿ.ದಿನೇಶ್, ಕೆ.ಎನ್.ಪಾಂಡು, ರಾಣಿ, ಮನುರಾಧಾ ಸೇರಿದಂತೆ ನೂರಾರು ವಕೀಲರು ಉಪಸ್ಥಿತರಿದ್ದರು.

## ನಾಳೆ ವಿದ್ಯುತ್ ವ್ಯತ್ಯಯ

ಹಾಸನ:– ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತಿಯಿಂದ ಸನದ 220/66 ಕೆ.ವಿ ಸ್ವೀಕರಣಾ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕೆಲಸಗಳನ್ನು ಹಮ್ಮಿಕೊಂಡಿರುವುದರಿಂದ ಫೆ.22 ರಂದು ಬೆಳಿಗ್ಗೆ 9 ರಿಂದ ಸಂಜೆ 6 ಗಂಟೆವರೆಗೆ ಸಂತೆಪೇಟೆ ಸರ್ಕಲ್, ಸಿದ್ದಯ್ಯನಗರ, ಗಾಂಧಿಬಜಾರ್, ತಣ್ಣೀರಹಳ್ಳ, ವಿಜಯ ನಗರ, ಕೆ.ಹೆಚ್.ಬಿ. ಶ್ರೀನಗರ, ಎನ್. ಆರ್ ವೃತ್ತ, ಹಾಸನಾಂಬ ದೇವಾಲಯ ಸುತ್ತಮುತ್ತ, ಹುಣಸಿನಕೆರೆ, ಮೈಕ್ರೋವೇವ್, ಬಿಟ್ಟಗೋಡನಹಳ್ಳಿ, ಮೆಡಿಕಲ್ ಕಾಲೇಜು, ಡಿ.ಸಿ ಕಚೇರಿ, ಎಸ್.ಪಿ ಕಚೇರಿ, ಆಜಾದ್ ರೋಡ್, ವಲ್ಲಬಾಯ್ ರೋಡ್, ನಗರ ಸಭೆ ಕಾರ್ಯಾಲಯ, ಕಟ್ಟಿನಕೆರೆ ಮಾರ್ಕೆಟ್, ದೇವೆಗೌಡನಗರ, ಹನುಮಂತಪುರ, ಅಗಿಲೆ, ಎರೆಬೋರೆಕವಲು, ಚನ್ನಪಟ್ಟಣ, ಹೊಸಕೊಪ್ಪಲು, ದೇವಮ್ಮ ಬಡಾವಣೆ ಮಾರ್ಗನಹಳ್ಳಿ, ಬೈಲಹಳ್ಳಿ, ಬಸವೇಶ್ವರನಗರ, ಹೊಯ್ಸಳ ರೆಸಾರ್ಟ್, ಇತರೆ ಸರ್ಕಾರಿ ಕಚೇರಿಗಳು, ಶಾಲಾ ಕಲೇಜುಗಳು, ಮತ್ತು ಹಾಸನ ಕೆ.ಐ.ಎ.ಡಿ.ಬಿ, ಗೊರೂರು, ಎನ್.ಟಿ.ಸಿ, ಫ್ರೀಕಾಟ್, ಹೇಮಾವತಿ, ಮಾರುತಿ, ಹಿಮ್ಮತ್‌ಸಿಂಕಾ, ಗಂಗೂರು, ಅರಕಲಗೂಡು, ದೊಡ್ಡಮಗ್ಗೆ, ದೊಡ್ಡಬೆಮ್ಮತ್ತಿ, ಮಲ್ಲಿಪಟ್ಟಣ, ಶನಿವಾರಸಂತೆ ಯಳೂರು ಹಾಗೂ ಹೆತ್ತೂರು ವಿ.ವಿ ಕೇಂದಗಳಿಂದ ವಿದ್ಯುತ್ ಸರಬರಾಜಾಗುವ ಸ್ಥಾವರಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ವತಿಯಿಂದ ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ.ವಿ. ಕೇಂದ್ರ ಗಂಗೂರು ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಫೆ.22 ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆವರೆಗೆ ಗಂಗೂರು ವಿ.ವಿ ಕೇಂದ್ರದಿಂದ ವಿದ್ಯುತ್ ಸರಬರಾಜಾಗುವ ಗಂಗೂರು, ಅಂಕನಹಳ್ಳಿ, ಸೆರ್ವೆಗಾರನಕೊಪ್ಪಲು, ಕಳ್ಳಿಕೊಪ್ಪಲು, ಸಂಕನಹಳ್ಳಿ, ಶಿವಪುರ, ಕಟ್ಟಹಳ್ಳಿ, ಅಪ್ಪಗೌಡನಹಳ್ಳಿ, ಚಿಕ್ಕಬ್ಯಾಗತವಳ್ಳಿ, ಪಾಳ್ಯ, ಮಾರಗೌಡನಹಳ್ಳಿ, ಶ್ರೀರಾಮದೇವರಕಟ್ಟೆ, ಮತ್ತು ಸುತ್ತಮುತ್ತಲಿನ ಗ್ರಾಮಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಅವರು ತಿಳಿಸಿದ್ದಾರೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

# ಕಾನೂನು ಅರಿವು ಕಾರ್ಯಕ್ರಮ




ಗುಂಡ್ಲುಪೇಟೆ: ತಾಲೂಕು ಕಾನೂನು ಸೇವೆಗಳ ಸಮಿತಿ ಹಾಗೂ ವಕೀಲರ ಸಂಘ. ಮತ್ತು ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಸಾಮಾಜಿಕ ನ್ಯಾಯ ಅಂಗವಾಗಿ ಕಾನೂನು ಅರಿವು ಕಾರ್ಯಕ್ರಮವನ್ನು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಳ್ಳಲಾಗಿತ್ತು.

ನಂತರ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಪ್ರದಾನ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಧೀಶರಾದ ದೀಪು ಎಂ ಟಿ ರವರು ಸಾಮಾಜಿಕ ನ್ಯಾಯ ಎಂಬ ಪರಿಕಲ್ಪನೆಯ ಅಡಿಯಲ್ಲಿ ಎಲ್ಲರೂ ಕಾರ್ಯನಿರ್ವಹಿಸಿದಾಗ ಸಮಾಜ ಅಭಿವೃದ್ಧಿ ಆಗುತ್ತದೆ, ಆ ಮೂಲಕ ವಿಶ್ವವು ಅಭಿವೃದ್ಧಿ ಸಾಧ್ಯ ಎಂದು ತಿಳಿಸಿದರು.

ವಕೀಲರ ಸಂಘದ ಅಧ್ಯಕ್ಷ ಟಿ ಎಸ್ ವೆಂಕಟೇಶ ಮಾತನಾಡಿ ವಿದ್ಯಾರ್ಥಿಗಳಿಗೆ ಕಾನೂನು ಹಾಗೂ ಸಾಮಾಜಿಕ ನ್ಯಾಯದ ಕುರಿತು ತಿಳಿಸಿಕೊಟ್ಟರು.

ವಕೀಲರ ಸಂಘದ ಕಾರ್ಯದರ್ಶಿ ಜವರಾಜು ರವರು ಮಾತನಾಡಿದರು ಕಾಲೇಜಿನ ಪ್ರಾಂಶುಪಾಲ ಡಾ. ಮದನ್ ಕುಮಾರ್ ಎ ಆರ್ ಮಾತನಾಡಿ.ನ್ಯಾಯಾಂಗದ ಮಹತ್ವ ಹಾಗೂ ಸಾಮಾಜಿಕ ನ್ಯಾಯದ ಪರಿಕಲ್ಪನೆಯ ಮಹತ್ವವನ್ನು ತಿಳಿಸಿದರು. ರಾಷ್ಟ್ರೀಯ ಸೇವಾ ಯೋಜನಾಧಿಕಾರಿ.ಕವಿತಾ, ಅಧ್ಯಾಪಕರಾದ ಪವಿತ್ರ, ಅನ್ನಪೂರ್ಣ, ಪುಟ್ಟರಾಜು, ಶ್ರೀನಿವಾಸನಾಯಕ್, ಮಂಜು, ಮಂಜುನಾಥ್ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳು ವಿದ್ಯಾರ್ಥಿಗಳು ಹಾಜರಿದ್ದರು.

# ಚೌಡೇಶ್ವರಿ ಅಮ್ಮನವರ ವರ್ಧಂತೋತ್ಸವ

ಚಾಮರಾಜನಗರ, ಇಲ್ಲಿನ ದೇವಾಂಗ ಬೀದಿಯಲ್ಲಿರುವ ಕನ್ನಡ ಗುಂಪಿನ ಶ್ರೀ ರಾಮಲಿಂಗ ಚೌಡೇಶ್ವರಿ ದೇವಸ್ಥಾನದಲ್ಲಿ 62ನೇ ವರ್ಷದ ಶ್ರೀ ಚೌಡೇಶ್ವರಿ ಅಮ್ಮನವರ ವರ್ಧ0ತೋ ತ್ಸವವೂ ವಿಜೃಂಭಣೆಯಿಂದ ನೆರವೇರಿತು.




ಶುಕ್ರವಾರ ಬೆಳಗ್ಗೆ ದೇವಸ್ಥಾನದಲ್ಲಿ ಪುಣ್ಯಹ, ಕಳಸ ಸ್ಥಾಪನೆ, ಗಣಹೋಮ, ನವಗ್ರಹ ಹೋಮ, ರುದ್ರ ಹೋಮ, ಚಂಡಿಕಾ ಹೋಮ, ದುರ್ಗಾ ಸಪ್ತ ಸ್ತುತಿ, ಶ್ರೀನಿವಾಸ ಹೋಮ, ಮಹಾ ಅಭಿಷೇಕ, ಸಹಸ್ರಾರ್ಚನೆ, ಮಹಾ ನೈವೇದ್ಯ ಸಮರ್ಪಣೆ, ಮಹಾ ಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ಬಳಿಕ ಮಹಾ ಮಂಗಳಾರತಿ ನಂತರ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು.

ದೇವರಿಗೆ ವಿಶೇಷವಾಗಿ ಮಲ್ಲಿಗೆ ಹೂವಿನಿಂದ ಕರಗ ಅಲಂಕಾರ ಮಾಡಲಾಗಿತ್ತು.

ದೇವಸ್ಥಾನವನ್ನು ತಳಿರು ತೋರಣಗಳಿಂದ ಸಿಂಗರಿಸಿ ಹೋಮ ಹವನಾದಿಗಳಿಂದ ಪೂಜೆ ಮಾಡುವ ಮೂಲಕ ಕುಲಸ್ಥರು ಹಾಗೂ ಜನರಿಗೆ ಜಗನ್ಮಾತೆ ಶ್ರೀ ಚೌಡೇಶ್ವರಿ ಅಮ್ಮನವರು ಒಳಿತನ್ನು ಮಾಡಲಿ ಎಂದು ಪ್ರಾರ್ಥಿಸಲಾಯಿತು. ಇದೆ ವೇಳೆ ಶ್ರೀ ಚೌಡೇಶ್ವರಿ ಅಮ್ಮನವರ ಉತ್ಸವ ಮೂರ್ತಿಯನ್ನು ದೇವಸ್ಥಾನದ ಒಳ ಆವರಣದಲ್ಲಿ ಮೆರವಣಿಗೆ ಮಾಡಲಾಯಿತು.

ಪೂಜಾ ಮಹೋತ್ಸವ ಕಾರ್ಯಕ್ರಮಕ್ಕೆ ನಗರ ಸೇರಿದಂತೆ ವಿವಿಧ ಭಾಗಗಳಿಂದ ನೂರಾರು ಸಂಖ್ಯೆಯ ಭಕ್ತರು ಆಗಮಿಸಿ ದೇವರ ದರ್ಶನ ಪಡೆದು ಇಷ್ಟಾರ್ಥ ಸಿದ್ಧಿಗಾಗಿ ದೇವರಲ್ಲಿ ಪ್ರಾರ್ಥಿಸಿದರು. ಪೂಜಾ ಕಾರ್ಯಕ್ರಮವನ್ನು ದೇವಾಂಗ ಸಮಾಜದ ಶೆಟ್ಟಿಗಾರರು, ಯಜಮಾನರುಗಳು ಹಾಗೂ ಮುಖಂಡರು ಹಾಗೂ ಕುಲಸ್ಥರು ಯಶಸ್ವಿಯಾಗಿ ನಡೆಸಿಕೊಟ್ಟರು

# ಶ್ರದ್ಧೆ, ಪ್ರಾಮಾಣಿಕತೆಯಿಂದ ಕರ್ತವ್ಯ ನಿರ್ವಹಿಸಿ: ರಮೇಶ್ ಬಂಡಿಸಿದ್ದೇಗೌಡ

## ಕೌನ್ಸಿಲಿಂಗ್ ಮತ್ತು ನೇಮಕಾತಿ ಆದೇಶ ಪತ್ರಗಳ ವಿತರಣೆ

ಮೈಸೂರು: ಕಿರಿಯ ಪವರ್ ಮ್ಯಾನ್‌ಗಳಾಗಿ ನೇಮಕಗೊಂಡಿರುವ ಅಭ್ಯರ್ಥಿಗಳು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ಕೆಲಸ ಮಾಡಬೇಕು ಎಂದು ಶಾಸಕರು ಹಾಗೂ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಅಧ್ಯಕ್ಷರಾದ ರಮೇಶ್ ಬಂಡಿಸಿದ್ದೇಗೌಡರು ಕರೆ ನೀಡಿದರು.



ವಿಜಯನಗರ 2ನೇ ಹಂತದಲ್ಲಿರುವ ಸೆಸ್ಕ್ ನಿಗಮ ಕಾರ್ಯಾಲಯದಲ್ಲಿ ಶುಕ್ರವಾರ ನಡೆದ ಕಿರಿಯ ಪವರ್ ಮ್ಯಾನ್ ಹುದ್ದೆಗಳ ನೇಮಕಾತಿಗೆ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸ್ಥಳ ನಿಯುಕ್ತಿಗಾಗಿ ಕೌನ್ಸಿಲಿಂಗ್ ಮತ್ತು ನೇಮಕಾತಿ ಆದೇಶ ಪತ್ರಗಳ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. "ಇತ್ತೀಚಿನ ದಿನಗಳಲ್ಲಿ ಉದ್ಯೋಗ ದೊರೆಯುವುದೆ ಕಷ್ಟಕರವಾಗಿದ್ದು, ಇಂತಹ ಸಂದರ್ಭದಲ್ಲಿ, ಅಭ್ಯರ್ಥಿಗಳು ತಮಗೆ ಸಿಕ್ಕಿರುವ ಕೆಲಸವನ್ನು ಶ್ರದ್ಧೆ ಹಾಗೂ ನಿಷ್ಠೆಯಿಂದ ನಿರ್ವಹಿಸಬೇಕು. ಕರ್ತವ್ಯದ ಸಂದರ್ಭದಲ್ಲಿ ಯಾವುದೇ ರೀತಿಯ ದುಷ್ಟಟಗಳಿಗೆ ಬಲಿಯಾಗದೆ, ಆರೋಗ್ಯದ ಬಗ್ಗೆ ಕಾಳಜಿವಹಿಸಿ, ತಮ್ಮ ಇತಿಮಿತಿ ಅರಿತು ಕಾರ್ಯನಿರ್ವಹಿಸಬೇಕು" ಎಂದು ಕಿವಿಮಾತು ನೀಡಿದರು.

"ವಿದ್ಯುತ್ ಕ್ಷೇತ್ರದಲ್ಲಿ ಕೆಲಸ ಮಾಡುವಾಗ ಬೇಜವಾಬ್ದಾರಿ ಅಥವಾ ಸ್ವಲ್ಪ ಮೈಮರೆತರೂ ಜೀವಕ್ಕೆ ಅಪಾಯ ಸಂಭವಿಸಬಹುದು. ಆದ್ದರಿಂದ ತರಬೇತಿ ಅವಧಿಯಲ್ಲಿ ನೀಡುವ ಸಲಹೆಗಳನ್ನು ಪರಿಪೂರ್ಣವಾಗಿ ಅರಿತು, ಯಾವುದೇ ಅನುಮಾನಗಳಿದ್ದರೂ ಪರಿಹರಿಸಿಕೊಳ್ಳಬೇಕಿದೆ. ಹಿರಿಯ ಅಧಿಕಾರಿಗಳು ನೀಡುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದ ಅವರು, ಕರ್ತವ್ಯ ನಿರ್ವಹಣೆ ಸಂದರ್ಭದಲ್ಲಿ ಜನಸಾಮಾನ್ಯರು ದೂರು, ಸಮಸ್ಯೆಗಳನ್ನು ತಿಳಿಸಿದಾಗ ಸೌಜನ್ಯ ಹಾಗೂ ಗೌರವದಿಂದ ವರ್ತಿಸಬೇಕು" ಎಂದು ಸಲಹೆ ನೀಡಿದರು.

### 293 ಅಭ್ಯರ್ಥಿಗಳ ನೇಮಕಾತಿ

**ಸೆಸ್ಕ್‌ನ ಕಿರಿಯ ಪವರ್ ಮ್ಯಾನ್ ಹುದ್ದೆಗಳ ನೇಮಕಾತಿಗೆ 2025ರ ಮೇ 16ರಂದು ಸಹನಾಶಕ್ತಿ ಪರೀಕ್ಷೆ ನಡೆಸಲಾಗಿತ್ತು. ಬಳಿಕ ವಿವಿಧ ಹಂತಗಳಲ್ಲಿ ನಡೆದ ನೇಮಕ ಪ್ರಕ್ರಿಯೆಯಲ್ಲಿ 293 ಅಭ್ಯರ್ಥಿಗಳನ್ನು ಅಂತಿಮಗೊಳಿಸಲಾಗಿತ್ತು. ಈ ನಿಟ್ಟಿನಲ್ಲಿ ಶುಕ್ರವಾರ ನಡೆದ ಕೌನ್ಸಿಲಿಂಗ್‌ನಲ್ಲಿ ಅಭ್ಯರ್ಥಿಗಳ ಆಯ್ಕೆ ಅನುಸಾರವಾಗಿ ಸ್ಥಳ ನಿಯುಕ್ತಿಗೊಳಿಸಿ ಆದೇಶ ಪತ್ರವನ್ನು ವಿತರಿಸಲಾಯಿತು.**

ಸೆಸ್ಕ್ ವ್ಯವಸ್ಥಾಪಕ ನಿರ್ದೇಶಕ ಕೆ.ಎಂ. ಮುನಿಗೋಪಾಲ್ ರಾಜು ಮಾತನಾಡಿ, "ಸರ್ಕಾರದ ಮಟ್ಟದಲ್ಲಿ ಸಿಎಂ, ಡಿಸಿಎಂ, ಇಂಧನ ಸಚಿವರು ಹಾಗೂ ನಿಗಮದ ಅಧ್ಯಕ್ಷರು ಉದ್ಯೋಗಾವಕಾಶ ಒದಗಿಸಿದ್ದಾರೆ. ಆದ್ದರಿಂದ ಅರ್ಹ ಅಭ್ಯರ್ಥಿಗಳು ಈ ಅವಕಾಶ ಸದ್ಬಳಕೆ ಮಾಡಿಕೊಳ್ಳಬೇಕು. ಯಾವುದೇ ರೀತಿಯ ಒತ್ತಡ, ಶಿಫಾರಸ್ಸು, ಪ್ರಭಾವ ಬೀರುವ ಪ್ರಯತ್ನಗಳಿಗೆ ಅವಕಾಶವಿಲ್ಲ. ಸಂಪೂರ್ಣ ಪಾರದರ್ಶಕವಾಗಿ ಆಯ್ಕೆ ಪ್ರಕ್ರಿಯೆ ನಡೆಯುತ್ತಿದೆ. ಹೀಗಾಗಿ ಮಧ್ಯವರ್ತಿಗಳ ಮಾತಿಗೆ ಕಿವಿಗೊಡದೆ, ಯಾವುದೇ ಪ್ರಭಾವ ಬೀರದೆ, ತಾವು ನಿಯೋಜನೆಗೊಳ್ಳುವ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಲು ವಿಶ್ವಾಸದಿಂದ ಮುಂದುವರಿಯಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸೆಸ್ಕ್ ಮುಖ್ಯ ಆರ್ಥಿಕ ಅಧಿಕಾರಿ ಜಿ. ರೇಣುಕಾ, ಪ್ರಧಾನ ವ್ಯವಸ್ಥಾಪಕಿ(ಆಂತರಿಕ ಲೆಕ್ಕಪರಿಶೋಧನೆ) ಲಿಂಗರಾಜಮ್ಮ, ಪ್ರಧಾನ ವ್ಯವಸ್ಥಾಪಕರು(ಆ ಮತ್ತು ಮಾ.ಸಂ) ಡಾ.ಬಿ.ಆರ್.ರೂಪ, ಹಾಸನ ವಿಭಾಗದ ಮುಖ್ಯ ಇಂಜಿನಿಯರ್ ಲೋಕೇಶ್ ಸೇರಿ ಇತರ ಅಧಿಕಾರಿಗಳಿದ್ದರು.

## ಬಿಜೆಪಿ ಮುಖಂಡ ಸಿ.ಕೆ. ಗಿರೀಶ್ ಹುಟ್ಟುಹಬ್ಬ ಆಚರಣೆ




ಎಚ್.ಡಿ.ಕೋಟೆ: ತಾಲೂಕಿನ ಬಿಜೆಪಿ ಮುಖಂಡ ಸಿ.ಕೆ. ಗಿರೀಶ್ ಅವರ ಹುಟ್ಟು ಹಬ್ಬವನ್ನು ಅವರ ಸ್ನೇಹಿತರು ಹಾಗೂ ರಾಜಕೀಯ ಮುಖಂಡರು ಮತ್ತು ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಅವರು ಸಮ್ಮುಖದಲ್ಲಿ ಸಂಭ್ರಮದಿಂದ ಜನ್ಮದಿನವನ್ನು ಆಚರಿಸಿಕೊಂಡರು.

ತಾಲೂಕಿನ ನಿರಂತರ ಹೋಟೆಲ್ ನಲ್ಲಿ ರಾಜಕೀಯ ಮುಖಂಡರು ಸ್ನೇಹಿತರು ಹಿತೈಷಿಗಳು ಹಾಗೂ ಅಭಿಮಾನಿಗಳು ಪಟಾಕಿ ಸಿಡಿಸಿ ಕೇಕ್ ಕತ್ತರಿಸುವ ಮೂಲಕ ಅವರ ಹುಟ್ಟುಹಬ್ಬವನ್ನು ವಿಜೃಂಭಣೆಯಿಂದ ಆಚರಿಸಿದರು. ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ ಆರೈಸಿದರು.

ಮಾಜಿ ಶಾಸಕ ಬೀಚನಹಳ್ಳಿ ಚಿಕ್ಕಣ್ಣ, ಬಿಜೆಪಿ ಜಿಲ್ಲಾಧ್ಯಕ್ಷರಾದ ಕುಂಬ್ರಳ್ಳಿ ಸುಬ್ಬಣ್ಣ, ಮೈಮೂಲ್ ನಿರ್ದೇಶಕ ಆಶೋಕ್, ವೀರಶೈವ ಮಹಾಸಭಾ ರಾಜ್ಯ ನಿರ್ದೇಶಕ ಮೊತ್ತ ಬಸವರಾಜಪ್ಪ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಮಹದೇವಯ್ಯ, ಮೈಮೂಲ್ ನಿರ್ದೇಶಕ ಸದಾನಂದ, ಕಾಟವಾಳು ನಟರಾಜ್, ಯುವ ಮುಖಂಡರು ಜಯಪ್ರಕಾಶ್ ಚಿಕ್ಕಣ್ಣ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ವೆಂಕಟಸ್ವಾಮಿ, ಒಕ್ಕಲಿಗ ಸಂಘದ ಮಾಜಿ ಅಧ್ಯಕ್ಷ ಸುರೇಂದ್ರ ಗೌಡ, ಪ್ರಕಾಶ್ ಹೊಸಮಾಳ, ಟಿ ವೆಂಕಟೇಶ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿನಯ್, ಪರೀಕ್ಷಿತ್ ರಾಜ್ ಅರಸ್, ಶಂಬೇಗೌಡ, ರಾಜು ಬಿಡಿಗಲು, ರಾಮಚಂದ್ರೇಗೌಡ, ಸರಗೂರು ಬಿಜೆಪಿ ಅಧ್ಯಕ್ಷ ಗುರುಸ್ವಾಮಿ, ಮುಖಂಡರಾದ ನಾಗನಾಯಕ, ಚೆಲುವೇಗೌಡ, ವೈ ಟಿ ಮಹೇಶ್, ಗಣಪತಿ, ಹೋಟೆಲ್ ಮೋಹನ್, ನಟರಾಜು, ನಂದೀಶ್, ಎಚ್.ಎಸ್.ಗುರುಸ್ವಾಮಿ, ಯೋಗೇಶ್, ವಿವೇಕಾನಂದ, ಗೋಪಾಲಯ್ಯ, ಸುರೇಶ್, ಕೆಂಡಗಣ್ಣಸ್ವಾಮಿ, ಲೋಕೇಶ್,ಬಿ ಗುರುಸ್ವಾಮಿ, ಬಾಹುಬಲಿ, ಮಹದೇವಸ್ವಾಮಿ, ಶಿವಕುಮಾರ್, ಬಹದ್ದೂರ್ ಸತೀಶ್, ಮಾದೇಶ, ಗೋಕುಲ್, ಸಿದ್ದಪ್ಪ, ವಿನಯ್, ನವೀನ್, ಮನು, ಹಾಗೂ ಇನ್ನಿತರ ಸ್ನೇಹಿತರು ಮತ್ತು ಮುಖಂಡರು ಇದ್ದರು.

## ಗಾಂಧೀವಾದಿ ಮುಖ್ಯಶಿಕ್ಷಕ ಪಿ.ಚಿಕ್ಕನಾಯಕ ನಿಧನ

ಎಚ್.ಡಿ.ಕೋಟೆ: ನಿವೃತ್ತ ಮುಖ್ಯ ಶಿಕ್ಷಕ ತುಂಬಸೋಗೆ ಗ್ರಾಮದ ಪಿ.ಚಿಕ್ಕನಾಯಕ(86) ನಿಧನರಾಗಿದ್ದಾರೆ. ವಯೋಸಹಜ ಕಾಯಿಲೆಯಿಂದ ಬಳಲುತ್ತಿದ ಅವರು, ಇತ್ತೀಚೆಗೆ ಮೈಸೂರಿನ ಕೆ.ಆರ್.ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಚಿಕಿತ್ಸೆ ಫಲಿಸದೆ ಶುಕ್ರವಾರ ಸಂಜೆ ನಿಧನರಾಗಿದ್ದಾರೆ. 35 ವರ್ಷಗಳ ಶಿಕ್ಷಕ ವೃತ್ತಿಯಲ್ಲಿ ಸರಗೂರು, ಚಕ್ಕೂರು, ತುಂಬಸೋಗೆ ಸೇರಿದಂತೆ ಹಲವು ಗ್ರಾಮಗಳಲ್ಲಿ ಸೇವೆ ಸಲ್ಲಿಸಿದ್ದರು. ಶಿಕ್ಷಕ ವೃತ್ತಿ ಜೊತೆಗೆ ಭಾರತ ಸೇವಾದಳದ ಮೂಲಕ ಯುವ ಜನತೆಯಲ್ಲಿ ರಾಷ್ಟ್ರಪ್ರೇಮ ಮೂಡಿಸುತ್ತಿದ್ದರು. ಬಿಡುವಿನ ಸಮಯ ಗ್ರಾಮೀಣ ಭಾಗದಲ್ಲಿ ಅಭಿನಯಿಸುತ್ತಿದ್ದ ನಾಟಕಗಳಾದ ಸತ್ಯಹರಿಶ್ಚಂದ್ರದ ನಕ್ಷತ್ರಿಕ, ಕುರುಕ್ಷೇತ್ರದ ಶಕುನಿ ಪಾತ್ರದಾರಿಯಾಗಿ ಸಾಕಷ್ಟು ಬಾರಿ ಅಭಿನಯಿಸಿದ್ದರು. ಈ ನಾಟಕಗಳು ಹಲವು ಬಾರಿ ಮೈಸೂರಿನ ಪುರಭವನ, ಕಲಾಮಂದಿರ, ವಸ್ತುಪ್ರದರ್ಶನ ಆವರಣ ಶ್ರೀಮಲೆ ಮಹದೇಶ್ವರ ಬೆಟ್ಟದಲ್ಲಿ ಪ್ರದರ್ಶನ ಗೊಂಡಿದ್ದವು. ಸ್ವಾತಂತ್ರ್ಯ ದಿನಾಚರಣೆ, ಗಣರಾಜ್ಯೋತ್ಸವ ದಿನಗಳಲ್ಲಿ ತಾಲೂಕಿನ ಕೇಂದ್ರ ಸ್ಥಾನಗಳಲ್ಲಿ ನಡೆಯುತ್ತಿದ್ದ ಕಾರ್ಯಕ್ರಮಗಳಲ್ಲಿ ಮುಖ್ಯ ಭಾಷಣಕಾರರಾಗಿ ಪಾಲ್ಗೊಳ್ಳುತ್ತಿದ್ದರು. ಪತ್ನಿ, ಮಕ್ಕಳು ಇದ್ದಾರೆ. ಇಂದು ಮ.12:30ಕ್ಕೆ ತುಂಬಸೋಗೆ ಗ್ರಾಮದ ತೋಟದ ಜಮೀನಿನಲ್ಲಿ ಅಂತ್ಯಕ್ರಿಯೆ ನೆರವೇರಲಿದೆ.



# ದೃಢಸಂಕಲ್ಪ ಬದ್ಧತೆ ನಿರಂತರ ಪರಿಶ್ರಮದಿಂದ ಯಶಸ್ಸು

ಮೈಸೂರು: ಮನಸ್ಸು ಮಾಡಿದರೆ ಯಾವ ಸಾಧನೆಯು ಅಸಾಧ್ಯವಲ್ಲ. ದೃಢ ಸಂಕಲ್ಪ ಬದ್ಧತೆ ಮತ್ತು ನಿರಂತರ ಪರಿಶ್ರಮದಿಂದ ಉನ್ನತ ಮಟ್ಟದ ಸಾಧನೆ ಸಾಧ್ಯ ಡಿಸಿಪಿ ಸುಂದರರಾಜ್ ಹೇಳಿದರು.

ಮಹಾರಾಣಿ ಮಹಿಳಾ ಕಲ ಕಾಲೇಜಿನಲ್ಲಿ ಇಂದು ಉದ್ಯೋಗ ಮಾಹಿತಿ ಕೋಶ ಮತ್ತು ಸ್ಪರ್ಧಾತ್ಮಕ ಪರೀಕ್ಷ ತರಬೇತಿ ಕೇಂದ್ರದ ವತಿಯಿಂದ ಕಾಲೇಜಿನ ವಿದ್ಯಾರ್ಥಿನಿಯರಿಗೆ ಸ್ಪರ್ಧಾತ್ಮಕ ಪರೀಕ್ಷ ತರಬೇತಿ ಕಾರ್ಯಕ್ರಮದ ಉದ್ಘಾಟಿಸಿ ಮಾತನಾಡಿದರು. ಸೂಕ್ತ ಮಾರ್ಗದರ್ಶನದ ಕೊರತೆ ಇದ್ದ ನಮ್ಮ ವಿದ್ಯಾಭ್ಯಾಸದ ದಿನಗಳಿಗೆ ಹೋಲಿಸಿದರೆ ಇಂದಿನ ವಿದ್ಯಾರ್ಥಿಗಳಿಗೆ ಬಹಳಷ್ಟು ಮಾರ್ಗದರ್ಶನ ಲಭ್ಯವಿದೆಶಿಕ್ಷಣದಲ್ಲಿ ಅಂಕಗಳಷ್ಟೇ ಮುಖ್ಯವಲ್ಲ. ಕೌಶಲ್ಯಗಳ ಜೊತೆ ಭವಿಷ್ಯ ರೂಪಿಸಿಕೊಳ್ಳುವ ಅಗತ್ಯತೆ ಹೆಚ್ಚಿದೆ. ವಿದ್ಯಾರ್ಥಿಗಳ ಗಮನವನ್ನು ದಿಕ್ಕು ತಪ್ಪಿಸುವ ನೂರು ಅಂಶಗಳು ಇಂದು ಸಮಾಜದಲ್ಲಿವೆ. ಅವುಗಳಿಗೆ ಬಲಿಯಾಗದೆ ಬದುಕು ಕಟ್ಟಿಕೊಳ್ಳುವ ಕನಸು ಮತ್ತು ಪರಿಶ್ರಮ ಅಗತ್ಯ" ಎಂದು ಕಿವಿಮಾತು ಹೇಳಿದರು.

ಕಾಲೇಜು ಶಿಕ್ಷಣ ಇಲಾಖೆ ಮೈಸೂರು ವಲಯದ ಜಂಟಿ ನಿರ್ದೇಶಕಿ ಡಾ.ಬಿ.ಎಸ್.ಪ್ರತಿಮಾ" ಪ್ರತಿ ಊರಿನಲ್ಲೂ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಕೋಚಿಂಗ್ ಅಕಾಡೆಮಿಗಳು ಸಾವಿರಾರು ಸಂಖ್ಯೆಯಲ್ಲಿ ಹುಟ್ಟಿಕೊಂಡಿವೆ. ಆದರೆ ಅವುಗಳ ಶುಲ್ಕವನ್ನು ಪಾವತಿಸುವ ಸಾಮರ್ಥ್ಯ ಸಾಮಾಜಿಕವಾಗಿ ಮತ್ತು ಆರ್ಥಿಕವಾಗಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಕಷ್ಟಸಾಧ್ಯ. ಆ ನಿಟ್ಟಿನಲ್ಲಿ ಕಾಲೇಜು ಆಯೋಜಿಸಿರುವ ಈ ತರಬೇತಿ ಕಾರ್ಯಕ್ರಮ ವಿಶಿಷ್ಟ ಮತ್ತು ಅರ್ಥಪೂರ್ಣವಾದದ್ದು" ಎಂದು ಅಭಿಪ್ರಾಯಪಟ್ಟರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಾಲೇಜಿನ ಪ್ರಾಂಶುಪಾಲೆ ಪ್ರೊ.ಎಂ.ಎಸ್.ಅನಿತಾ ವಹಿಸಿಕೊಂಡಿದ್ದರು. ವಿದ್ಯಾರ್ಥಿನಿಯರಾದ ವೈಷ್ಣವಿ, ಪಾರ್ವತಮ್ಮ, ಸುಪ್ರಿಯ, ಐಕ್ಯೂಸಿ ಸಂಚಾಲಕ ಡಾ.ಎ.ಆನಂದ್, ಉದ್ಯೋಗ ಮಾಹಿತಿ ಕೋಶದ ಸಂಚಾಲಕ ಡಾ.ಕೃಷ್ಣರಾಜೇಂದ್ರ ಭರತ್, ಕೆ.ಸೌರಭ ಮತ್ತು ಡಾ.ಬಿ.ಸವಿತಾ, ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಸಂಚಾಲಕ ಪ್ರೊ.ಎನ್.ಪ್ರಕಾಶ್ ಮತ್ತು ಡಾ.ಜಿ.ಲಲಿತಾ, ಪತ್ರಾಂಕಿತ ವ್ಯವಸ್ಥಾಪಕ ಕೆ.ವೆಂಕಟೇಶ್ ಇತರರು ಉಪಸ್ಥಿತರಿದ್ದರು.



**▸▸ ಡಿಸಿಪಿ ಸುಂದರರಾಜ್ ಹೇಳಿಕೆ**

**▸▸ ಸ್ಪರ್ಧಾತ್ಮಕ ಪರೀಕ್ಷ ತರಬೇತಿ ಕಾರ್ಯಕ್ರಮ**

# ಫೆ.25ರಿಂದ ರಾಷ್ಟ್ರೀಯ ರಂಗೋತ್ಸವ



ಮೈಸೂರು: ಎಂಜಿನಿಯರ್‌ಗಳೇ ರಚಿಸಿಕೊಂಡಿರುವ ಅಭಿಯಂತರರು ತಂಡದ ವತಿಯಿಂದ ಫೆ.25 ರಿಂದ ಮಾ.1ರವರೆಗೆ ರಂಗಾಯಣದ ಕಿರು ರಂಗ ಮಂದಿರದಲ್ಲಿ ವಾರ್ಷಿಕೋತ್ಸವ ಹಿನ್ನೆಲೆ ರಾಷ್ಟ್ರೀಯ ರಂಗೋತ್ಸವ ಆಯೋಜಿಸಿರುವುದಾಗಿ ಸಂಸ್ಥೆಯ ಮುಖ್ಯಸ್ಥ ಎಚ್.ಎಸ್. ಸುರೇಶ್ ಬಾಬು ತಿಳಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಫೆ. 25 ರ ಸಂಜೆ 6.30ಕ್ಕೆ ಹಂಪಿ ಕನ್ನಡ ವಿವಿ ವಿಶ್ರಾಂತ ಕುಲಪತಿ ಡಾ.ಹಿ.ಚಿ. ಬೋರಲಿಂಗಯ್ಯ ಉದ್ಘಾಟಿಸುವರು, ಶಶಿಧರ ಭಾರಿಘಾಟ್, ವಿ.ಎನ್. ಮಲ್ಲಿಕಾರ್ಜುನ ಸ್ವಾಮಿ, ಡಾ. ಸುದರ್ಶನ್ ಇನ್ನಿತರರು ಹಾಜರಿರುವರು. ಟಿಕೆಟ್ ದರ 125 ರೂ. ಗಳಾಗಿವೆ ಎಂದು ಮಾಹಿತಿ ನೀಡಿದರು.

ಹಿರಿಯ ರಂಗಕರ್ಮಿ ರಾಜಶೇಖರ ಕದಂಬ ಮಾತನಾಡಿ, ಫೆ.25ರ ಸಂಜೆ ಉದ್ಘಾಟನೆ ಬಳಿಕ ಕರಾವಳಿಯ ನಿರ್ದಿಗಂತ ತಂಡದ ರಾಮಕೃಷ್ಣ ಶಿವ ನಾಟಕ, 26ರಂದು ಸಂಜೆ 7ಕ್ಕೆ ಒಡ್ಡೋಲಗ ತಂಡದ ಶುನಶ್ಯೇಪ, 27ರಂದು ಸಂಜೆ 7ಕ್ಕೆ ದಿ ಇಂಟರ್ ನ್ಯಾಷನಲ್ ಥಿಯೇಟರ್‌ನಿಂದ ಹೆಸರಿನ ನಾಟಕ, 28 ರಂದು ಸಂಜೆ 7ಕ್ಕೆ ಅಭಿಯಂತರ ತಂಡದ ಮರಣ ಮೃದಂಗ, ಮಾ.1ರಂದು ಥಿಯೇಟರ್ ನಿಶಾ ತಂಡದ ಯಯಾತಿ ನಾಟಕ ಪ್ರದರ್ಶನ ನಡೆ ಯಲಿವೆ ಎಂದು ತಿಳಿಸಿದರು. ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ತಂಡದ ಸದಸ್ಯರಾದ ಪ್ರಾಶ ಇದ್ದರು.

### ಮಂಗಲ, ಜಕ್ಕಹಳ್ಳಿ, ಕಾರೆಮಾಳ, ಹಂಗಳ, ಕಲ್ಲಿಗೌಡನಹಳ್ಳಿ ಗ್ರಾಮದವರಿಂದ ಪ್ರತಿಭಟನೆ

# ಸಫಾರಿ ತೆರೆಯಲು ಅದೇಶ ಸ್ವಾಗತಾರ್ಹ

ಗುಂಡ್ಲುಪೇಟೆ: ತಾಲ್ಲೂಕಿನ ಬಂಡೀಪುರದ ಮೇಲುಕಾಮನಹಳ್ಳಿ ಬಳಿ ಸಪಾರಿ ಕೇಂದ್ರ ವಿದ್ದು ಕಳೆದು ಮೂರು ತಿಂಗಳಿಂದ ಸಪಾರಿ ಸ್ಥಗಿತಗೊಂಡ ಹಿನ್ನಲೆ ಸ್ಥಳೀಯ ಗ್ರಾಮದ ಜನರಿಗೆ ಸಮಸ್ಯೆಯಾಗುತ್ತಿದೆ ಆಗಾಗಿ ಸಫಾರಿ ತೆರೆಯಲು ಅರಣ್ಯ ಮಂತ್ರಿ ಈಶ್ವರ್ ಖಂಡ್ರೆ ಅದೇಶ ಸ್ವಾಗತಾರ್ಹ ಸಫಾರಿ ತೆರೆಯಬೇಕು ಎಂದು ರೆಸಾರ್ಟ್ ಸಿಬ್ಬಂದಿಗಳು, ಸುತ್ತಮುತ್ತಲಿನ ಗ್ರಾಮದವರು ಪ್ರತಿಭಟನೆ ನಡೆಸಿದರು.




ರೆಸಾರ್ಟ್ ಹಾಗೂ ಪ್ರವಾಸೋದ್ಯಮವನ ನಂಬಿ ಬದುಕುತ್ತಿರುವ ರೈತರ ಮಕ್ಕಳ ಜೀವನ ಅತಂತ್ರ ಸ್ಥಿತಿಯಲ್ಲಿ ಇದ್ದು ಸಫಾರಿ ತೆರೆಯುವಂತೆ ಮಂಗಲ, ಜಕ್ಕಹಳ್ಳಿ, ಕಾರೆಮಾಳ, ಹಂಗಳ, ಕಲ್ಲಿಗೌಡನಹಳ್ಳಿ ಗ್ರಾಮದ ಅನೇಕ ಯುವಕರು ಸಫಾರಿ ತೆರೆಯುವಂತೆ ಪ್ರತಿಭಟನೆ ನಡೆಸಿದರು.

ನೂರಾರು ಸಂಖ್ಯೆಯಲ್ಲಿ ಜಮಾಯಿಸಿ ರೈತ ಸಂಘದವರ ವಿರುದ್ಧ ಘೋಷಣೆ ಕೂಗುತ್ತ ನಾವು ರೈತರ ಮಕ್ಕಳು ನಮ್ಮಲ್ಲಿಕಾಡು ಪ್ರಾಣಿಗಳ ಹಾವಳಿಯಿಂದ ಮಳೆಯ ಕೊರತೆಯಿಂದ ವ್ಯವಸಾಯ ಮಾಡಲಾಗದೆ ಜೀವನೋಪಾಯಕ್ಕಾಗಿ ಪ್ರವಾಸೋದ್ಯಮ ನಂಬಿ ಎಳನೀರು, ಸಣ್ಣ ವ್ಯಾಪಾರ, ಅಂಗಡಿಮುಂಗಟ್ಟು ರೆಸಾರ್ಟ್ ಗಳಲ್ಲಿ ಕೆಲಸ, ಹೊರ ಗುತ್ತಿಗೆ ನೌಕರಿ, ಅರಣ್ಯ ಇಲಾಖೆಯಲ್ಲಿ ಡ್ರೈವಿಂಗ್ ಕೆಲಸ ಮಾಡಿ ಜೀವನ ಸಾಗುಸುತಿದ್ದಾರೆ ದೇಶದಲ್ಲಿಯೇ ಬಂಡೀಪುರ ಹೆಸರುವಾಸಿ ಪ್ರವಾಸೋದ್ಯಮಕ್ಕೆ ತೊಂದರೆಯಾದರೆ ನೂರಾರು ಜನ ಬೀದಿಗೆ ಬೀಳುತ್ತಾರೆ ಆಗಾಗಿ ಸಫರಿ ಪ್ರಾರಂಭಿಸಬೇಕು ಎಂದರು.

ಈ ಸಂದರ್ಭದಲ್ಲಿ ಎಂಸಿ ನಾಗರಾಜು, ಬಸಪ್ಪ ಎಲ್ಲಚ್ಚಟ್ಟಿ, ಉಮಾನಾಥ್, ವಿವೇಕ್, ಕುಮಾರ್ ಗಂಗಾಧರಪ್ಪ, ನಂದೀಶ್ ಹಂಗಳ, ಉಮೇಶ್ ಮಂಗಲ, ಅವಿನಾಶ್, ಸೇರಿದಂತೆ ಮತ್ತಿತರರಿದ್ದರು.

> **ಸಪಾರಿ ತೆರೆಯಬೇಕು ಇದರಿಂದ ಸ್ಥಳೀಯ ಜನರಿಗೆ ಕೆಲಸ ಸಿಗುತ್ತದೆ ಅಲ್ಲದೆ ಸಪಾರಿಯಿಂದ ಪ್ರವಾಸೋದ್ಯಮಕ್ಕೆ ಅನುಕೂಲ, ಅರಣ್ಯ ಇಲಾಖೆ ಯುವ ನೌಕರ ರನ್ನು ಅರ್ಯ ಕಾಯಲು ಬಿಡಬೆಕು ವಯಸ್ಸಾದವರನ್ನು ಸಪಾರಿ ಬಳಿ ಬಿಡಬೇಕು, ಸಫಾರಿ ಬಂಡಿಪುರ ಸುತ್ತಮುತ್ತಲಿನ ಜನರಬದುಕಿಗೆ ಆಸೆ ಅಗಾಗಿ ಸಫಾರಿ ಆರಂಭಕ್ಕೆ ನಮ್ಮ ಬೆಂಬಲ.**
>
> **▸▸ ನಂದೀಶ್ ಎಚ್ ಎಂ**
> ಹಂಗಳ ಪ್ರಗತಿಪರ ರೈತ

# ಸಂಕ್ಷಿಪ್ತ ಸುದ್ದಿ

## ಪಿ.ಯು.ಸಿ ಪರೀಕ್ಷಾ ಕೇಂದ್ರಗಳ ಸುತ್ತಲೂ ನಿಷೇದಾಜ್ಞೆ ಜಾರಿ

**ಮೈಸೂರು:** ಫೆಬ್ರವರಿ 28 ರಿಂದ ಮಾರ್ಚ್ 17ರವರೆಗೆ ಮೈಸೂರು ನಗರದ 28 ಪರೀಕ್ಷಾ ಕೇಂದ್ರಗಳಲ್ಲಿ ದ್ವಿತೀಯ ಪಿ.ಯು.ಸಿ ಪರೀಕ್ಷೆ ನಡೆಯಲಿದೆ. ಸದರಿ ಪರೀಕ್ಷೆಗಳನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಸೂಕ್ತ ಬಂದೋಬಸ್ತ್ ವ್ಯವಸ್ಥೆ ಹಾಗೂ ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023 ಸೆಕ್ಷನ್ 163 ರೀತ್ಯ ನಿಷೇಧಾಜ್ಞೆ ಜಾರಿ ಮಾಡಲಾಗಿದೆ.

ಪರೀಕ್ಷಾ ಕೇಂದ್ರಗಳು: ಡಿ. ಬನುಮಯ್ಯ ಪದವಿಪೂರ್ವ ಕಾಲೇಜು, ಸಯ್ಯಾಜಿರಾವ್ ರಸ್ತೆ, ಜೆಎಸ್ಎಸ್ ಪದವಿ ಪೂರ್ವ ಕಾಲೇಜು, ಊಟಿ ರಸ್ತೆ, ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ಜೆಎಲ್‌ಬಿ ರಸ್ತೆ, ಮರಿಮಲ್ಲಪ್ಪ ಪದವಿಪೂರ್ವ ಕಾಲೇಜು, ರಾಮವಿಲಾಸ ರಸ್ತೆ, ಮಹಾರಾಣಿ ಸರ್ಕಾರಿ ಪದವಿ ಪೂರ್ವ ಕಾಲೇಜು, ಎನ್.ಎಸ್.ರಸ್ತೆ, ಸದ್ವಿದ್ಯಾ ಪದವಿಪೂರ್ವ ಕಾಲೇಜು, ನಾರಾಯಣ ಶಾಸ್ತ್ರಿ ರಸ್ತೆ, ಜೆಎಸ್ಎಸ್ ಪದವಿಪೂರ್ವ ಕಾಲೇಜು, ಸರಸ್ವತಿಪುರಂ, ಸರ್ಕಾರಿ ಪದವಿ ಪೂರ್ವ ಕಾಲೇಜು, ಅನಿಕೇತನ ರಸ್ತೆ, ಕುವೆಂಪುನಗರ, ವಿಜಯ ವಿಠಲ ಪದವಿ ಪೂರ್ವ ಕಾಲೇಜು, ಸರಸ್ವತಿಪುರಂ, ಆದಿಚುಂಚನಗಿರಿ ಪದವಿ ಪೂರ್ವ ಕಾಲೇಜು, ಕುವೆಂಪುನಗರ,

ಎಸ್‌ಬಿಐಸಿ ಜ್ಞಾನೋದಯ ಪದವಿ ಪೂರ್ವ ಕಾಲೇಜು, ಸೆಂಟ್ ಫಿಲೋಮಿನಾ ಪದವಿಪೂರ್ವ ಕಾಲೇಜು, ಬನ್ನಿಮಂಟಪ, ಟೆರಿಷಿಯನ್ ಪದವಿ ಪೂರ್ವ ಕಾಲೇಜು, ಸಿದ್ಧಾರ್ಥನಗರ, ವಿದ್ಯಾವರ್ಧಕ ಪದವಿಪೂರ್ವ ಕಾಲೇಜು ಶೇಷಾದ್ರಿ ಅಯ್ಯರ್ ರಸ್ತೆ, ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು, ಪೀಪಲ್ಸ್ ಪಾರ್ಕ್, ಸರ್ಕಾರಿ ವಿಭಜಿತ ಮಹಾರಾಜ ಪದವಿ ಪೂರ್ವ ಕಾಲೇಜು, ನಜರ್‌ಬಾದ್, ವಾಣಿವಿಲಾಸ ಅರಸು ಪದವಿ ಪೂರ್ವ ಕಾಲೇಜು, ಎಸ್‌ಬಿಆರ್‌ಆರ್ ಮಹಾಜನ ಪಿ.ಯು. ಕಾಲೇಜು

## ವಿದ್ಯುತ್ ವ್ಯತ್ಯಯ

**ಮೈಸೂರು:** ಕ.ವಿ.ಪ್ರ.ನಿ.ನಿ ವತಿಯಿಂದ ವಿ.ವಿ ಮೊಹಲ್ಲಾ ವಿಭಾಗದ ಮೇಟಗಳ್ಳಿ ಶಾಖಾ ವ್ಯಾಪ್ತಿಯ 11 ಕೆ.ವಿ ನಂಜುಂಡೇಶ್ವರ ವಿದ್ಯುತ್ ಮಾರ್ಗದಲ್ಲಿ 220 ಕೆ.ವಿ ಹೂಟಗಳ್ಳಿ–ವಾಜಮಂಗಲ–ಟಿ.ಕೆ ಹಳ್ಳಿ ಏಕಮುಖ ವಿದ್ಯುತ್ ಪ್ರಸರಣ ಮಾರ್ಗದ ಬದಲಾಗಿ ದ್ವಿ ಮುಖ ಗೋಪುರ ಹಾಗೂ ದ್ವಿ–ಮುಖ ವಿದ್ಯುತ್ ಮಾರ್ಗವನ್ನಾಗಿ ನಿರ್ಮಿಸುವ ಕಾಮಗಾರಿ ನಿಮಿತ್ತ ಫೆಬ್ರವರಿ 21 ರಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 4:00 ಗಂಟೆಯವರೆಗೆ ಈ ಕೆಳಕಂಡ ಪ್ರದೇಶಗಳಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ.

## ಬಾಲಕರ 5ನೇ ತರಗತಿ ಪ್ರವೇಶಕ್ಕೆ ಆಯ್ಕೆ ಪ್ರಕ್ರಿಯೆ

**ಚಿಕ್ಕಬಳ್ಳಾಪುರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಚಿಕ್ಕಬಳ್ಳಾಪುರ ಇವರ ವತಿಯಿಂದ ಕಿರಿಯರ ವಿಭಾಗದ ಬಾಲಕರ 5ನೇ ತರಗತಿ ಪ್ರವೇಶಕ್ಕೆ ಆಯ್ಕೆ ಪ್ರಕ್ರಿಯೆಯನ್ನು ಹಾಕಿ ಮತ್ತು ಫುಟ್ಬಾಲ್ ವಿಭಾಗದಲ್ಲಿ ಜಿಲ್ಲೆಯ ಎಲ್ಲಾ ತಾಲ್ಲೂಕು ಕೇಂದ್ರ ಕ್ರೀಡಾಂಗಣದಲ್ಲಿ ಈ ಕೆಳಗೆ ನಮೂದಿಸಿದ ದಿನಾಂಕ ಮತ್ತು ಸ್ಥಳಗಳಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರತಿಭಾನ್ವಿತರು ಸದಾವಕಾಶವನ್ನು ಉಪಯೋಗಿಸಿಕೊಳ್ಳಲು ಈ ಮೂಲಕ ಕೋರಲಾಗಿದೆ.

ಫೆಬ್ರವರಿ 23 ರಂದು ಗುಡಿಬಂಡೆ ತಾಲ್ಲೂಕಿನ ಅರವಿಂದ ಶಾಲೆ ಆವರಣ, ಫೆಬ್ರವರಿ 24 ರಂದು ಶಿಡ್ಲಘಟ್ಟ ತಾಲ್ಲೂಕಿನ ನೆಹರೂ ಕ್ರೀಡಾಂಗಣ, ಫೆಬ್ರವರಿ 25 ರಂದು ಬಾಗೇಪಲ್ಲಿ ತಾಲ್ಲೂಕು ಕ್ರೀಡಾಂಗಣ, ಫೆಬ್ರವರಿ 26 ರಂದು ಗೌರಿಬಿದನೂರು ತಾಲ್ಲೂಕು ನೇತಾಜಿ ಕ್ರೀಡಾಂಗಣ, ಫೆಬ್ರವರಿ 27 ರಂದು ಚಿಂತಾಮಣಿ ತಾಲ್ಲೂಕು ಝಾನ್ಸಿ ರಾಣಿ ಲಕ್ಷ್ಮೀಬಾಯಿ ಕ್ರೀಡಾಂಗಣ, ಮಾರ್ಚ್ 2 ರಂದು ಚಿಕ್ಕಬಳ್ಳಾಪುರ ನಗರದ ಸರ್. ಎಂ.ವಿ ಜಿಲ್ಲಾ ಕ್ರೀಡಾಂಗಣದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ರವರೆಗೆ ನಡೆಯಲಿದ್ದು, ಜಿಲ್ಲಾ ಮಟ್ಟದ ಆಯ್ಕೆ ಪ್ರಕ್ರಿಯೆಯು ಮಾರ್ಚ್ 2 ರಂದು ಬೆಳಿಗ್ಗೆ 10.00 ಗಂಟೆಯಿಂದ ಸಂಜೆ 4.30 ರವರೆಗೆ ಹಮ್ಮಿಕೊಳ್ಳಲಾಗಿದೆ.

ಕಿರಿಯರ ವಿಭಾಗದ ಆಯ್ಕೆಯಲ್ಲಿ ಭಾಗವಹಿಸುವ ಬಾಲಕರ ಅರ್ಹತೆಗಳು

ಕ್ರೀಡಾ ವಸತಿ ನಿಲಯಕ್ಕೆ ಸೇರಬಯಸುವ ಬಾಲಕರು 11 ವರ್ಷ ಮೀರಿರಬಾರದು. ಪ್ರಸಕ್ತ ಸಾಲಿನಲ್ಲಿ 4ನೇ ತರಗತಿಯಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಾಗಿರಬೇಕು. 2026–27 ನೇ ಸಾಲಿಗೆ 5ನೇ ತರಗತಿಗೆ ಸೇರುವ ಅರ್ಹತೆ ಹೊಂದಿರಬೇಕು. ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸುವ ಬಾಲಕರು ಆಧಾರ್ ಕಾರ್ಡ್, 2 ಪಾಸ್ ಫೋಟೋ ಮತ್ತು ಜನ್ಮ ದಿನಾಂಕದ ದಾಖಲೆಯನ್ನು ಕಡ್ಡಾಯವಾಗಿ ತರತಕ್ಕದ್ದು. ಹಾಕಿ ಮತ್ತು ಫುಟ್ಬಾಲ್ ಕ್ರೀಡೆಯಲ್ಲಿ ವಿದ್ಯಾರ್ಥಿಗಳು ಹಾಕಿಯಲ್ಲಿ 142 ಸೆ.ಮೀ ಹಾಗೂ ಫುಟ್ಬಾಲ್ ಕ್ರೀಡೆಯಲ್ಲಿ 140 ಸೆ.ಮೀ ಎತ್ತರವನ್ನು ಹೊಂದಿರಬೇಕು. ಆಯ್ಕೆಗೆ ಬರುವ ಕ್ರೀಡಾಪಟುಗಳಿಗೆ ಯಾವುದೇ ರೀತಿಯ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ನೀಡಲಾಗುವುದಿಲ್ಲ.

**ದೈಹಿಕ ಸಾಮರ್ಥ್ಯ ಪರೀಕ್ಷೆಗಳು**ಕ್ರೀಡಾ ಶಾಲೆ/ವಸತಿ ನಿಲಯಗಳಿಗೆ ಪ್ರವೇಶ ಕೋರುವ ಅಭ್ಯರ್ಥಿಗಳ ದೈಹಿಕ ಸಾಮಥ್ಯ /ಶಕ್ತಿ, ಚಾಕಚಕ್ಯತೆ, ಸಹಿಷ್ಣುತೆ, ಕುಶಲತೆ, ವೇಗ ಹಾಗೂ ಆಯಾ ಕ್ರೀಡೆಗೆ ಅಗತ್ಯವಿರುವ ಕನಿಷ್ಠ ಎತ್ತರ ಇವುಗಳನ್ನು ಮೊದಲ ಹಂತದ ಆಯ್ಕೆಯಲ್ಲಿ (ಭಾಗ–1) ಪರೀಕ್ಷೆ ನಡೆಸಲಾಗುವುದು ಹಾಗೂ ಈ ಪರೀಕ್ಷೆಗಳಲ್ಲಿ ಶೇ.50 ಕ್ಕೂ ಹೆಚ್ಚು ಅಂಕಗಳನ್ನು ಪಡೆದವರಿಗೆ ಎರಡನೇ ಹಂತದ ಆಯ್ಕೆ ಪರೀಕ್ಷೆಗೆ ಅವಕಾಶ ಮಾಡಿಕೊಡಲಾಗುವುದು. ಪ್ರಥಮ ಸುತ್ತಿನ ಆಯ್ಕೆ ಪರೀಕ್ಷೆಯಲ್ಲಿ ಉತ್ತೀರ್ಣರಾದವರಿಗೆ ಅರ್ಜಿಯನ್ನು ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8197572656, 7204737892 ಗೆ ಸಂಪರ್ಕಿಸಬಹುದೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕನ ಪತ್ತೆಗೆ ಮನವಿ

**ರಾಮನಗರ:** ಹಾರೋಹಳ್ಳಿ ಹೋಬಳಿಯ ಸೊಂಟೇನಹಳ್ಳಿ ಗ್ರಾಮದ ನಿವಾಸಿ ಚಿರು ಬಿನ್ ರಾಜೇಶ್ (12 ವರ್ಷ) ಕಾಣೆಯಾಗಿದ್ದಾರೆ ಎಂದು ಪೊಲೀಸ್ ಠಾಣೆಗೆ ದೂರು ದಾಖಲಾಗಿದೆ.

**ಚಹರೆಯ ವಿವರ:**– ಸಾಧಾರಣ ಮೈಕಟ್ಟು, ದುಂಡುಮುಖ, ಎಣ್ಣೆಗೆಂಪು ಮೈಬಣ್ಣ, 4.5 ಅಡಿ ಎತ್ತರ, ಇವರು ಕಾಣೆಯಾಗುವಾಗ ಕೇಸರಿ ಬಣ್ಣದ ಟೀ ಶರ್ಟ್ ಹಾಗೂ ಸಿಮೆಂಟ್ ಬಣ್ಣದ ನಿಕ್ಕರ್ ಧರಿಸಿರುತ್ತಾರೆ. ಇವರು ಕಂಡು ಬಂದರೆ ಆರಕ್ಷಕ ಉಪ ನಿರೀಕ್ಷಕರು, ಮಹಿಳಾ ಪೊಲೀಸ್ ಠಾಣೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ. ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.ಮಹಿಳಾ ಪೊಲೀಸ್ ಠಾಣೆ, ಬೆಂಗಳೂರು ದಕ್ಷಿಣ ಜಿಲ್ಲೆ, ರಾಮನಗರ. ಇವರನ್ನು ಸಂಪರ್ಕಿಸುವಂತೆ ಕೋರಲಾಗಿದೆ.

# ಯುವಜನತೆ ನಗರದ ಚಿತ್ರಣವನ್ನು ಕಣ್ತುಂಬಿಕೊಳ್ಳಿ : ಎನ್ ಚಲುವರಾಯಸ್ವಾಮಿ

**ಮಂಡ್ಯ :** ಜಿಲ್ಲೆಯ ಯುವ ಜನತೆಯು ನಗರದ ಚಿತ್ರಣವನ್ನು ಪ್ರದರ್ಶನ ಮಾಡುವ ನಿಟ್ಟಿನಲ್ಲಿ ಹೆಲಿಪ್ಯಾಡ್ ಸವಾರಿ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜಿಸಲಗಿದ್ದು ಮೂರು ದಿನಗಳ ಕಾಲ ಸವಾರಿ ಪ್ರದರ್ಶನ ಕಾರ್ಯಕ್ರಮ ಇರುತ್ತದೆ ಎಲ್ಲರೂ ಸದುಪಯೋಗ ಪಡಿಸಿಕೊಳ್ಳಿ ಎಂದು ಕೃಷಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ರವರು ಹೇಳಿದರು.

ಶುಕ್ರವಾರ ಬೂದನೂರು ಉತ್ಸವ 2026ರ ಪ್ರಯುಕ್ತ ಚಿಕ್ಕ ಮಂಡ್ಯದಲ್ಲಿ ಹೆಲಿಕಾಪ್ಟರ್ ರೈಡ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಜೊತೆಗೆ ಜಿಲ್ಲೆಯ ಸಾರ್ವಜನಿಕರ ನೂತನವಾಗಿ ಕಾರ್ಯಕ್ರಮವನ್ನು ಮಾಡುವ ನಿಟ್ಟಿನಲ್ಲಿ ಬೂದನೂರು ಉತ್ಸವ ಪ್ರಯುಕ್ತ ಹೆಲಿ ಟೂರಿಸಂ ಹೆಲಿಪ್ಯಾಡ್ ಸವಾರಿ ಪ್ರದರ್ಶನವನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಬೂದನೂರು ಉತ್ಸವವನ್ನು ಮೊದಲನೇ ವರ್ಷ ತುಂಬಾ ಯಶಸ್ವಿಯಾಗಿ ಮಾಡಲಾಗಿದೆ.





ಕಳೆದ ವರ್ಷಕ್ಕಿಂತ ನೂತನ ವರ್ಷ ಬಹಳ ವಿಭಿನ್ನವಾಗಿ ಮಾಡಬೇಕು ಎಂದು ಹೇಳಿದರು

ಜಿಲ್ಲೆಯಲ್ಲಿ ಬೂದನೂರು ಉತ್ಸವ –2026 ರ ಪ್ರಯುಕ್ತ ಏರ್ಪಡಿಸಲಗಿದ್ದ ವಿವಿಧ ರೀತಿಯ ಕ್ರೀಡೆ ಮತ್ತು ರಂಗೋಲಿ ಸ್ಪರ್ಧೆಗಳ ಕಾರ್ಯಕ್ರಮಗಳು ಬಹಳ ಯಶಸ್ವಿಯಾಗಿ ಪೂರ್ಣಗೊಂಡವೆ ಎಂದು ಹೇಳಿದರು.

ಮಾರ್ಚ್ 7 ರಂದು ಜಿಲ್ಲಾಡಳಿತ ವತಿಯಿಂದ "ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಗಳು ಮತ್ತು ಅಸ್ಪೃಶ್ಯತಾ ನಿವಾರಣಾ ಕಾಯ್ದೆ "ಯ ಅರಿವು ಕಾರ್ಯಾಗಾರವನ್ನು ನಗರದ ಡಾ. ಬಿಆರ್ ಅಂಬೇಡ್ಕರ್ ಭವನದಲ್ಲಿ ಆಯೋಜಿಸಲಾಗಿದೆ. ಸಮಾಜದ ಎಲ್ಲಾ ವರ್ಗದವರು ಮತ್ತು ಮುಖಂಡರುಗಳು ಕಾರ್ಯಗಾರ ಕಾರ್ಯಕ್ರಮಕ್ಕೆ ಭಾವಹಿಸಿ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

ಸಂದರ್ಭದಲ್ಲಿ ಜಿಲ್ಲಾ ಶಾಸಕರಾದ ಪಿ ರವಿಕುಮಾರ್, ಮದ್ದೂರು ಶಾಸಕರಾದ ಕೆ. ಎಂ ಉದಯ್,ಜಿಲ್ಲಾಧಿಕಾರಿಗಳಾದ ಡಾ. ಕುಮಾರ, ಮುಖ್ಯ ಕಾರ್ಯನಿರ್ವಹಣಾಧಿಕಾರಿಯಾದ ಕೆ ಆರ್.ನಂದಿನಿ, ಪೊಲೀಸ್ ಅಧೀಕ್ಷಕರಾದ ವಿ ಜೆ ಶೋಭಾ ರಾಣಿ, ಉಪ ವಿಭಾಗ ಅಧಿಕಾರಿಯಾದ ಶಿವಮೂರ್ತಿ, ತಹಸೀಲ್ದಾರ್ ವಿಶ್ವನಾಥ್ ಇನ್ನಿತರರಿದ್ದರು.

# ಶಾಂತಿ ನೆಲೆಸಲು ಬುದ್ಧರ ಸಂದೇಶ ಅನಿವಾರ್ಯ: ಇಂದರತನ ಥೇರೋ



**ಮೈಸೂರು:** ಶ್ರೀಲಂಕಾದಿಂದ ಮೈಸೂರಿಗೆ ಆಗಮಿಸಿದ ಭಗವಾನ್ ಬುದ್ಧರ ಅಸ್ತಿಯನ್ನು ಸಾರ್ವಜನಿಕರ ದರ್ಶನಕ್ಕಾಗಿ ಇರಿಸಿ ಗೌರವಪೂರ್ವಕವಾಗಿ ವಂದನೆ ಸಲ್ಲಿಸಿ ವಿಜಯನಗರ 1ನೇ ಹಂತದ ಡಿ.ಸಂಜೀವಯ್ಯ ಸ್ಮಾರಕ ಶಿಕ್ಷಣ ಸಂಸ್ಥೆಯ ಆವರಣದಲ್ಲಿರುವ ಸಿದ್ಧಾರ್ಥ ಬುದ್ಧವಿಹಾರಕ್ಕೆ ಮೆರವಣಿಗೆಯ ಮೂಲಕ ಕರೆತರಲಾಯಿತು.

ಶ್ರೀಲಂಕಾದ ಬೌದ್ಧ ಭಿಕ್ಕು ಇಂದರತನ ಥೇರೋ ಅವರ ಸಮ್ಮುಖದಲ್ಲಿ ಆಗಮಿಸಿದ ಬುದ್ಧರ ಅಸ್ತಿಯನ್ನು ಕರ್ನಾಟಕ ಬುದ್ಧಧಮ್ಮ ಸಮಿತಿಯ ಪದಾಧಿಕಾರಿಗಳು ಬೌದ್ಧಭಿಕ್ಕುಗಳಿಗೆ ಹೂಗುಚ್ಛ ನೀಡಿ, ಬುದ್ಧರ ಅಸ್ತಿಗೆ ನಮಸ್ಕರಿಸಿ ಬರಮಾಡಿಕೊಂಡರು.

ನಂತರ ವಿಹಾರದಲ್ಲಿರುವ ಬುದ್ಧರ ಮೂರ್ತಿಯ ಬಳಿ ಅಸ್ತಿಯನ್ನು ಇರಿಸಿ ಎಲ್ಲರ ಜೊತೆಗೂಡಿ ಬುದ್ಧವಂದನೆ ನೆರವೇರಿಸಲಾಯಿತು.

ಈ ವೇಳೆ ಮಾತನಾಡಿದ ಭಿಕ್ಕು ಇಂದರತನ ಥೇರೋ, ಬುದ್ಧರು ಕುಶಿನಗರದಲ್ಲಿ ಮಹಾಪರಿನಿರ್ವಾಣ ಹೊಂದಿದ ನಂತರ ಅವರ ಅಸ್ತಿಯನ್ನು ಎಂಟು ರಾಜ್ಯಗಳಿಗೆ ಹಂಚಲಾಯಿತು. ಆ ಅಸ್ತಿಗಳ ಮೇಲೆ ಅನೇಕ ಸ್ತೂಪಗಳನ್ನು ನಿರ್ಮಿಸಲಾಯಿತು. ಚಕ್ರವರ್ತಿ ಅಶೋಕನ ನಂತರ ಅಸ್ತಿಗಳನ್ನು ಪುನಃ ಹಂಚಿ ಭಾರತದೆಲ್ಲೆಡೆ ಸ್ತೂಪಗಳನ್ನು ಕಟ್ಟಿಸಿದರು. ದೇಶದಲ್ಲಿ ಶಾಂತಿ ಮತ್ತು ಧಮ್ಮ ಸಂದೇಶ ಸಾರಲು ಎಲ್ಲೆಡೆ ಬುದ್ಧರ ಅಸ್ತಿಯನ್ನು ತಂದು ಮೆರವಣಿಗೆ ಮಾಡಲಾಗುತ್ತಿದೆ. ಸಮಾಜದಲ್ಲಿ ಸಹೋದರತ್ವ ಮತ್ತು ಸಮಾನತೆ ಬಲಪಡಿಸುವುದು ಇದರ ಉದ್ದೇಶವಾಗಿದೆ ಎಂದರು.

ಬೌದ್ಧ ಪರಂಪರೆಯಲ್ಲಿ ಅಸ್ತಿಯನ್ನು ಪವಿತ್ರ ಚಿಹ್ನೆ ಎಂದು ಗೌರವಿಸಲಾಗುತ್ತದೆ. ಇದು ಬುದ್ಧರ ಧಮ್ಮವನ್ನು ನೆನಪಿಸುವ ಪ್ರತೀಕವಾಗಿದೆ. ಆಧುಕಿನ ಯುಗದ ಭರಾಟೆಯಲ್ಲಿ ಹಣ, ಅಂತಸ್ತು, ಆಸ್ತಿ, ಅಧಿಕಾರಕ್ಕಾಗಿ ಕಿತ್ತಾಟ, ಜಗಳ, ಕೊಲೆ ಸುಲಿಗೆ ನಡೆಯುತ್ತಿದ್ದು, ಜನರು ನೆಮ್ಮದಿಯನ್ನು ಕಳೆದುಕೊಂಡಿದ್ದಾರೆ. ಹಾಗಾಗಿ ವಿಶ್ವದಲ್ಲಿ ಶಾಂತಿ ನೆಲೆಸಲು ಬುದ್ಧರ ಸಂದೇಶ ಅನಿವಾರ್ಯವಾಗಿದೆ ಎಂದು ಹೇಳಿದರು.

ಇದೇ ವೇಳೆ ಬಿಕ್ಕುಗಳ ಸಮ್ಮುಖದಲ್ಲಿ ಬೋಧಿವೃಕ್ಷಕ್ಕೆ ಪೂಜೆ ಸಲ್ಲಿಸಿ, ತ್ರಿಸರಣ, ಪಂಚಶೀಲ ಪಠಿಸಲಾಯಿತು. ಇಳಮುರುಗನ್, ಜೈಕುಮಾರ್, ಬೋಧಿ ಚಂದ್ರನ್, ಸಮಿತಿಯ ಸಹಕಾರ್ಯದರ್ಶಿ ಎಚ್.ಶಿವರಾಜು, ಆರ್.ನಟರಾಜು, ಎಂ.ಸಾವಕಯ್ಯ, ನಿಸರ್ಗ ಸಿದ್ದರಾಜು, ಮಾ.ನಾಗಯ್ಯ, ಲಿಂಗಣ್ಣಯ್ಯ, ಮಹದೇವಸ್ವಾಮಿ, ಜಗದೀಶ್, ಅನಸೂಯ, ಪುಟ್ಟಸ್ವಾಮಿ, ರೂಪೇಶ್, ಪುನೀತ್, ಸುರೇಶ, ಮುಂತಾದವರು ಹಾಜರಿದ್ದರು.

# 38ನೇ ಅಖಿಲ ಭಾರತ ಅಂಚೆ ಸಾಂಸ್ಕೃತಿಕ ಸಮಾರಂಭ ಸಂಪನ್ನ



**ಮೈಸೂರು:** ಪ್ರತಿಯೊಬ್ಬರ ಜೀವನದಲ್ಲೂ ವೃತ್ತಿ ಮತ್ತು ಪ್ರವೃತ್ತಿ ಕೂಡ ಬಹಳ ಮುಖ್ಯ ಎಂದು ಪದ್ಮಶ್ರೀ ಪುರಸ್ಕೃತ ಹಿಂದುಸ್ತಾನಿ ಶಾಸ್ತ್ರೀಯ ಗಾಯಕ ಪಂಡಿತ್ ವೆಂಕಟೇಶ್ ಕುಮಾರ್ ಅಭಿಪ್ರಾಯಪಟ್ಟರು.

ಅಂಚೆ ಇಲಾಖೆ ವತಿಯಿಂದ ನಗರದ ಅಂಚೆ ತರಬೇತಿ ಕೇಂದ್ರದಲ್ಲಿ ಏರ್ಪಡಿಸಲಾಗಿದ್ದ 38ನೇ ಅಖಿಲ ಭಾರತ ಸಾಂಸ್ಕೃತಿಕ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು. ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಂಡಿರುವುದು ತುಂಬಾ ಅರ್ಥಗರ್ಭಿತ ಎಂದು ಹೇಳಿದ ಅವರು ಅಂಚೆ ಇಲಾಖೆ ಪ್ರಾಮಾಣಿಕತೆಗೆ ಹೆಸರಾದ ಇಲಾಖೆಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದ ಕರ್ನಾಟಕ ಅಂಚೆ ವೃತ್ತದ ಪೋಸ್ಟ್ ಮಾಸ್ಟರ್ ಜನರಲ್ ಕೆ.ಪ್ರಕಾಶ್ ಡಿಜಿಟಲಿಕರಣದ ಇಂದಿನ ಯುಗದಲ್ಲಿ ಒತ್ತಡಕೊಳ್ಳಗಾದಾಗ ಸಂಗೀತ ನೆಮ್ಮದಿಯನ್ನು ತರುತ್ತದೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಅಂಚೆ ವೃತ್ತದ ಸ್ಥಾನಿಕ ನಿರ್ದೇಶಕ ಸಂದೇಶ್ ಮಹದೇವಪ್ಪ, ಬೆಂಗಳೂರು ಕೇಂದ್ರ ಅಂಚೆ ವಲಯದ ನಿರ್ದೇಶಕ ವಿ.ತಾರ, ಉತ್ತರ ಕರ್ನಾಟಕ ಅಂಚೆ ವಲಯದ ನಿರ್ದೇಶಕ ಹರ್ಷ ಮತ್ತು ಮೈಸೂರು ಅಂಚೆ ತರಬೇತಿ ಕೇಂದ್ರದ ನಿರ್ದೇಶಕ ಡಾ.ಆಶಿಶ್ ಸಿಂಗ್ ಠಾಕೂರ್ ಹಾಜರಿದ್ದರು.

ವಿಜೇತರಿಗೆ ಬಹುಮಾನ ವಿತರಣೆ: ಫೆ.16ರಿಂದ 20ರವರೆಗೆ ಮೈಸೂರು ನಗರದ ಅಂಚೆ ತರಬೇತಿ ಕೇಂದ್ರ ಹಾಗೂ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಆವರಣದಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಸಾಂಸ್ಕೃತಿಕ ಸಮಾವೇಶದಲ್ಲಿ ದೇಶದಾದ್ಯಂತದ 21 ಅಂಚೆ ವಲಯಗಳ ಪ್ರತಿನಿಧಿಗಳಾಗಿ 293 ಸ್ಪರ್ಧಿಗಳು ಭಾಗವಹಿಸಿದ್ದರು.

ಕೇರಳ ಅಂಚೆ ವಲಯವು 108 ಅಂಕಗಳೊಂದಿಗೆ ಒಟ್ಟು 22 ಬಹುಮಾನಗಳನ್ನು ಗಳಿಸಿ 17ಪ್ರಥಮ, 4 ದ್ವಿತೀಯ ಹಾಗೂ 1 ತೃತೀಯ ಬಹುಮಾನಗಳೊಂದಿಗೆ ಚಾಂಪಿಯನ್ ಶಿಪ್ ಸ್ಥಾನವನ್ನು ಪಡೆಯಿತು. ಕರ್ನಾಟಕ ಅಂಚೆ ವಲಯವು 105 ಅಂಕಗಳೊಂದಿಗೆ ಒಟ್ಟು 34 ಬಹುಮಾನಗಳನ್ನು 16 ಪ್ರಥಮ, 14 ದ್ವಿತೀಯ ಹಾಗೂ 4 ತೃತೀಯ ಬಹುಮಾನಗಳು ಪಡೆದು ರನ್ನರ್ ಅಪ್ ಸ್ಥಾನವನ್ನು ಪಡೆಯಿತು. ಒಡಿಶಾ ಅಂಚೆ ವಲಯವು 38 ಅಂಕಗಳೊಂದಿಗೆ ಒಟ್ಟು 11 ಬಹುಮಾನಗಳನ್ನು ಗೆದ್ದು ತೃತೀಯ ಸ್ಥಾನವನ್ನು ಪಡೆದಿತು. ಎಸ್.ಚಾರ್ಮಿ, ಅಭಿಮನ್ಯು, ಕೆ.ಆರ್.ಪ್ರಥಮ್, ಡಿ.ಎಂ.ಪುಣ್ಯಶ್ರೀ, ಶಂಭವಿ ದೇಗಾವಿಮಠ, ಜಿ.ಎಸ್.ಸೃಷ್ಟಿ, ಎಸ್.ದುರ್ಗಾ ರಾಮ್, ವಿ.ಆರ್.ಶ್ರೀಹರಿ, ತೀರ್ಥ ಪ್ರಕಾಶ್ ಪ್ರಶಸ್ತಿ ಪಡೆದುಕೊಂಡರು.

# ಸಣ್ಣ – ಮಧ್ಯಮ ಪತ್ರಿಕೆಗಳ ಏಳ್ಗೆ ಬಯಸಿದ್ದ ಪಿ ರಾಮಯ್ಯ: ಪಿಜೆಸಿ

**ಮಂಡ್ಯ:** ರಾಜ್ಯದ ಸಣ್ಣ ಮತ್ತು ಮಧ್ಯಮ ಪತ್ರಿಕೆಗಳ ಏಳ್ಗೆ ಸಂಬಂಧ ಸರಕಾರಕ್ಕೆ ವರದಿ ನೀಡಿದ ಪತ್ರಿಕೋದ್ಯಮ ಭೀಷ್ಮ ಪಿ.ರಾಮಯ್ಯ ಮಂಡ್ಯ ಜಿಲ್ಲೆಯವರು ಎಂಬುದು ನಮ್ಮ ಹೆಮ್ಮೆ ಎಂದು ಮಂಡ್ಯ ಕಾರ್ಯನಿರತ ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ಪಿ.ಜೆ.ಚೈತನ್ಯಕುಮಾರ್ ತಿಳಿಸಿದರು.

ಹಿರಿಯ ಪತ್ರಕರ್ತರ ಪಿ.ರಾಮಯ್ಯ (ಹಿಂದು ರಾಮಯ್ಯ) ನಿಧನರಾದ ಹಿನ್ನಲೆ ನಗರದ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಶ್ರದ್ಧಾಂಜಲಿ ಸಭೆಯಲ್ಲಿ ರಾಮಯ್ಯ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಅವರು ಮಾತನಾಡಿದರು.

ರಾಜ್ಯ ಮಟ್ಟದ ಆಂಗ್ಲ ಪತ್ರಿಕೆಯಲ್ಲಿ ಕೆಲಸ ಮಾಡುತ್ತಿದ್ದ ಪಿ.ರಾಮಯ್ಯ ಅವರು ಸಣ್ಣ ಮತ್ತು ಮಧ್ಯಮ ಪತ್ರಿಕೆಗಳ ಅಭಿವೃದ್ಧಿಗೆ ಶ್ರಮಿಸಿದರು. ಇದರ ಸಲುವಾಗಿ ಇದೀ ರಾಜ್ಯಾದ್ಯಂತ ಸಂಚರಿಸಿ ಪತ್ರಿಕೆಗಳು ಎದರಿಸುತ್ತಿರುವ ಸಮಸ್ಯೆಗಳನ್ನು ಅವಲೋಕಿಸಿ ಸರಕ್ಕಾರ ವರದಿ ಸಲ್ಲಿಸಿದ ಫಲವಾಗಿ ಇಂದು ಈ ಪತ್ರಿಕೆಗಳ ಸಂಪಾದಕರು ಇನ್ನೂ ಪತ್ರಿಕೆಗಳನ್ನು ನಡೆಸುವಂತಾಗಿದೆ ಎಂದು ಸ್ಮರಿಸಿದರು.

ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಮತ್ತೀಕೆರೆ ಜಯರಾಂ ಮಾತನಾಡಿ, ಪಿ.ರಾಮಯ್ಯ ಅವರು ಪತ್ರಿಕೋದ್ಯಮದಲ್ಲಿ ಮಂಡ್ಯ ಜಿಲ್ಲೆಯ ಹೆಸರನ್ನು ಅತಿ ಎತ್ತರಕ್ಕೆ ಕೊಂಡೊಯ್ದವರು. ರಾಜ್ಯಾದ್ಯಂತ ಸಂಚರಿಸಿ ಸಣ್ಣ, ಮಧ್ಯಮ ಪತ್ರಿಕೆಗಳ ಹಿತ ಕಾಯುವ ಸಲುವಾಗಿ ಅವುಗಳ ಅಭ್ಯುದಯಕ್ಕೆ ಶ್ರಮಿಸಿ ಸಾಕಷ್ಟು ಸವಲತ್ತುಗಳನ್ನು ಒದಗಿಸಿದರು. ಪತ್ರಕರ್ತರಾಗಿ ವಿಧಾನ ಪರಿಷತ್ತಿಗೆ ಆಯ್ಕೆಯಾದ ಮೊದಲಿಗರು. ಅವರ ನಂತರ ಈಗ ಶಿವಕುಮಾರ್ ಅವರು ವಿಧಾನಪರಿಷತ್ತಿಗೆ ಆಯ್ಕೆಯಾಗಿ ಅವರ ಹಾದಿಯಲ್ಲಿ ಸಾಗಿದ್ದಾರೆ ಎಂದು ಹೇಳಿದರು.



ರಾಜ್ಯ ಕಾರ್ಯದರ್ಶಿ ಸೋಮಶೇಖರ್ ಕೆರಗೋಡು ಮಾತನಾಡಿ, ಪತ್ರಿಕೆಗಳ ಉಳಿವಿಗೆ ಅವರು ನೀಡಿದ ವರದಿಯನ್ನು ಸರಕಾರಗಳು ಇನ್ನೂ ಜಾರಿ ಮಾಡಿಲ್ಲ. ಆದರೆ ಅದರ ಆಧಾರದ ಮೇಲೆ 2013ರಲ್ಲಿ ಜಾಹೀರಾತು ನೀತಿ ಹೊರಡಿಸಿದೆ. ಸರಕಾರಗಳು ಜಾಹೀರಾತು ಮೂಲಕ ಪತ್ರಿಕೆಗಳಿಗೆ ಉತ್ತೇಜನ ನೀಡುವಂತೆ ಮಾಡಲು ಅವರ ವರದಿಗಳು ಕಾರಣ. ಸರಕಾರ ಅವರ ಹೆಸರಿನಲ್ಲಿ ನಿಧಿ ಸ್ಥಾಪಿಸಬೇಕು. ಈ ಮೂಲಕ ಪ್ರತಿ ವರ್ಷ ಅವರ ಹೆಸರಿನಲ್ಲಿ ಪತ್ರಕರ್ತರಿಗೆ ಪ್ರಶಸ್ತಿ ನೀಡುವಂತಾಗಬೇಕೆಂದು ಒತ್ತಾಯಿಸಿದರು.

ಹಿರಿಯ ಪತ್ರಕರ್ತರ ಎ.ಎಲ್.ಬಸವೇಗೌಡ ಮಾತನಾಡಿ, ಪತ್ರಿಕೋದ್ಯಮದ ಭೀಷ್ಮ ಪಿ.ರಾಮಯ್ಯ ಅವರು ಸಣ್ಣ, ಮಧ್ಯಮ ಪತ್ರಿಕೆಗಳನ್ನು ಮೇಲಕ್ಕೆತ್ತುವ ಹೆಗ್ಗಳಿಕೆ ಉಳ್ಳವರು, ಇಂಗ್ಲೀಷ್ ಪತ್ರಿಕೆಯಲ್ಲಿ ವೃತ್ತಿ ಮಾಡುತ್ತಿದ್ದರೂ ಸಣ್ಣ, ಮಧ್ಯಮ ಪತ್ರಿಕೆಗಳ ಪರವಾಗಿ ಮಾನವೀಯ ಮೌಲ್ಯಗಳನ್ನು ಉಳ್ಳವರಾಗಿದ್ದರು ಎಂದು ಶ್ಲಾಘಿಸಿದರು.

ಜಿಲ್ಲಾ ಉಪಾಧ್ಯಕ್ಷ ಕೆ.ಸಿ.ಮಂಜುನಾಥ್ ಮಾತನಾಡಿ, ಪತ್ರಿಕೋದ್ಯಮದ ಮೂಲಕ 8–10 ಮಂದಿ ರಾಜಕೀಯ ಪ್ರವೇಶ ಮಾಡಿದವರಿದ್ದಾರೆ. ಆದರೆ ಖಾದ್ರಿ ಶಾಮಣ್ಣ, ಹಾಗೂ ಪಿ.ರಾಮಯ್ಯ ಅವರು ಮಂಡ್ಯದವರು ಎಂದು ಹೇಳಲು ಹೆಮ್ಮೆಯಾಗುತ್ತದೆ. ಪಿ.ರಾಮಯ್ಯ ಅವರ ಸಣ್ಣ, ಮಧ್ಯಮ ಪತ್ರಿಕೆಗಳ ಬಗೆಗಿನ ಕಾಳಜಿ ಮಹತ್ತರವಾದದರು ಎಂದು ಸ್ಮರಿಸಿದರು.

ಜಿಲ್ಲಾಧ್ಯಕ್ಷ ಕೆ.ಎನ್.ರಾಘವೇಂದ್ರ ಮಾತನಾಡಿ, ಸಣ್ಣ, ಮಧ್ಯಮ ಪತ್ರಿಕೆಗಳನ್ನು ಉನ್ನತೀಕರಿಸಿದ ಹೆಗ್ಗಳಿಕೆ ಪತ್ರಿಕೋದ್ಯಮ ಭೀಷ್ಮ ಪಿ.ರಾಮಯ್ಯ ಅವರಿಗೆ ಸಲ್ಲುತ್ತದೆ. ರಾಜಕಾರಣಿಗಳು ಅವರಿಂದ ಮಾರ್ಗದರ್ಶನ ಪಡೆಯುತ್ತಿದ್ದರು ಎಂದರೆ ಅವರ ಕಾರ್ಯ ಪ್ರವೃತ್ತಿ ಎಂತದ್ದು ಎಂದು ಊಹಿಸಲು ಸಾಧ್ಯವಿಲ್ಲ. ಇವರ ಮಾರ್ಗದರ್ಶನದಲ್ಲಿ ನಡೆಯಲು ಸಾಧ್ಯವಾಗಿಲ್ಲ. ಆದರೆ ಅವರ ಅಗಲಿಕೆ ಪತ್ರಿಕೋದ್ಯಮಕ್ಕೆ ತುಂಬಲಾಗದ ನಷ್ಟ ಎಂದು ಹೇಳಿದರು.

ರಾಷ್ಟ್ರೀಯ ಸಮಿತಿ ಸದಸ್ಯ ಎಂ.ಎಸ್.ಶಿವಪ್ರಕಾಶ್ ಮಾತನಾಡಿ, ಪಿ.ರಾಮಯ್ಯ ಅವರ ಹೆಸರಿನಲ್ಲಿ ಮಂಡ್ಯ ಜಿಲ್ಲೆಯಲ್ಲಿಯೇ ಪ್ರಶಸ್ತಿ ನೀಡಲು ಆಡಳಿತ ಮಂಡಳಿ ಮುಂದಾಗುವಂತೆ ಸಲಹೆ ನೀಡಿದರು.

# ಸಮ ಸಮಾಜದ ಕನಸು ಬಿತ್ತಿದ ಕವಿ ಸರ್ವಜ್ಞ: ಬಿ.ಪಿ ಪ್ರಕಾಶ್

**ಮಂಡ್ಯ:** ಸಮ ಸಮಾಜದ ಕನಸು ಬಿತ್ತಿದರು ಸಂತ ಕವಿ ಸರ್ವಜ್ಞ ಅವರು. ಅವರ ಆದರ್ಶಗಳು ಮೌಲ್ಯಗಳನ್ನು ಯುವ ಜನತೆ ಅನುಸರಿಸಬೇಕು. ಸಮಾಜದಲ್ಲಿ ಸಮಾನ ಮನಸ್ಕರು ಹೆಚ್ಚಬೇಕು ಎಂದು ಜಿಲ್ಲಾ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್ ಶುಕ್ರವಾರ ಹೇಳಿದರು.

ನಗರದ ಗಾಂಧಿ ಭವನದಲ್ಲಿ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ನಡೆದ ಸಂತ ಕವಿ ಸರ್ವಜ್ಞ ಜಯಂತಿ ಕಾರ್ಯಕ್ರಮವನ್ನು ದೀಪ ಬೆಳಗಿಸುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾ ಹಿಂದುಳಿದ ವರ್ಗಗಳ ವೇದಿಕೆಯ ಅಧ್ಯಕ್ಷರಾದ ಎಲ್ ಸಂದೇಶ್ ಅವರು ಮಾತನಾಡಿ ಸಂತ ಕವಿ ಕೇವಲ ಒಂದು ಸಮುದಾಯದ ಅಸ್ಥಿಯಲ್ಲ ಕನ್ನಡದ ಆಸ್ತಿ. ಸರ್ವಜ್ಞ ವಚನಗಳು ಸಮಾಜವನ್ನು ಮಾಡಿತ್ತಿದೆ ಯುವ ಪೀಳಿಗೆ ಸರ್ವಜ್ಞರ ವಚನಗಳನ್ನು ಯುವ ಜನತೆಗೆ ತಲುಪಿಸುವ ಕೆಲಸವಾಗಬೇಕಿದೆ ಎಂದು ಹೇಳಿದರು.

ವಿಶೇಷ ಉಪನ್ಯಾಸ ನೀಡಿ ಮಾತನಾಡಿದ ಮೈಸೂರು ಕ್ರೇಡಿಟ್ ಐ ಸಂಸ್ಥೆ ಮ್ಯಾನೇಜಿಂಗ್ ಡೈರೆಕ್ಟರ್ ಎಂ .ಪಿ ವರ್ಷ ಅವರು ಸರ್ವಜ್ಞ ಎಂದರೆ ಸರ್ವವನ್ನೂ ತಿಳಿದವನು ಎಂದರ್ಥ ಅವರು ಹುಟ್ಟುತ್ತಲೇ ಎಲ್ಲವನ್ನೂ ತಿಳಿದವರಲ್ಲ. ಪ್ರತಿಯೊಬ್ಬರಿಂದ ಒಂದೊಂದು ಕಲಿತು ಸರ್ವಜ್ಞರಾದವರು. ಕಲಿಕೆಗೆ ಮಿತಿ ಇಲ್ಲ ಕಲಿಕೆ ನಿರಂತರ ಪ್ರಕ್ರಿಯೆ ಎಂದು ಸರ್ವಜ್ಞ ಸಾರಿದವರು ಎಂದು ಹೇಳಿದರು.

ನಿಜವಾದ ಮಣ್ಣಿನ ಮಗ ಸರ್ವಜ್ಞ ತಮ್ಮ ತತ್ವ ಆದರ್ಶ ಸಿದ್ಧಾಂತಿಗಳ ಮೂಲಕ ಸಮಾಜವನ್ನು ತಿದ್ದಿದ್ದವರು.



ತಮಿಳರು ತಿರುವಳ್ಳುವರ್ ಹಾಗೂ ತೆಲುಗಿನವರು ವೇಮನ ಅವರಿಗೆ ದೇವರ ಸ್ಥಾನ ನೀಡಿದ್ದಾರೆ. 500 ವರ್ಷಗಳ ಹಿಂದೆಯೇ ತಮ್ಮ ವಚನಗಳ ಮೂಲಕ ಇವತ್ತಿನ ಸಮಾಜದ ಕುರಿತು ಬರೆದಿದ್ದಾರೆ. ಅವರು ನಮ್ಮ ಕನ್ನಡಿಗರು ಎಂಬುದು ನಮ್ಮ ಹೆಮ್ಮೆ ಎಂದು ತಿಳಿಸಿದರು.

ಸರ್ವಜ್ಞ ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗಿಲ್ಲ ಅವರು ಆದರ್ಶ ವಚನಗಳು ಎಲ್ಲರಿಗೂ ಸ್ವಂತ. ಸರ್ವಜ್ಞ ಸಮಾಜ ಪ್ರತಿ ಒಬ್ಬ ವ್ಯಕ್ತಿಗೂ ಆದರ್ಶ, 1520 ರಲ್ಲಿ ಹಾವೇರಿ ಜಿಲ್ಲೆಯ ಅಂಬಲುರು ಮಾಸುರಿನಲ್ಲಿ ಸಂತ ಕವಿ ಸರ್ವಜ್ಞ ಜನಿಸಿದರು. 2009 ರಲ್ಲಿ ತಮಿಳುನಾಡಿನಲ್ಲಿ ಸಂತ ಸರ್ವಜ್ಞರ ಪ್ರತಿಮೆಯನ್ನು ಅಧಿನ ಮುಖ್ಯಮಂತ್ರಿಗಳಾದ ಕರುಣಾನಿಧಿ ಹಾಗೂ ಯಡಿಯೂರಪ್ಪ ಅವರು ಸ್ಥಾಪಿಸಿದರು ಎಂದು ತಿಳಿಸಿದರು.

ಸರ್ವಜ್ಞ ಬದುಕಿದ್ದು ಅಲ್ಪ ಕಾಲ ಆದರೂ ಸುಮಾರು 7 ಸಾವಿರಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಸರ್ವಜ್ಞ ಎಲ್ಲರನ್ನೂ ಸ್ನೇಹ ಪೂರ್ವಕವಾಗಿ ಕಾಣಬೇಕು ಪರಸ್ಪರ ಗೌರವದಿಂದ ಕಾಣಬೇಕು ಎಂಬ ಸಂದೇಶವನ್ನು ತಮ್ಮ ವಚನಗಳ ಮೂಲಕ ನೀಡಿದ್ದಾರೆ ಎಂದು ಹೇಳಿದರು.

ಜಿಲ್ಲಾ ಕುಂಬಾರರ ಜಾಗೃತಿ ಸಂಘದ ಅಧ್ಯಕ್ಷರಾದ ಕೃಷ್ಣ ಅವರು ಮಾತನಾಡಿ ಜಯಂತಿಗಳಲ್ಲಿ ಜನರ ಆಸಕ್ತಿ ಕಡಿಮೆಯಾಗಿದೆ. ಎಲ್ಲಾ ಸಂಘ ಸಂಸ್ಥೆಗಳ ಮುಖಂಡರುಗಳು ಒಗ್ಗೂಡಿ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕು. ಸರ್ವಜ್ಞ ಅವರ ತತ್ವ ಆದರ್ಶಗಳನ್ನು ನಾವೆಲ್ಲರೂ ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು

ಸಮುದಾಯದ ಕುಂದು ಕೊರತೆಗಳನ್ನು ಸರ್ಕಾರಕ್ಕೆ ತಿಳಿಸುವ ಕೆಲಸವಾಗಬೇಕು. ಸರ್ವಜ್ಞ ಅವರು ಕೇವಲ ಒಂದು ಸಮುದಾಯಕ್ಕೆ ಆದರ್ಶ ನೀಡಿಲ್ಲ ಜಗತ್ತಿನ ಜೀವ ಸಂಕುಲಕ್ಕೆ ವಚನಗಳ ಮೂಲಕ ಮೌಲ್ಯ ಆದರ್ಶಗಳನ್ನು ನೀಡಿದ್ದಾರೆ. ಅವರ ಕುರಿತಾಗಿ ನಾವು ತಿಳಿದುಕೊಂಡು ಮುಂದಿನ ಪೀಳಿಗೆಗೂ ತಲುಪಿಸಬೇಕು ಎಂದು ಹೇಳಿದರು.

ನಂತರ ವಿವಿಧ ಸಮುದಾಯಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಗೌರವಿಸಿ ಸನ್ಮಾನಿಸಿ, ಪೌರಕಾರ್ಮಿಕರಿಗೆ ಸಮವಸ್ತ್ರವನ್ನು ವಿತರಿಸಿದರು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಬಿ. ಎಂ ನಂದೀಶ್, ಜಿಲ್ಲಾ ಕುಂಬಾರರ ಜಾಗೃತಿ ಸಂಘದ ಅಧ್ಯಕ್ಷರು ಕೃಷ್ಣ ಎಂ, ಸಮುದಾಯದ ಪದಾಧಿಕಾರಿಗಳು, ಜೈ ಕರ್ನಾಟಕ ಪರಿಷತಿನ ಅಧ್ಯಕ್ಷ ನಾರಾಯಣ, ಮಂಡ್ಯ ಪಶ್ಚಿಮ ವಲಯದ ಆರಕ್ಷಕ ಉಪನಿರೀಕ್ಷಕ ರಂಗಪ್ಪ ಸಾಲಪೂರ, ಕಿತ್ತೂರು ರಾಣಿ ಚೆನ್ನಮ್ಮ ಪ್ರಶಸ್ತಿ ಪುರಸ್ಕೃತೆ ಅನುಪಮಾ ಸೇರಿದಂತೆ ಇನ್ನಿತರ ಮುಖಂಡರು ಉಪಸ್ಥಿತರಿದ್ದರು.

# ಸರ್ವರೋಗ ನಿವಾರಿಣಿ www



ಸೌಮ್ಯಸನತ್

ಬಿಲ್ವಪತ್ರೆ... ಇದು ಮಹಾಶಿವನಿಗೆ ಅತ್ಯಂತ ಪ್ರಿಯವಾದ ಎಲೆ. ಶಿವನನ್ನು ಮೆಚ್ಚಿಸಲು ಭಕ್ತರು ಅರ್ಪಿಸುವ ಅತಿ ಪವಿತ್ರವಾದ ಎಲೆ. ಯಾವ ಪೂಜೆ ಪುನಸ್ಕಾರ ಇಲ್ಲದಿದ್ದರೂ ಸರಿ ಬಿಲ್ವಪತ್ರೆ ಎಲೆವನ್ನು ಅರ್ಪಿಸಿದರೆ ಪರಮಾತ್ಮನು ಪ್ರಸನ್ನನಾಗುತ್ತಾನೆ ಎಂದು ಹೇಳಲಾಗುತ್ತದೆ. ಆದರೆ ಈ ಎಲೆ ಕೇವಲ ಪೂಜೆಗೆ ಮಾತ್ರವಲ್ಲ ಆರೋಗ್ಯಕ್ಕೂ ಒಳ್ಳೆಯದು ಎನ್ನುತ್ತಾರೆ ಆಯುರ್ವೇದ ತಜ್ಞರು.

ಬಿಲ್ವಪತ್ರೆ ವಿಟಮಿನ್ ಎ, ಬಿ1, ಬಿ2, ಸಿ, ಖನಿಜಗಳು, ಕ್ಯಾಲ್ಸಿಯಂ, ಪೊಟ್ಯಾಸಿಯಮ್ ಮತ್ತು ಕಬ್ಬಿಣ ಸೇರಿದಂತೆ ಹಲವು ಪೋಷಕಾಂಶಗಳನ್ನು ಒಳಗೊಂಡಿದೆ. ಅದರಲ್ಲೂ ಬೇಸಿಗೆಯಲ್ಲಿ ಪ್ರತಿದಿನ ಬೆಳಗ್ಗೆ ಖಾಲಿ ಹೊಟ್ಟೆಯಲ್ಲಿ ಈ ಎಲೆಯ ರಸವನ್ನು ಕುಡಿಯುವುದರಿಂದ ಹಲವಾರು ಆರೋಗ್ಯ ಲಾಭಗಳನ್ನು ಪಡೆಯಬಹುದು ಎನ್ನುತ್ತಾರೆ ಆರೋಗ್ಯ ತಜ್ಞರು.

1. ಎಲೆಗಳು ಶಿವಪೂಜೆಯಲ್ಲಿ ಶ್ರೇಷ್ಟವೆಂದು ಪರಿಗಣಿತವಾಗಿದೆ. ಇದರ ಬೇರು, ಎಲೆಗಳು, ತೊಗಟೆ, ಹಣ್ಣಿನ ತಿರುಳು ಆಯುರ್ವೇದದಲ್ಲಿ ಔಷಧವಾಗಿ ಉಪಯೋಗಿಸಲ್ಪಡುತ್ತದೆ.
2. ವಾತದ ದೋಷಗಳನ್ನು ನಿವಾರಿಸುವ ಗುಣ ಬೇರಿನಲ್ಲಿದೆ. ಬಿಲ್ವದ ಹಸಿಕಾಯಿ ಕಫ ಮತ್ತು ವಾತನಿವಾರಕವಾಗಿದೆ ಹಾಗೂ ಹೃದಯಕ್ಕೆ ಒಳ್ಳೆಯದು. ಇದು ಹಸಿವು ಮತ್ತು ಜೀರ್ಣಶಕ್ತಿಯನ್ನು ಹೆಚ್ಚಿಸುತ್ತದೆ, ಹೊಟ್ಟೆ ನೋವು ಮತ್ತು ಭೇದಿಗೆ ಚಿಕಿತ್ಸೆ ಮಾಡಲು ನೆರವಾಗುತ್ತದೆ. ಪಕ್ವವಾದ ಬಿಲ್ವದ ಹಣ್ಣು ವಾತಪಿತ್ತವನ್ನು ಹೆಚ್ಚಿಸುತ್ತದೆ. ಕಫವನ್ನು ಕಡಿಮೆ ಮಾಡುತ್ತದೆ. ಅಜೀರ್ಣ ಮತ್ತು ಹೊಟ್ಟೆನೋವಿಗೆ ಮದ್ದಾಗಿ ಬಳಕೆಯಾಗುತ್ತಿದೆ. ತಿರುಳಿನಿಂದ ತೆಗೆದ ತೈಲವು ವಾತನಿವಾರಕವಾಗಿದೆ.
3. ಬಾಯಿಯಲ್ಲಿ ಹುಣ್ಣಾಗಿದ್ದಾಗ ಬಿಲ್ವಪತ್ರೆ ಹಣ್ಣಿನ ತಿರುಳಿಗೆ ಸ್ವಲ್ಪ ಬೆಲ್ಲ ಸೇರಿಸಿ ದಿನದಲ್ಲಿ ಒಂದು ಬಾರಿ ಸೇವಿಸಬೇಕು. ಅಜೀರ್ಣ ಸಮಸ್ಯೆಯಿಂದ ಅಥವಾ ಹೊಟ್ಟೆ ಹುಣ್ಣಿನ ಸಮಸ್ಯೆಯಿಂದ ವಾಂತಿ ಆಗುತ್ತಿದ್ದರೆ ಎರಡು ಚಮಚೆ ಬಿಲ್ವಪತ್ರೆ ರಸಕ್ಕೆ ಒಂದು ಚಮಚ ಜೇನುತುಪ್ಪ ಸೇರಿಸಿ ದಿನದಲ್ಲಿ 2–3 ಬಾರಿ ನೆಕ್ಕಬೇಕು. ಬಿಲ್ವ ಫಲದ ಸಿಪ್ಪೆಯನ್ನು ಅರೆದು ಜೇನುತುಪ್ಪದಲ್ಲಿ ಸೇರಿಸಿ ಸೇವಿಸುತ್ತಿದ್ದರೆ ವಾಕರಿಕೆ ನಿಲ್ಲುತ್ತದೆ.
4. ದೇಹದ ಮೇಲೆ ಗಾಯವಾಗಿ ಅದು ಕೊಳೆಯುವ ಸ್ಥಿತಿ ತಲಪಿದಾಗ (ಗ್ಯಾಂಗ್ರೀನ್ ) ಆ ಜಾಗದಲ್ಲಿ ಬಿಲ್ವಪತ್ರೆಯನ್ನು ಅರೆದು ಲೇಪ ಹಚ್ಚಿದರೆ ಬೇಗ ಗುಣವಾಗುತ್ತದೆ. ಸುಟ್ಟ ಗಾಯದ ಮೇಲೆ ಬಿಲ್ವಪತ್ರೆ ರಸವನ್ನು ಲೇಪಿಸುತ್ತಿದ್ದರೆ ಬೇಗ ಮಾಯುತ್ತದೆ.
5. ಗಾಯ,ಹುಣ್ಣು : ದೇಹದ ಮೇಲೆ ಗಾಯವಾಗಿ ಅದು ಕೊಳೆಯುವ ಸ್ಥಿತಿ ತಲಪಿದಾಗ (ಗ್ಯಾಂಗ್ರೀನ್ ) ಆ ಜಾಗದಲ್ಲಿ ಬಿಲ್ವಪತ್ರೆಯನ್ನು ಅರೆದು ಲೇಪ ಹಚ್ಚಿದರೆ ಬೇಗ ಗುಣವಾಗುತ್ತದೆ. ಸುಟ್ಟ ಗಾಯದ ಮೇಲೆ ಬಿಲ್ವಪತ್ರೆ ರಸವನ್ನು ಲೇಪಿಸುತ್ತಿದ್ದರೆ ಬೇಗ ಮಾಯುತ್ತದೆ.






6. ನೋವು, ಬಾವು, ಊತ : ಕಾಲು ಅಥವಾ ದೇಹದ ಬೇರಾವುದೇ ಭಾಗದಲ್ಲಿ ಊತ ಇದ್ದಾಗ ಬಿಲ್ವಪತ್ರೆ ರಸಕ್ಕೆ ಕಾಳುಮೆಣಸು ಪುಡಿ ಸೇರಿಸಿ ಕುಡಿಯುತ್ತಿದ್ದರೆ ಪ್ರಯೋಜನವಾಗುತ್ತದೆ. ಮೈಕೈ ನೋವು ಸಮಸ್ಯೆಯಿಂದ ಬಳಲುತ್ತಿರುವವರು ಬಿಲ್ವಪತ್ರೆ ಎಲೆ, ಬೇವಿನ ಎಲೆ ಮತ್ತು ಹರಳು ಗಿಡದ ಎಲೆಗಳನ್ನು ನೀರಿಗೆ ಸೇರಿಸಿ ಕುದಿಸಿ ಆ ನೀರನ್ನು ಸ್ನಾನದ ನೀರಿಗೆ ಮಿಶ್ರ ಮಾಡಿ ಪ್ರತಿ ದಿನ ಸ್ನಾನ ಮಾಡಬೇಕು. ಬಿಲ್ವದ ತಿರುಳಿಗೆ ಸಾಸಿವೆ ಎಣ್ಣೆ ಸೇರಿಸಿ ಕಲೆಸಿ ಬಿಸಿ ಮಾಡಿ ಊತ, ಬಾವು ಇರುವಲ್ಲಿ ಇಟ್ಟರೆ ಪ್ರಯೋಜನವಾಗುತ್ತದೆ.
7. ಯಾವುದೇ ಬಗೆಯ ಜ್ವರವಿದ್ದಾಗ ಬಿಲ್ವಪತ್ರೆಯ ರಸವನ್ನು ಸ್ವಲ್ಪ ಸ್ವಲ್ಪ ಕುಡಿಯುತ್ತಿದ್ದರೆ ಪ್ರಯೋಜನವಾಗುತ್ತದೆ. ಆಗಾಗ ಕಾಡುವ ಜ್ವರದಿಂದ ಬಳಲುತ್ತಿರುವವರು ಬಿಲ್ವದ ತೊಗಟೆಯ ಕಷಾಯವನ್ನು ದಿನದಲ್ಲಿ ಮೂರು ಬಾರಿ ನಾಲ್ಕು ಚಮಚೆಯಂತೆ ಒಂದು ವಾರದವರೆಗೆ ಸೇವಿಸಬೇಕು. ಮಲೇರಿಯಾ ಸಮಸ್ಯೆ ಇದ್ದಾಗ ಬಿಲ್ವದ ಬೇರಿನ ತೊಗಟೆಯ ಕಷಾಯವನ್ನು ಮಾಡಿ ಕುಡಿಯುತ್ತಿರಬೇಕು. ಮಧ್ಯಭಾರತದ ಬಸ್ತಾರ್‌ನ ಆದಿವಾಸಿಗಳು ಜ್ವರದ ಸಮಸ್ಯೆ ಇದ್ದಾಗ ಬಿಲ್ವದ ಬೇರಿನ ತೊಗಟೆಯ ಕಷಾಯವನ್ನು ಮದ್ದಾಗಿ ಬಳಸುತ್ತಾರೆ. ಸಾಮಾನ್ಯ ಬಗೆಯ ಜ್ವರಗಳಲ್ಲಿ ಬಿಲ್ವದ ಬೇರಿನ ಕಷಾಯವನ್ನು ಕೊತ್ತಂಬರಿ ಪುಡಿಯೊಡನೆ ಸೇವಿಸುತ್ತಿದ್ದರೆ ಪ್ರಯೋಜನವಾಗುತ್ತದೆ.
8. ಚರ್ಮದ ದುರ್ಗಂಧವನ್ನು ಹೋಗಲಾಡಿಸಲು ಬಿಲ್ವಪತ್ರೆ ಬಳಕೆಯಾಗುತ್ತದೆ. ತಾಜಾ ಬಿಲ್ವಪತ್ರೆಯನ್ನು ತಂದು ಅದರ ರಸವನ್ನು ಮೈಗೆ ಲೇಪಿಸಿಕೊಂಡು ಅರ್ಧ ಗಂಟೆಯ ಬಳಿಕ ಸ್ನಾನ ಮಾಡಿದರೆ ಮೈಯಲ್ಲಿನ ದುರ್ಗಂಧ ಕಡಿಮೆಯಾಗುತ್ತದೆ.
9. ಅದೇ ರೀತಿ ಚರ್ಮದ ಮೇಲೆ ಕುರುಗಳಾಗಿದ್ದರೆ ಬಿಲ್ವಪತ್ರೆ ಬೇರನ್ನು ಲಿಂಬೆರಸದಲ್ಲಿ ತೇಯ್ದು ಲೇಪಿಸಿದರೆ ಒಂದೆರಡು ದಿನಗಳಲ್ಲಿ ಕುರು ಒಣಗುತ್ತದೆ.
10. ಬಿಲ್ವಪತ್ರೆ ಹಣ್ಣಿನ ತಿರುಳಿಗೆ ಸ್ವಲ್ಪ ಬೆಲ್ಲ ಸೇರಿಸಿ ದಿನಕ್ಕೊಮ್ಮೆ ಸೇವಿಸಿದರೆ ಬಾಯಿಯ ಹುಣ್ಣು ಕಡಿಮೆಯಾಗುತ್ತದೆ.
11. ಅಸ್ತಮಾ ಇರುವವರು ಪ್ರತಿದಿನ ಬೆಳಗ್ಗೆ ಎದ್ದ ಕೂಡಲೆ ಬಿಲ್ವಪತ್ರೆ ಎಲೆಯನ್ನು ಒಂದೆರಡು ಕಾಳುಮೆಣಸಿನೊಂದಿಗೆ ಸೇರಿಸಿ ಜಗಿಯಿರಿ. ಇದರಿಂದ ದೇಹ ಬೆಚ್ಚಗಾಗಿ ಶೀತದಿಂದ ಹಿಂಸೆ ಆಗುವುದು ತಪ್ಪುತ್ತದೆ.
12. ಹಸಿವಾಗದೇ ಇರುವ ಸಮಸ್ಯೆಗಳಿದ್ದರೂ ಈ ಬಿಲ್ವಪತ್ರೆ ಸರಿಮಾಡುತ್ತದೆ. ಪ್ರತಿದಿನ ಬೆಳಗ್ಗೆ ಬಿಲ್ವಪತ್ರೆ ಎಲೆಗಳನ್ನು ಜಗಿದರೆ ಹಸಿವೆಯಾಗದ ಸಮಸ್ಯೆಗಳಿದ್ದರೆ ಸರಿಹೋಗುತ್ತದೆ. ಆದ್ದರಿಂದ ಪ್ರತಿದಿನ ಆದಷ್ಟು ಬಿಲ್ವಪತ್ರೆಯ ಬಳಕೆಯಿರಲಿ ಆರೋಗ್ಯಕ್ಕೆ ಒಳ್ಳೆಯದು.
13. ಬಿಲ್ವಪತ್ರೆ ಸೊಪ್ಪನ್ನು ಅರೆದು ತಲೆಗೆ ಲೇಪಿಸಿದರೆ ತಲೆಹೊಟ್ಟೆ ಕಡಿಮೆಯಾಗುತ್ತದೆ. ವಾರಕ್ಕೊಮ್ಮೆ ಇದನ್ನು ಹೇರ್ ಮಾಸ್ಕ್ ರೀತಿಯಲ್ಲಿ ಬಳಸಬಹುದಾಗಿದೆ.
14. ಬಿಲ್ವಪತ್ರೆಯ ಕಾಯಿಯನ್ನು ಬೇಯಿಸಿ ಅದರ ತಿರುಳನ್ನು ತೆಗೆದು ಅದನ್ನು ತಲೆಗೆ ಲೇಪಿಸಿಕೊಂಡು ಅರ್ಧ ಗಂಟೆಯ ನಂತರ ತೊಳೆಯಿರಿ ವಾರಕ್ಕೊಮ್ಮೆ ಅಥವಾ ವಾರದಲ್ಲಿ ಎರಡು ಬಾರಿ ಹೀಗೆ ಮಾಡಿದರೆ ತಲೆ ಹೊಟ್ಟಿನ ಸಮಸ್ಯೆ ನಿವಾರಣೆಯಾಗುತ್ತದೆ.
15. ಬಿಲ್ವಪತ್ರೆ ಎಲೆಗಳನ್ನು ಒಣಗಿಸಿ ಚೂರ್ಣದಂತೆ ಮಾಡಿಕೊಂಡು ನೀರಿಗೆ ಹಾಕಿ ಕುದಿಸಿಕೊಂಡು ಕುಡಿದರೆ ರಕ್ತದೊತ್ತಡ ನಿಯಂತ್ರಣಕ್ಕೆ ಬರುತ್ತದೆ. ದಿನದಲ್ಲಿ 2 ರಿಂದ 3 ಬಾರಿ ಕುಡಿದರೆ ಸಾಕಾಗುತ್ತದೆ.






16. ಬಿಲ್ವ ಪತ್ರೆಯ ರಸವನ್ನು ಪ್ರತಿದಿನ 2–3 ಚಮಚ ಸೇವಿಸುತ್ತಿದ್ದರೆ ನಿಶ್ಯಕ್ತಿ ದೂರವಾಗುತ್ತದೆ. ಅಷ್ಟೇ ಅಲ್ಲದೆ ಅಜೀರ್ಣ, ವಾಂತಿ ಆದಾಗಲೂ ಬಿಲ್ವಪತ್ರೆ ರಸಕ್ಕೆ ಜೇನುತುಪ್ಪ ಸೇರಿಸಿ ಸೇವಿಸಿದರೆ ವಾಂತಿ ನಿಲ್ಲುತ್ತದೆ.
17. ಮಲಸಂಬಂಧಿ ಸಮಸ್ಯೆಗಳಿದ್ದರೆ ಬಿಲ್ವಪತ್ರೆಯ ಹಣ್ಣಿನ ತಿರುಳು, ಎಳ್ಳುನ್ನು ಸಮಪ್ರಮಾಣದಲ್ಲಿ ಮಿಶ್ರಣ ಮಾಡಿ ಬೆಣ್ಣೆ ಅಥವಾ ತುಪ್ಪ ಸೇರಿಸಿ ಸೇವಿಸಿ ಇದರಿಂದ ಮಲಬದ್ಧತೆ ಸಮಸ್ಯೆ ನಿವಾರಣೆಯಾಗುತ್ತದೆ.
18. ನಿದ್ರಾಹೀನತೆಯನ್ನು ಅನುಭವಿಸುತ್ತಿರುವವರು ಬಿಲ್ವಪತ್ರದ ಎಲೆಯನ್ನು ಚೆನ್ನಾಗಿ ಅರೆದು ಹಣೆಗೆ ಹಚ್ಚಿದರೆ ನಿದ್ರಾಹೀನತೆ ಸಮಸ್ಯೆ ದೂರವಾಗುತ್ತದೆ. ಬಿಲ್ವಪತ್ರೆ ದೇಹದ ಉಷ್ಣತೆಯನ್ನೂ ಕೂಡ ಕಡಿಮೆ ಮಾಡಲು ಸಹಾಯ ಮಾಡುತ್ತದೆ.
19. ನಿದ್ರಾಹೀನತೆಯಿಂದ ಬಳಲುತ್ತಿರುವವರು ಬಿಲ್ವದ ಎಲೆಯನ್ನು ನೀರು ಸೇರಿಸದೆ ಅರೆದು ಹಣೆಗೆ ಲೇಪಿಸಿಕೊಳ್ಳಬೇಕು. ಇದರಿಂದ ಒಳ್ಳೆಯ ನಿದ್ದೆ ಬರುತ್ತದೆ.
20. ವೈಜ್ಞಾನಿಕವಾಗಿ ನಡೆಸಿದ ಪ್ರಯೋಗಗಳಿಂದ ಬಿಲ್ವದ ಹಣ್ಣಿನ ತಿರುಳು ನಮ್ಮ ಅನ್ನನಾಳದಲ್ಲಿರುವ ಪರೋಪ ಜೀವಿಗಳನ್ನು ನಾಶಪಡಿಸುವುದು ತಿಳಿದುಬಂದಿದೆ. ಅತಿಸಾರ, ಅನಿಯಮಿತ ಭೇದಿ ಮತ್ತು ಹೊಟ್ಟೆ ನೋವನ್ನು ನಿವಾರಿಸುವುದು ಸಹ ತಿಳಿದುಬಂದಿದೆ.

## ಪದ ಬಂಧ

ಜ್ಯೋತಿ ರಾಜೇಶ್






### ಎಡದಿಂದ ಬಲಕ್ಕೆ....

2. ಶಂಭು ಶಂಕರನ ಪತ್ನಿಯ ಹೆಸರೇ ಇದು.....(3)5. ಸಿರಿದೇವಿಯ ಪತಿಯ ಶುರುವಲ್ಲಿ ಮನ್ಮಥನೇಕೆ ತಿರುಗಿದ್ದಾನೆ. ....?(4)
7. ಈ ಅಮೃತದಂಥ ಹೆಸರಲ್ಲಿ ವಾರಪತ್ರಿಕೆಯೂ ಇದೆ....(2)
8. ಗೆಲುವು ಪಡೆದ ದಾಶರಥಿಯನ್ನು ಹೀಗೆ ಕರೆಯಿರಿ.(4)
9. ಮನದ 'ಬಯಕೆ'ಯೇ ಹೆಸರಿನ ರೂಪ ಪಡೆದದ್ದಿದು....(2)
11. ಉಮೆಯ ಒಡೆಯನಿಗಿರುವ ಹೆಸರು.....(3)
12. ಆಗಸದಲ್ಲಿರುವ ನಕ್ಷತ್ರವೇ ಇವಳು....?(2)
14. ಧನುರ್ಧಾರಿಯಾಗಿ ಗೆಲುವನ್ನು ಸಾಧಿಸಿದ ಮಧ್ಯಮ ಪಾಂಡವ......(4)
17. ಸಮೀರನಲ್ಲಿರುವ, ಗಿರಿಧರನ ಭಕ್ತೆ......(2)
18. ಸತಿಯ ಜೊತೆಗೇ ಬಂದ ಜನಕನ ಅಳಿಯ....(4)
19. ವಿನಯ, ವಿಧೇಯತೆಯಿಂದ ಕೂಡಿದವರಿಗಿಡಬಹುದಾದ ಹೆಸರು......(3)

### ಮೇಲಿನಿಂದ ಕೆಳಕ್ಕೆ.....

1. ಪರಿಮಳವ ಸೂಸುತ್ತ ಭರಭರನೇ ಬಂದವಳು...(3)
2. ಬುದ್ಧನ ಮುಖಭಾವದ ಹೆಸರನ್ನು ಹೊಂದಿದವಳು....(2)
3. ಮೂರಕ್ಷರದ ಗೆಲುವನ್ನು ಪಡೆದವನು/ಳು.....(3)
4. ಪತ್ನಿಯಲ್ಲದಿದ್ದರೂ ಸದಾ ಮಾಧವನ ಜೊತೆಗೇ ಇರುವವಳು.....(2)
6. ಇವಳು ಬಂಗಾರದಂಥ ಹುಡುಗಿ ....(3)
7. ಹೂ. ಬಳ್ಳಿ ಎರಡೂ ಸೇರಿ ಆದ ಹುಡುಗಿ ಇವಳು...(4)
8. ......ಇದು ನಿಮಗಾಗಿ ಕಾದಿರಿಸಲಾದ ಹೆಸರು....(5)
10. ಶಶಾಂಕನನ್ನು ಶಿರದಲ್ಲಿ ಧರಿಸಿದ ಶಂಕರ.....(4)
13. ಗಾಯನಕಲೆ ಬಲ್ಲವಳಿಗೆ ಇಡಬಹುದಾದ ಹೆಸರಲ್ಲಿ ಸಂತನಿದ್ದಾನೆ(3)
15. ಜಾಮೂನಿನಷ್ಟೇ ಸವಿಯಾದ ಹೆಸರಿನವಳು.....(3)
16. ಒಳ್ಳೆಯ ಬುದ್ಧಿ ಇರುವವಳಿಗೆ ಅನ್ವರ್ಥವಾದ ಹೆಸರಿದು.....(3)
17. ಈ ಹೆಸರಿದ್ದ ಮಾತ್ರಕ್ಕೆ ಇವಳು ಕರಾವಳಿಯವಳೇ ಅನ್ನಬೇಡಿ.....(2)
18. ಹರನ, ಹಾರನ, ಆಹಾರನ, ಸುತನ, ಆರಾಧ್ಯನ, ಪತ್ನಿ ಇವಳು..(2)

# ಇಮ್ರಾನ್ ಸ್ಥಿತಿಗೆ ಮಿಡಿದ ಮಾಜಿ ನಾಯಕರ ಹೃದಯಗಳು..!




ಹಿರಿಯೂರು ಪ್ರಕಾಶ್


ಕಳೆದ ಎರಡೂವರೆ ವರ್ಷಗಳಿಂದ ಪಾಕಿಸ್ತಾನದ ರಾವಲ್ಪಿಂಡಿಯ ಜೈಲಿನಲ್ಲಿ ಖೈದಿಯಾಗಿ ಕೊಳೆಯುತ್ತಿರುವ ವಿಶ್ವವಿಖ್ಯಾತ ಕ್ರಿಕೆಟರ್, ಪಾಕ್ ನ ಮಾಜಿ ಪ್ರಧಾನಿ ಹಾಗೂ ತೆಹ್ರಿಕ್– ಎ –ಇನ್ಸಾನ್ ಪಕ್ಷದ ಪರಮೋಚ್ಛ ನಾಯಕ 73 ವರ್ಷ ವಯಸ್ಸಿನ ಇಮ್ರಾನ್‌ಖಾನ್ ರ ಆರೋಗ್ಯ ಜೈಲಿನಲ್ಲಿ ದಿನೇ ದಿನೇ ಹದಗೆಡುತ್ತಿರುವುದರ ಬಗೆಗೆ, ಅವರ ಒಂದು ಕಣ್ಣು ದೃಷ್ಟಿ ಕಳೆದುಕೊಂಡಿರುವುದರ ಬಗ್ಗೆ ಹಾಗೂ ಅವರನ್ನು ಅಲ್ಲಿ ಅಮಾನವೀಯವಾಗಿ ನಡೆಸಿಕೊಳ್ಳುತ್ತಿರುವುದರ ಕುರಿತಂತೆ ತೀವ್ರ ಕಳವಳ ವ್ಯಕ್ತಪಡಿಸಿ ವಿಶ್ವ ಕ್ರಿಕೆಟ್ ನ ಹದಿನಾಲ್ಕು ಮಂದಿ ಲೆಜೆಂಡ್ ಕ್ರಿಕೆಟರ್ ಗಳು ಅದರಲ್ಲೂ ಹದಿಮೂರು ಮಂದಿ ಖ್ಯಾತ ಮಾಜಿ ನಾಯಕರು ಪಾಕಿಸ್ತಾನ ಸರ್ಕಾರಕ್ಕೆ ಒಂದು ಭಾವನಾತ್ಮಕ ಪತ್ರ ಬರೆದು ಇಮ್ರಾನ್ ರ ಆರೋಗ್ಯದ ಬಗ್ಗೆ ಹೆಚ್ಚಿನ ನಿಗಾವಹಿಸಿ ಅವರಿಗೆ ಉತ್ತಮ ಸೌಲಭ್ಯ ದೊರೆಯುವಂತೆ, ಅವರ ಕುಟುಂಬದವರನ್ನು ಭೇಟಿಯಾಗುವಂತೆ ಹಾಗೂ ಕಾನೂನು ಹೋರಾಟಗಳ ಬಗೆಗೆ ಮುಕ್ತವಾಗಿ ತಮ್ಮ ವಕೀಲರೊಡನೆ ಚರ್ಚಿಸಲು ಅನುವಾಗುವಂತೆ....ಇವೇ ಮುಂತಾದ ಸೌಲಭ್ಯಗಳನ್ನು ಅಂತರಾಷ್ಟ್ರೀಯ ಮಾನವ ಹಕ್ಕುಗಳ ವ್ಯಾಪ್ತಿಯಲ್ಲಿ ಹಾಗೂ ಮಾನವೀಯ ನೆಲೆಯಲ್ಲಿ ವ್ಯವಸ್ಥೆ ಕಲ್ಪಿಸಿಕೊಡುವಂತೆ ಆಗ್ರಹಿಸಿರುವುದು ಮನುಷ್ಯಧರ್ಮವೇ ಬೇರೆಲ್ಲಕ್ಕಿಂತ ದೊಡ್ಡದು ಎಂಬ ಮಾತನ್ನು ಪುಷ್ಟೀಕರಿಸಿದೆ.

ಭಾರತೀಯ ಕ್ರಿಕೆಟ್ ತಂಡದ ಮಾಜಿ ನಾಯಕರಾದ ಸುನಿಲ್ ಗಾವಸ್ಕರ್, ಕಪಿಲ್ ದೇವ್ ಸೇರಿದಂತೆ ಕ್ಲೈವ್ ಲಾಯ್ಡ್, ಇಯಾನ್ ಚಾಪೆಲ್, ಗ್ರೆಗ್ ಚಾಪೆಲ್, ಕಿಮ್ ಹ್ಯೂಸ್, ಅಲೆನ್ ಬಾರ್ಡರ್, ಮೈಕ್ ಅರ್ಥರ್ಟನ್, ಡೇವಿಡ್ ಗಾವರ್, ಮೈಕ್ ಬ್ರಿಯರ್ಲೀ, ಸ್ಟೀವ್ ವಾ, ಜಾನ್ ರೈಟ್ ಮುಂತಾದ ವಿಶ್ವವಿಖ್ಯಾತ ನಾಯಕರು ಸೇರಿ ಬರೆದ ಪತ್ರದಲ್ಲಿ ಇಮ್ರಾನ್ ಖಾನ್ ರ ಒಟ್ಟೂ ಸಾಧನೆ, ಕೊಡುಗೆ , ವ್ಯಕ್ತಿತ್ವ ಎಲ್ಲವನ್ನೂ ಸ್ಮರಿಸಿ ಕೊನೇಪಕ್ಷ ಮಾನವೀಯ ನೆಲೆಯಲ್ಲಿ ಅವರಿಗೆ ತಕ್ಷಣವೇ ಉತ್ತಮ ಚಿಕಿತ್ಸೆ ದೊರಕುವಂತೆ ಪಾಕ್ ಸರ್ಕಾರವನ್ನು ಒತ್ತಾಯಿಸಿದ್ದಾರೆ.

ಇಂಡಿಯಾ– ಪಾಕಿಸ್ತಾನ್ ತಂಡಗಳ ನಾಯಕರು ಮತ್ತು ಆಟಗಾರರು ಕಾರಣಗಳು ನೂರೆಂಟಿರಲೀ, ಕ್ರೀಡಾಧರ್ಮವನ್ನೇ ಮರೆತು ಮೈದಾನದಲ್ಲಿ ಪರಸ್ಪರ ಹಾವು– ಮುಂಗುಸಿಗಳಂತೆ ದ್ವೇಷಿಸುತ್ತಿರುವ ಪ್ರಸ್ತುತ ಕಾಲಘಟ್ಟದಲ್ಲಿ ಪಾಕಿಸ್ತಾನದ ಮಾಜಿ ನಾಯಕನಿಗಾಗಿ ಭಾರತೀಯ ದಿಗ್ಗಜ ಕ್ರಿಕೆಟಿಗರು ಮಾನವೀಯ ನೆಲೆಯಲ್ಲಿ, ಸ್ನೇಹದ ಪರಿಧಿಯಲ್ಲಿ ಪ್ರಾಮಾಣಿಕ ದನಿಯೆತ್ತಿರುವುದು ನಿಜಕ್ಕೂ ಸ್ವಾಗತಾರ್ಹ . ಸನ್ನಿ ಹಾಗೂ ಕಪಿಲ್ ರ ಈ ಪ್ರಸ್ತಾವಿತ ನಡೆಗೆ ಸೌರವ್ ಗಂಗೂಲಿ, ಅಜ್ಹರುದ್ದೀನ್ ಸೇರಿದಂತೆ ಇತರೆ ಹಿರಿಯ ಕ್ರಿಕೆಟಿಗರು ಬೆಂಬಲ ಸೂಚಿಸಿರುವುದು ರಾಜಕೀಯ ದ್ವೇಷದಿಂದಾಚೆಗೂ ಮನುಷ್ಯರಲ್ಲಿ ಮನುಷ್ಯತ್ವ ಇನ್ನೂ ಉಳಿದಿದೆ ಎಂಬುದಕ್ಕೆ ಸಾಕ್ಷಿಯಾಗಿ ನಿಂತಿದೆಯಷ್ಟೇ ಅಲ್ಲದೇ ಭಾರತೀಯರ ಮಾನವೀಯ ಮುಖವನ್ನು ಭಾರತದ ಹಿರಿಯ ಕ್ರಿಕೆಟಿಗರ ಮೂಲಕ ಜಗತ್ತಿಗೇ ಅನಾವರಣ ಗೊಳಿಸಿದೆ.

ಎಂಭತ್ತರ ದಶಕದ ಪ್ರಪಂಚದ ಸೂಪರ್ ಸ್ಟಾರ್ ಆಗಿ ಕ್ರಿಕೆಟ್ ಜಗತ್ತಿನಲ್ಲಿ ಮೆರೆದ ಇಮ್ರಾನ್ ಖಾನ್, ಆ ದಿನಗಳಲ್ಲಿ ಜಗತ್ತಿನ ನಾಲ್ವರು ಸರ್ವಶ್ರೇಷ್ಠ ಆಲ್ ರೌಂಡರ್ ಗಳಲ್ಲಿ ಒಬ್ಬರು. ಭಾರತದ ಕಪಿಲ್ ದೇವ್, ನ್ಯೂಜಿಲೆಂಡ್ ನ ರಿಚರ್ಡ್ ಹ್ಯಾಡ್ಲೀ, ಇಂಗ್ಲೆಂಡ್ ನ ಇಯಾನ್ ಬಾಥಂ ಇವರ ಸಮಾನ ಸಮಕಾಲೀನ ಇತರೆ ಮೂವರು ಶ್ರೇಷ್ಠ ಆಲ್ ರೌಂಡರ್ ಗಳು. ಪಾಕಿಸ್ತಾನ ಕ್ರಿಕೆಟ್ ನ ವೈಭವದ ದಿನಗಳನ್ನು ಇಮ್ರಾನ್ ನ ಕೊಡುಗೆಯಿಲ್ಲದೇ ನೆನೆಯಲು ಸಾಧ್ಯವೇ ಇಲ್ಲ. ಇಮ್ರಾನ್ ನಾಯಕತ್ವದಲ್ಲೇ 1992 ರಲ್ಲಿ ಮೊದಲ ಹಾಗೂ ಕೊನೆಯ ಬಾರಿಗೆ ಪಾಕ್ ವಿಶ್ವಕಪ್ ಪ್ರಶಸ್ತಿ ಗೆದ್ದು ಬೀಗಿತ್ತು. ಆನಂತರ ಕ್ರಿಕೆಟ್ ಗೆ ವಿದಾಯ ಹೇಳಿ ರಾಜಕೀಯಕ್ಕೆ ಧುಮುಕಿದ ಇಮ್ರಾನ್ ತನ್ನದೇ ಆದ ತೆಹ್ರಿಕ್– ಎ– ಇನ್ಸಾಫ್ ಪಕ್ಷವನ್ನು ಕಟ್ಟಿ ಅದನ್ನು ಅಧಿಕಾರಕ್ಕೆ ತಂದು 2018 ರಲ್ಲಿ ಪಾಕಿಸ್ತಾನದ ಪ್ರಧಾನಿಯೂ ಆಗಿದ್ದ. ಆದರೆ 2022 ರಲ್ಲಿ ಭ್ರಷ್ಟಾಚಾರದ ಆರೋಪದ ಮೇಲೆ ಅವರನ್ನು ಪದಚ್ಯುತಿ ಗೊಳಿಸಿ ಆಗಸ್ಟ್ 2023 ರಲ್ಲಿ ಜೈಲಿಗಟ್ಟಿದ್ದರು.






ಅಲ್ಲಿಂದ ಇಲ್ಲಿಯವರೆಗೂ ಜೈಲಿನಲ್ಲಿ ಅವರನ್ನು ಅತ್ಯಂತ ಹೀನಾಯವಾಗಿ ನಡೆಸಿಕೊಳ್ಳುತ್ತಿರುವುದಾಗಿ ಆಗಾಗ್ಗೆ ಸುದ್ದಿಯಾಗುತ್ತಲೇ ಇದೆ. ಇಮ್ರಾನ್ ನನ್ನು ನೋಡಲು ಅವರ ಕುಟುಂಬದವರಿಗೆ ಬಂಧುಗಳಿಗೆ ಅವಕಾಶ ಮಾಡಿಕೊಡದೇ, ಅವರಿಗೆ ಜೈಲಿನಲ್ಲಿ ಕನಿಷ್ಠ ಮೂಲಭೂತ ಸೌಲಭ್ಯ ಕೊಡದೇ ಪಾಕ್ ಸರ್ಕಾರ ತನ್ನ ಅಮಾನವೀಯ ಮತ್ತು ರಾಜಕೀಯ ಸೇಡಿನ ವರ್ತನೆಯನ್ನು ತೋರಿದೆ. ಈ ಕಾರಣಕ್ಕಾಗಿಯೇ ಇಮ್ರಾನ್ ತಮ್ಮ ಬಲಗಣ್ಣನ್ನು ಕಳೆದುಕೊಂಡಿದ್ದಾರಂತೆ. ! ದೇಶದ ಒಬ್ಬ ಮಾಜಿ ಪ್ರಧಾನಿಯಂತೆ ನಡೆಸಿಕೊಳ್ಳುವುದು ಬೇಡ, ಕೊನೇಪಕ್ಷ ಸಾಮಾನ್ಯರಿಗೆ ಸಿಗುವ ಯಃಕಶ್ಚಿತ್ ಸವಲತ್ತುಗಳನ್ನೂ ಅವರಿಗೆ ಜೈಲಿನಲ್ಲಿ ಕೊಡುತ್ತಿಲ್ಲವೆಂದೂ ಹೇಳಲಾಗಿದೆ.

ಈ ಎಲ್ಲಾ ದಾರುಣ ಘಟನಾವಳಿಗಳ ಹಿನ್ನೆಲೆಯಲ್ಲಿ ಇಮ್ರಾನ್‌ರ ವಿರುದ್ಧವೇ ಹಲವು ವರ್ಷಗಳ ಕಾಲ ಕ್ರಿಕೆಟ್ ಮೈದಾನದಲ್ಲಿ ಸೆಣಸಿದ್ದರೂ, ಅವರ ಜೊತೆಗೆ ಉತ್ತಮ ಬಾಂಧವ್ಯ ಹೊಂದಿದ್ದ ವಿವಿಧ ರಾಷ್ಟ್ರಗಳ ಕ್ರಿಕೆಟ್ ತಂಡದ ಮಾಜಿ ನಾಯಕರು ಮತ್ತು ಆಟಗಾರರೆಲ್ಲಾ ತಮ್ಮ ಗೆಳೆಯನಿಗಾಗಿ ಈ ಮಾನವೀಯತೆಯನ್ನು ತೋರಿ ಪಾಕಿಸ್ತಾನ ಸರ್ಕಾರಕ್ಕೆ ಪತ್ರ ಬರೆದಿರುವುದು ಕ್ರೀಡಾಸ್ಪೂರ್ತಿಗೆ ಸಿಕ್ಕ ಗೆಲುವು .

ಈ ಪಾಕಿಸ್ತಾನವೆಂಬ ದೇಶವೇ ಒಂಥರಾ ವಿಚಿತ್ರ ! ತಮ್ಮದೇಶ ಕ್ರಿಕೆಟ್‌ನಲ್ಲಿ ಅದರಲ್ಲೂ ಭಾರತದ ವಿರುದ್ಧ ಗೆದ್ದರೆ ಅಲ್ಲಿ ಅವರನ್ನು ಸೂಪರ್ ಹೀರೋಗಳನ್ನಾಗಿ ಪೂಜಿಸುವ ಈ ಜನ ಒಂದೊಮ್ಮೆ ಪಾಕ್ ಸೋತರೆ ಅವರ ಆಟಗಾರರನ್ನು ಹತ್ಯೆ ಮಾಡಲೂ ಹೇಸುವುದಿಲ್ಲ . ಅವರಿಗೆ ತಮ್ಮ ದೇಶದ ಮೇಲಿನ ಅಭಿಮಾನಕ್ಕಿಂತ ಭಾರತದ ಮೇಲಿನ ದ್ವೇಷವೇ ಮುಖ್ಯ. ಈ ಕಾರಣಕ್ಕಾಗಿಯೇ ಅಲ್ಲಿ ಅಂದು ಸೂಪರ್ ಸ್ಟಾರ್ ಆಗಿ ಮೆರೆಯುತ್ತಿದ್ದವನು ಇಂದು ಒಮ್ಮೆಲೇ ವಿಲನ್ ಆಗಿ ಬಿಡುತ್ತಾನೆ , ಇಡೀ ದೇಶವೇ ಆರಾಧಿಸಲ್ಪಡುತ್ತಿದ್ದವನು ಮಾರನೆಯ ದಿನವೇ ಸ್ವಲ್ಪ ಯಾಮಾರಿದರೂ ಅವನನ್ನು ಕ್ಯಾಕರಿಸಿ ಉಗಿಯುವಂತೆ ಮಾಡುತ್ತಾರೆ. ಈ ಹಿಂದೆ ಇಮ್ರಾನ್ ಖಾನ್ ಗಿದ್ದ ಜನಪ್ರಿಯತೆ ಹೇಗಿತ್ತೆಂದರೆ ಅದರ ಬಲದಿಂದಲೇ ಆತ ದೇಶದ ಪ್ರಧಾನಿಯಾಗಿದ್ದ. ಆದರೆ ಭ್ರಷ್ಟಾಚಾರದ ಆರೋಪಗಳಿಗೆ ಸಿಕ್ಕು ಇಂದು ಜೈಲಿನಲ್ಲಿ ಒಬ್ಬ ಸಾಮಾನ್ಯ ಖೈದಿಗೂ ಸಿಗುವ ಸಾಮಾನ್ಯ ಮೂಲಭೂತ ಸವಲತ್ತುಗಳಿಂದಲೂ ಆತ ವಂಚಿತನಾಗಿರುವುದು ಸ್ವಯಂಕೃತಾಪರಾಧದ ಫಲ.

ಇದೆಲ್ಲಾ ಏನೇ ಆದರೂ ಇಮ್ರಾನ್ ನ ಹೆಸರು ಪಾಕಿಸ್ತಾನದ ಮಾಜಿ ಪ್ರಧಾನಿ ಅಂತಲ್ಲದಿದ್ದರೂ ವಿಶ್ವ ಕ್ರಿಕೆಟ್ ಇತಿಹಾಸದಲ್ಲಿ ಒಬ್ಬ ಸರ್ವ ಶ್ರೇಷ್ಠ ಆಲ್ ರೌಂಡರ್ ಆಗಿ ಅಚ್ಚಳಿಯದೇ ಉಳಿಯುತ್ತದೆ. ಈ ಕಾರಣದಿಂದಾಗಿಯೇ ಕ್ರಿಕೆಟ್ ನ ಮಾಜಿ ದಿಗ್ಗಜ ನಾಯಕರೆಲ್ಲರ ಮನಸ್ಸು ತಮ್ಮ ಸಮಕಾಲೀನ ಕ್ರಿಕೆಟರ್ ಗಾಗಿ ಮಿಡಿದು ಕೊನೇಪಕ್ಷ ಅವರನ್ನು ಮಾನವೀಯವಾಗಿ ನಡೆಸಿಕೊಳ್ಳುವುದರ ಜೊತೆಗೆ ಅವರ ಆರೋಗ್ಯ ಸುಧಾರಿಸುವ ಚಿಕಿತ್ಸೆ ವ್ಯವಸ್ಥೆ ಮಾಡಲಿಕ್ಕಾಗಿ ಸರ್ಕಾರಕ್ಕೆ ಒಟ್ಟಾಗಿ ಪತ್ರ ಬರೆದಿದ್ದಾರೆ .

ಬೇರೆಲ್ಲಾ ರಾಜಕೀಯ , ಸಿದ್ಧಾಂತ, ಧರ್ಮ, ಸೋಲು– ಗೆಲುವು, ಅಂತರಾಷ್ಟ್ರೀಯ ಸಂಬಂಧಗಳು....ಏನೇ ಇದ್ದರೂ ಅವೆಲ್ಲವನ್ನೂ ಮೀರಿದ ಅಂಶವೊಂದು ಇಮ್ರಾನ್ ಪರವಾಗಿ ಈ ಪತ್ರ ಬರೆಯುವಂತೆ ಪ್ರೇರೇಪಿಸಿದೆ. ಅದುವೇ......

**"ಮನುಷ್ಯತ್ವ, ಮಾನವೀಯತೆ ಹಾಗೂ ಕ್ರೀಡಾಧರ್ಮ " .!!**

**ಮರೆಯುವ ಮುನ್ನ:** ಎದುರಾಳಿ ಬ್ಯಾಟ್ಸ್ ಮನ್ ಗಳ ಗುಂಡಿಗೆಯನ್ನೇ ಅಲ್ಲಾಡಿಸಬಲ್ಲ ಬೆಂಕಿಯಂಥ ವೇಗದ ಬೌಲಿಂಗ್, ಚಾಣಾಕ್ಷ ನಾಯಕತ್ವ, ಅಸಾಧಾರಣ ಬ್ಯಾಟಿಂಗ್ ಹಾಗೂ ನೋಡಲು ಆರೂವರೆ ಅಡಿಯ ಮನ್ಮಥನಂತೇ ಇದ್ದ ಇಮ್ರಾನ್ ಖಾನ್ ತನ್ನ ಉತ್ತುಂಗದ ದಿನಗಳಲ್ಲಿ ಕಾಲ, ದೇಶ , ಧರ್ಮ ಎಲ್ಲವನ್ನೂ ಮೀರಿ ಭಾರತೀಯರೂ ಸೇರಿದಂತೆ ವಿಶ್ವದ ಎಲ್ಲಾ ಕ್ರಿಕೆಟ್ ಪ್ರೇಮಿಗಳೂ ಇಷ್ಟಪಡುತ್ತಿದ್ದ ಒಬ್ಬ ಅಪರೂಪದ ಐಕಾನ್ ಕ್ರಿಕೆಟರ್.

1992ರ ವಿಶ್ವಕಪ್ ಗೆದ್ದ ಮೇಲೆ ಭಾರತೀಯ ಮೂಲದ ತನ್ನ ತಾಯಿಯ ಹೆಸರಲ್ಲಿ ಕ್ಯಾನ್ಸರ್ ಆಸ್ಪತ್ರೆ ಕಟ್ಟಿಸಿ ತಮ್ನ ಸಾಮಾಜಿಕ ಜವಾಬ್ದಾರಿಯನ್ನು ಮೆರೆದಿದ್ದ. ಅಷ್ಟಕ್ಕೇ ನಿಲ್ಲದೇ ಹೊಸಪಕ್ಷ ಕಟ್ಟಿ ರಾಜಕೀಯ ಅಖಾಡಕ್ಕಿಳಿದ ಇಮ್ರಾನ್ ಪ್ರಧಾನಿಯೂ ಆಗಿ ತನ್ನ ಜೀವನದ ಉತ್ತುಂಗ ಸ್ಥಿತಿಗೆ ತಲುಪಿದ್ದ. ಆದರೆ ಎರಡೇ ವರ್ಷಗಳಲ್ಲಿ ಭ್ರಷ್ಟಾಚಾರದ ಆರೋಪಕ್ಕೆ ಸಿಲುಕಿ ತನ್ನ ಒಟ್ಟೂ ಸಾಧನೆಯನ್ನೇ ಮಣ್ಣುಪಾಲು ಮಾಡಿಕೊಂಡಿದ್ದು ಬದುಕಿನ ಅನಿಶ್ಚಿತತೆಗೆ ಹಾಗೂ ಜಗತ್ತಿನ ಎಂಥವರನ್ನೂ ಬಿಡದ ಹೆಣ್ಣು–ಹೊನ್ನು –ಮಣ್ಣಿನ ದೌರ್ಬಲ್ಯಗಳಿಗೆ ಬಲಿಯಾದ ಸ್ಥಿತಿಗೆ ಹಿಡಿದ ಕನ್ನಡಿಯಂತಿದೆ.

ನೆನಪಿಡಿ, ಪಾಕ್ ಸರ್ಕಾರಕ್ಕೆ ಮಾನವೀಯತೆ, ಕ್ರೀಡಾಸ್ಪೂರ್ತಿ, ಕ್ರೀಡಾ ಧರ್ಮ ಇವುಗಳ ಆಧಾರದಲ್ಲಿ ಪತ್ರ ಬರೆದಿರುವ ಮಾಜಿ ನಾಯಕರು, ಇಮ್ರಾನ್ ರ ಆರೋಗ್ಯ ಕ್ಷೀಣಿಸದಂತೆ ಅಪ್ಪಟ ಮಾನವೀಯ ನೆಲೆಯಲ್ಲಿ ಜೈಲಿನಲ್ಲಿ ಸೂಕ್ತ ಚಿಕಿತ್ಸೆಯ ಸೌಲಭ್ಯ ಕೊಡಿ ಎಂದಷ್ಟೇ ಕೇಳಿದ್ದಾರೆಯೇ ವಿನಃ ಅವರನ್ನು ಭ್ರಷ್ಟಾಚಾರದ ಆರೋಪದಿಂದ ಮುಕ್ತರನ್ನಾಗಿಸಿ ಬಿಡುಗಡೆ ಮಾಡಿ ಎಂದಲ್ಲ. ! ಅಲ್ಲಿಗೆ ಅವರ ಪ್ರಾಮಾಣಿಕ ಕಳಕಳಿ ಅರ್ಥಮಾಡಿಕೊಳ್ಳಬಹುದು.

ಕೊನೇಪಕ್ಷ ಈ ಜಾಗತಿಕ ಕ್ರಿಕೆಟ್ ಲೆಜೆಂಡುಗಳ ಒತ್ತಡಕ್ಕೆ ಮಣಿದಾದರೂ ಪಾಕಿಸ್ತಾನ ಸರ್ಕಾರ ಇಮ್ರಾನ್ ರನ್ನು ಸಾಮಾನ್ಯ ಕನಿಷ್ಠ ಗೌರವಯುತವಾಗಿ ನಡೆಸಿಕೊಳ್ಳಲಿ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,